ಸಂಪುಟ: 06 ಸಂಚಿಕೆ: 188 ಪುಟಗಳು: 08 ಬುಧವಾರ 23 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 + 91 8035621249 ₹5

**ಮುಂಜಾನೆ ಮಾತು**

ಮಾತು ಮನವನ್ನು
ಬದುಕಿಸುವಂತಿರಬೇಕು ನೋಟ
ಮನಸ್ಸಿಗೆ ಶಾಂತಿ ನೀಡುವಂತಿರಬೇಕು
ಮಾಡುವ ಕೆಲಸ ತನ್ನಾತ್ಮಕ್ಕೆ ಮೆಚ್ಚುಗೆ
ಆಗುವಂತಿರಬೇಕು ಬದುಕಿದರೆ ಬದುಕೇ
ನಮ್ಮ ನೋಡಿ ಸಂಭ್ರಮಿಸಬೇಕು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸೆ. 24ರಂದು ಡಿಕೆಶಿ ಮೋದಿ ಭೇಟಿ



• ಉದಯವಾಹಿನಿ, ಬೆಂಗಳೂರು

ಇದೇ 24 ರಂದು ಸಿಎಂ ಡಿಕೆ ಶಿವಕುಮಾರ್ ದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಲಿದ್ದಾರೆ. ರಾಜ್ಯದಲ್ಲಿ ತಲೆದೋರಿರುವ ತೀವ್ರ ಬರ ಪರಿಸ್ಥಿತಿ ಹಾಗೂ ಪಶ್ಚಿಮ ಘಟ್ಟ ಸಂರಕ್ಷಣೆ ಕುರಿತ ಕಸ್ತೂರಿ ರಂಗನ್ ವರದಿಯ ವಿಚಾರದಲ್ಲಿ ಈ ಭೇಟಿ ಅತ್ಯಂತ ಮಹತ್ವ ಪಡೆದುಕೊಂಡಿದೆ. ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ ಮಳೆಯ ಕೊರತೆಯಿಂದ ಭೀಕರ ಬರಗಾಲ ಆವರಿಸಿದ್ದು, ರೈತರು ಕಂಗಾಲಾಗಿದ್ದಾರೆ. ಈ ನಿಟ್ಟಿನಲ್ಲಿ ಕೇಂದ್ರದಿಂದ ತ್ವರಿತವಾಗಿ ಪರಿಹಾರ ನಿಧಿ ಬಿಡುಗಡೆ ಮಾಡುವಂತೆ ಹಾಗೂ ಬೆಳೆ ನಷ್ಟಕ್ಕೆ ಅಗತ್ಯ ನೆರವು ಕಲ್ಪಿಸುವಂತೆ ಪ್ರಧಾನಿಯವರಿಗೆ ವಿಸ್ತೃತ ಮನವಿ ಸಲ್ಲಿಸಲಿದ್ದಾರೆ. ಪಶ್ಚಿಮ ಘಟ್ಟ ವ್ಯಾಪ್ತಿಯ ಜನವಸತಿ ಮತ್ತು ಕೃಷಿ ಭೂಮಿಗೆ ಧಕ್ಕೆಯಾಗುವಂತೆ ಕಸ್ತೂರಿ ರಂಗನ್ ವರದಿ ಜಾರಿಗೆ ಮುಂದಾಗಿರುವುದಕ್ಕೆ ರಾಜ್ಯಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ವಿಧಾನಮಂಡಲದ ವಿಶೇಷ ಅಧಿವೇಶನದಲ್ಲಿ ಅಂಗೀಕರಿಸಲಾದ ವಿರೋಧ ನಿರ್ಣಯದ ಪ್ರತಿಯನ್ನು ಪ್ರಧಾನಿಯವರಿಗೆ ಹಸ್ತಾಂತರಿಸಿ, ಪರಿಸರ ಸೂಕ್ಷ್ಮ ವಲಯದ ಅಧಿಸೂಚನೆಯನ್ನು ಕೈಬಿಡುವಂತೆ ಸಿಎಂ ಒತ್ತಾಯಿಸಲಿದ್ದಾರೆ.

## ವಂದೇ ಮಾತರಂ ಅರ್ಧಕ್ಕೆ ಕಡಿತ ಆದೇಶ ಮರುಪರಿಶೀಲನೆಗೆ ಸೂಚಿಸಿ, ಸರ್ಕಾರಕ್ಕೆ ಗೆಹ್ಲೋಟ್ ಪತ್ರ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಆಕ್ಷೇಪ ವ್ಯಕ್ತಪಡಿಸಿದ್ದು, ಈ ನಿರ್ಧಾರವನ್ನು ಮರುಪರಿಶೀಲಿಸುವಂತೆ ಸರ್ಕಾರಕ್ಕೆ ನಾಲ್ಕು ಪುಟಗಳ ಪತ್ರ ಬರೆದಿದ್ದಾರೆ. ಪತ್ರದಲ್ಲಿ, ರಾಜ್ಯ ಸರ್ಕಾರದ ಈ ನಿರ್ಧಾರವು ಕೇಂದ್ರ ಗೃಹ ಸಚಿವಾಲಯದ ಮಾರ್ಗದರ್ಶಿ ಸೂತ್ರಗಳಿಗೆ ಮತ್ತು 'ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ (ತಿದ್ದುಪಡಿ) ಕಾಯ್ದೆ, 2026'ರ ನಿಯಮಗಳಿಗೆ ವಿರುದ್ಧವಾಗಿದೆ ಎಂದು ರಾಜ್ಯಪಾಲರು ಉಲ್ಲೇಖಿಸಿದ್ದಾರೆ. ಸಂವಿಧಾನದ ವಿಧಿ 162, 256 ಮತ್ತು 257(1)ರ ಪ್ರಕಾರ ರಾಜ್ಯಗಳು ಕೇಂದ್ರದ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗುತ್ತದೆ. ಯಾವುದೇ ಪ್ರತ್ಯೇಕ ನಿರ್ಧಾರ ತೆಗೆದುಕೊಳ್ಳುವುದು ಸಂವಿಧಾನಾತ್ಮಕ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ರಾಷ್ಟ್ರೀಯ ಸಂಕೇತಗಳ ವಿಷಯದಲ್ಲಿ ಏಕರೂಪತೆ ಮತ್ತು ಗೌರವವನ್ನು ಕಾಯ್ದುಕೊಳ್ಳಬೇಕು. ಈ ವಿಷಯದಲ್ಲಿ ಅನಗತ್ಯ ಕಾನೂನು ತೊಡಕುಗಳನ್ನು ತಪ್ಪಿಸಲು ಕೇಂದ್ರ ಸರ್ಕಾರದ ಪ್ರಸ್ತುತ ನೀತಿಯನ್ನೇ ಅನುಸರಿಸಬೇಕು ಎಂದು ಸಲಹೆ ನೀಡಿದ್ದಾರೆ. ರಾಜ್ಯ ಸರ್ಕಾರ ಸೆಪ್ಟೆಂಬರ್ 8ರಂದು ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಆದೇಶಕ್ಕೆ ಹೊರಡಿಸಿತ್ತು.

## ಡಿಸಿಪಿ ಯೋಗೇಶ್ ಮೇಲೆ ಸಿದ್ದರಾಮಯ್ಯ ಗರಂ

• ಉದಯವಾಹಿನಿ, ಬೆಂಗಳೂರು

ವಿಧಾನಸಭೆ ಕಲಾಪ ಮುಗಿಸಿ ನಿರ್ಗಮಿಸುತ್ತಿದ್ದ ವೇಳೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧ ಡಿಸಿಪಿ ಯೋಗೇಶ್ ಮೇಲೆ ಗರಂ ಆಗಿದ್ದಾರೆ. ವಿಧಾನಸೌಧದ ಪಶ್ಚಿಮ ದ್ವಾರದ ಬಳಿ ಮೆಟ್ಟಿಲು ಇಳಿದು ಬಂದು ಕಾರು ಹತ್ತಲು ಸಿದ್ದರಾಮಯ್ಯ ತೆರಳಿದ್ದರು. ಆದರೆ, ಕೆಂಗಲ್ ದ್ವಾರದ ಬಳಿ ನಿಲ್ಲಿಸಿದ್ದ ಅವರ ಕಾರನ್ನು ಡಿಸಿಪಿ ಯೋಗೇಶ್ ಅಲ್ಲಿಂದ ತೆಗೆಸಿ ಪಾರ್ಕಿಂಗ್‌ಗೆ ಕಳುಹಿಸಿದ್ದರು. ಹೀಗಾಗಿ ಕೆಂಗಲ್ ದ್ವಾರದ ಬಳಿ ಸಿದ್ದರಾಮಯ್ಯ ಕಾರಿಗಾಗಿ ಕಾಯಬೇಕಾಗಿತ್ತು. ಕಾರು ಅಲ್ಲಿಲ್ಲದಿರುವುದನ್ನು ಕಂಡು ಆಕ್ರೋಶಗೊಂಡ ಸಿದ್ದರಾಮಯ್ಯ ಅವರು, ತಕ್ಷಣವೇ ಡಿಸಿಪಿ ಯೋಗೇಶ್ ಅವರನ್ನು ಕರೆದು ಯಾಕೆ ಕಾರು ತೆಗೆಸಿದ್ದು? ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. ಇದೇ ವೇಳೆ ನಿನ್ನ ಮೇಲೆ ಬಹಳ ಆರೋಪಗಳಿವೆ, ಶಾಸಕರನ್ನ ಸರಿಯಾಗಿ ನಡೆಸಿಕೊಳ್ತಿಲ್ಲ ಎಂಬ ದೂರುಗಳಿವೆ, ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ಕಿಡಿಕಾರಿದ್ದಾರೆ. ಕಾರು ತೆಗೆಸಿದ್ದಕ್ಕೆ ಸಿದ್ದರಾಮಯ್ಯ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆಗೂ ವಿಚಾರ ಮುಟ್ಟಿಸಿ ಕಿಡಿಕಾರಿದ್ದಾರೆ. ಡಿಸಿಪಿ ಯೋಗೇಶ್ ಅವರು ಸಾರಿ ಸರ್ ಎಂದು ಕ್ಷಮೆ ಕೋರಿದ್ದಾರೆ.

## ಕರ್ನಾಟಕ ಸೇರಿ 28 ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ: ಅ.23ರಂದು ಮತದಾನ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳ ವಿಧಾನ ಪರಿಷತ್‌ನ 28 ಸ್ಥಾನಗಳಿಗೆ ಚುನಾವಣೆ ನಡೆಸಲು ಚುನಾವಣಾ ಆಯೋಗ ದಿ.ಪ್ರಕಟಿಸಿದೆ. ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ ,ಕರ್ನಾಟಕದಲ್ಲಿ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಸೆ.29ರಂದು ಅಧಿಸೂಚನೆ ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಅ.6 ಕೊನೆಯ ದಿನವಾಗಿದ್ದು, ಅ.7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅಭ್ಯರ್ಥಿಗಳು ಅ.9ರವರೆಗೆ ನಾಮಪತ್ರ ಹಿಂಪಡೆಯಬಹುದು. ಬಳಿಕ ಅ.23ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅ.27ರಂದು ಮತ ಎಣಿಕೆ ನಡೆಯಲಿದೆ. ಸಂಬಂಧಿತ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಲ್ಲಿ ಮಾದರಿ ನೀತಿ ಸಂಹಿತೆ ತಕ್ಷಣದಿಂದಲೇ ಜಾರಿಗೆ ಬಂದಿದೆ ಎಂದು ಆಯೋಗ ತಿಳಿಸಿದೆ. .

ಸದನದಲ್ಲಿ ಗದ್ದಲ ಹೆಚ್ಚಾಗುತ್ತಿದ್ದಂತೆ ಸಭಾಪತಿ ಸಲೀಂ ಅಹದ್ ಅವರು ಪೀಠದಿಂದ ಎದ್ದು ನಿಂತು ಸದಸ್ಯರನ್ನು ಶಾಂತಗೊಳಿಸಲು ಮುಂದಾದರು. ಸದಸ್ಯರ ವರ್ತನೆಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಇದೇನು ಫಿಶ್ ಮಾರ್ಕೆಟ್ಟಾ ?ಎಂದು ಪ್ರಶ್ನಿಸಿದರು. ಇದಕ್ಕೆ ಬಿಜೆಪಿ ಸದಸ್ಯ ಕೇಶವ ಪ್ರಸಾದ್ ತಿರುಗೇಟು ನೀಡಿ, ಫಿಶ್ ಮಾರ್ಕೆಟ್ ವ್ಯವಸ್ಥೆ ಮಾಡಿದ್ದು ನೀವೇ ಎಂದು ಆಕ್ಷೇಪಿಸಿದರು. ಮಾತನಾಡಲು ಅವಕಾಶ ಮಾಡಿಕೊಟ್ಟಿರುವುದರಿಂದಲೇ ಇಂತಹ ಪರಿಸ್ಥಿತಿ ಉಂಟಾಗಿದೆ ಎಂದು ಅವರು ಸಭಾಪತಿಯನ್ನು ಪ್ರಶ್ನಿಸಿದರು. ಗದ್ದಲ ನಿಯಂತ್ರಿಸಲು ಮತ್ತೊಮ್ಮೆ ಮನವಿ ಮಾಡಿದ ಸಭಾಪತಿ ಸಲೀಂ ಅಹದ್, ಜನ ನಮನ್ನು ನೋಡುತ್ತಿದ್ದಾರೆ. ಗೌರವದಿಂದ ವಿಚಾರ ಚರ್ಚೆ ಮಾಡಿ. ಒಬ್ಬರಿಗೊಬ್ಬರು ಅಗೌರವ ತರುವಂತೆ ನಡೆದುಕೊಳ್ಳಬೇಡಿ ಎಂದು ಸದಸ್ಯರಿಗೆ ಸೂಚಿಸಿದರು.ಬಳಿಕ ಸದಸ್ಯರು ತಮ ಸ್ಥಾನಗಳಲ್ಲಿ ಕುಳಿತುಕೊಂಡಿದ್ದು, ಸದನದ ಕಲಾಪ ಮತ್ತೆ ಸಹಜ ಸ್ಥಿತಿಗೆ ಮರಳಿತು. ನಂತರ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಮ ಬರ ಚರ್ಚೆಯನ್ನು ಮುಂದುವರಿಸಿದರು.

# ಸದನದಲ್ಲಿ ಜಟಾಪಟಿ ಕಮಲ ಚಾಟಿ

ಇದೇ ವೇಳೆ ಬಿಜೆಪಿ ಎಂಎಲ್‌ಸಿ ರವಿಕುಮಾರ್ ಸೇರಿದಂತೆ ಕೆಲ ಸದಸ್ಯರು ತೃತೀಯ ಭಾಷೆ ಸೇರಿದಂತೆ ಇತರ ವಿಷಯಗಳ ಚರ್ಚೆಗೆ ಅವಕಾಶ ನೀಡುವಂತೆ ಒತ್ತಾಯಿಸಿದರು. ಆದ್ರೆ, ಪ್ರಸ್ತುತ ಅಧಿವೇಶನವನ್ನ ಬರದ ಪರಿಸ್ಥಿತಿ ಕುರಿತು ಚರ್ಚಿಸಲು ಕರೆಯಲಾಗಿದೆ. ಹೀಗಾಗಿ ಬೇರೆ ವಿಷಯಗಳ ಚರ್ಚೆಗೆ ಅವಕಾಶ ನೀಡಲು ಸಾಧ್ಯವಿಲ್ಲ ಎಂದು ಸಭಾಪತಿ ತಿಳಿಸಿದರು. ಬರದ ಬಗ್ಗೆ ಮಾತ್ರ ಚರ್ಚೆ ನಡೆಯಬೇಕು ಎಂದು

### ಬರದ ವಿಚಾರ ಮಾತ್ರ ಚರ್ಚೆಗೆ ಒತ್ತಾಯ

ಸಚಿವರಾದ ಯತೀಂದ್ರ ಸಿದ್ದರಾಮಯ್ಯ, ಸಂತೋಷ್ ಲಾಡ್ ಹಾಗೂ ಡಿಸಿಎಂ ಜಿ. ಪರಮೇಶ್ವರ್ ಒತ್ತಾಯಿಸಿದರು.



ಸದನವನ್ನು ಉದ್ದೇಶಿಸಿ ಮಾತನಾಡಿದ ಡಿಸಿಎಂ ಜಿ. ಪರಮೇಶ್ವರ್, ವಿಶೇಷ ಅಧಿವೇಶನ ಕರೆಯಲು ಎರಡು ಪ್ರಮುಖ ಕಾರಣಗಳಿವೆ ಎಂದು ತಿಳಿಸಿದರು. ಕಸ್ತೂರಿ ರಂಗನ್ ವರದಿಗೆ ರಾಜ್ಯದ ಅಭಿಪ್ರಾಯ ಸಲ್ಲಿಸಬೇಕಿದೆ. ಈ ವಿಚಾರದಲ್ಲಿ ಪಕ್ಷಾತೀತವಾಗಿ ಸದಸ್ಯರ ಅಭಿಪ್ರಾಯ ಪಡೆಯುವುದು ಮುಖ್ಯ.

ಮತ್ತೊಂದೆಡೆ ಕರ್ನಾಟಕದಲ್ಲಿ ಭೀಕರ ಬರಗಾಲ ಎದುರಾಗಿದೆ. ಇಡೀ ರಾಜ್ಯ ಬರದಿಂದ ತತ್ತರಿಸಿದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ನೆರವು ನೀಡಬೇಕು. ಈ ವಿಚಾರವನ್ನು ಸದನದಲ್ಲಿ ಚರ್ಚಿಸಬೇಕಿದೆ. ಈ ಎರಡು ವಿಷಯಗಳನ್ನು ಹೊರತುಪಡಿಸಿ ಬೇರೆ ಯಾವುದೇ ವಿಚಾರಗಳ ಚರ್ಚೆಗೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿದರು.

• ಉದಯವಾಹಿನಿ, ಬೆಂಗಳೂರು

ವಿಶೇಷ ಅಧಿವೇಶನ ಎರಡನೇ ದಿನವಾದ ಇಂದು ರಾಜ್ಯದಲ್ಲಿ ಎದುರಾಗಿರುವ ಭೀಕರ ಬರಗಾಲ ಬಗ್ಗೆ ಚರ್ಚೆ ನಡೆಯಿತು. ಬರ ನಿರ್ವಹಣೆ ಸಂಬಂಧ ಕೈಗೊಂಡಿರುವ ಬಗ್ಗೆ ಸರ್ಕಾರ ಸಮರ್ಥಿಸಿಕೊಂಡರೆ, ವಿಪಕ್ಷಗಳು ಬರಪರಿಸ್ಥಿತಿ ಎದುರಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದವು. ಉಪಮುಖ್ಯಮಂತ್ರಿ ಜಿ.ಪರಮೇಶ್ವರ್ ಮಾತನಾಡಿ, ಈಗಾಗಲೇ ಈಗಾಗಲ 123 ತಾಲ್ಲೂಕುಗಳನ್ನ ಬರ ಘೋಷಿಸಲಾಗಿದ್ದು, ಈ ಸಾಲಿಗೆ ಇನ್ನೂ 53 ತಾಲ್ಲೂಕುಗಳನ್ನ ಸೇರಿಸಲಾಗುವುದು. ಬರ ಅಧ್ಯಯನ ಪರಿಶೀಲನೆ ನಡೆಸಲಾಗುತ್ತಿದ್ದು, ಸುಮಾರು 210ರವರೆಗೆ ಸೇರಲಿದೆ. ಮೊದಲ ಹಂತದ 101 ತಾಲ್ಲೂಕುಗಳಲ್ಲಿ ಬರ ಎದುರಾಗಿರುವ ಕುರಿತು ಪರಿಹಾರವಾಗಿ 18 ಸಾವಿರ ಕೋಟಿ ಪರಿಹಾರ ನೀಡುವಂತೆ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಮುಂದಿನ ದಿನಗಳಲ್ಲಿ ಅಂತಿಮ ವರದಿ ಸಲ್ಲಿಸಿ ಸರ್ವಪಕ್ಷ ನಿಯೋಗ ಕರೆದುಕೊಂಡು ಅನುದಾನಕ್ಕೆ ಮನವಿ ಸಲ್ಲಿಸಲು ಮುಂದಾಗುತ್ತೇವೆ ಎಂದರು.

ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಬರಗಾಲ ಬರಲಿದೆ ಎಂದು ಮೊದಲೇ ಮೂನ್ಸೂಚನೆ ಸಿಕ್ಕಿದ್ದರೂ ಮುಂಜಾಗ್ರತಾ ಕ್ರಮ ಕೈಗೊಳ್ಳದೇ ಸರ್ಕಾರ ಮೌನ ವಹಿಸುವ ಮೂಲಕ ನಿರ್ಲಕ್ಷ್ಯ ತೋರಿದೆ. ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಎಲ್ಲೆಂದರಲ್ಲಿ ಕೊಳವೆಬಾವಿ ಕೊರೆತದಿಂದ ನೀರಿನ ಮೂಲ ಕಳೆದುಕೊಳ್ಳುತ್ತಿದ್ದೇವೆ. ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಸೇರಿದಂತೆ ಕೆಲವೆಡೆ 2 ಸಾವಿರ ಅಡಿಗಿಂತ ಹೆಚ್ಚು ಬೋರ್‌ವೆಲ್ ಕೊರೆದರೂ ನೀರು ಬರುತ್ತಿಲ್ಲ. ಮಳೆ ಕೊರತೆಯಿಂದ ಬೆಳೆ ನಾಶವಾಗಿದೆ. ಸರ್ಕಾರ ಬರಪೀಡಿತ ಎಂದು ಘೋಷಿಸಿದ್ದರೂ ಪರಿಹಾರ ನೀಡದೆ, ಕೇಂದ್ರಕ್ಕಾಗಿ ಮೊರೆ ಹೋಗುತ್ತಿರುವುದು ಸರಿಯಲ್ಲ ಎಂದು ಕಿಡಿಕಾರಿದರು.

ಚರ್ಚೆ ವೇಳೆ ಸಾಲಮನ್ನಾ ವಿಚಾರವಾಗಿ ಮಾತನಾಡಿದ ಬಿಜೆಪಿ ಸದಸ್ಯ ರವಿಕುಮಾರ್, ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ 72 ಸಾವಿರ ಕೋಟಿ ಸಾಲಮನ್ನಾ ಮಾಡಿರುವುದು ಸ್ವಾಗತಾರ್ಹ. ಪ್ರಧಾನಿ ಮೋದಿ ಅವರು ರೈತರ ಅಕೌಂಟ್‌ಗಳಿಗೆ 14.50 ಲಕ್ಷ ಕೋಟಿ ಹಣ ಹಾಕಿದ್ದಾರೆ ಎಂದರು. ಆಕ್ಷೇಪಿಸಿದ ಕಾಂಗ್ರೆಸ್ ಸದಸ್ಯರು, 15 ಪೈಸೆಯು ಹಾಕಿಲ್ಲ ಎಂದರು. ಇದೇ ವಿಚಾರವಾಗಿ ಆಡಳಿತ ಹಾಗೂ ವಿಪಕ್ಷ ಸದಸ್ಯರ ನಡುವೆ ಆರೋಪ-ಪ್ರತ್ಯಾರೋಪಕ್ಕೆ ಕಾರಣವಾಯಿತು. ಸದಸ್ಯರ ವರ್ತನೆಗೆ ಬೇಸತ್ತ ಸಭಾಪತಿ ಸಲೀಂ ಅಹಮದ್, ಇದೇನು ಫಿಶ್ ಮಾರ್ಕೆಟೇ ಎಂದು ಪ್ರಶ್ನಿಸಿದರು. ಒಬ್ಬರಿಗೊಬ್ಬರು ಅಗೌರವ ತರುವ ರೀತಿ ವರ್ತಿಸಬೇಡಿ. ಜನರು ನಮ್ಮನ್ನ ನೋಡುತ್ತಿದ್ದಾರೆ ಅಂತ ಎದ್ದು ನಿಂತು ಮನವಿ ಮಾಡಿದರು. ಸದನ ತಹಬದಿಗೆ ಬರುತ್ತಿದ್ದಂತೆ ಛಲವಾದಿ ನಾರಾಯಣಸ್ವಾಮಿ ಚರ್ಚೆ ಮುಂದುವರೆಸುತ್ತಿದ್ದಂತೆ, ಆಡಳಿತ ಪಕ್ಷದ ಸದಸ್ಯರು ಚರ್ಚೆಗೆ ಪದೇ ಪದೇ ಅಡ್ಡಿಪಡಿಸುತ್ತಿರುವುದನ್ನ ಆಕ್ಷೇಪಿಸಿ ತಮ್ಮ ಚರ್ಚೆ ಮೊಟಕುಗೊಳಿಸಿದ್ದಲ್ಲದೇ ಸರ್ಕಾರದ ವಿರುದ್ಧ ಘೋಷಣೆ ಕೂಗಿಕೊಂಡು ಸದನದಿಂದ ಹೊರ ನಡೆದು ಸಭಾತ್ಯಾಗ ಮಾಡಿದರು. ಗದ್ದಲದ ಹಿನ್ನೆಲೆ ಕಲಾಪವನ್ನ ಸಭಾಪತಿಗಳು 10 ನಿಮಿಷ ಮುಂದೂಡಿದರು.

ಕರ್ನಾಟಕದಲ್ಲಿ ಈ ಬಾರಿ ಅತ್ಯಂತ ಭೀಕರ ಬರ ಪರಿಸ್ಥಿತಿ ನಿರ್ಮಾಣವಾಗಿದೆ. 2023ರಲ್ಲಿ ಬರಗಾಲ ಬಂದಿತ್ತು. ಆಗ 124 ವರ್ಷಗಳ ಬಳಿಕ ಇಂತಹ ಬರ ಬಂದಿತ್ತು. ಆದರೆ ಈ ಬಾರಿ 150 ವರ್ಷಗಳ ಹಿಂದಿನ ಬರಗಾಲಕ್ಕೆ ಹೋಲಿಕೆ ಮಾಡಲಾಗುತ್ತಿದೆ. 1876 ರಲ್ಲಿ ಕಂಡುಬಂದಿದ್ದಂತಹ ಭೀಕರ ಬರಗಾಲದ ಪರಿಸ್ಥಿತಿ ರಾಜ್ಯದಲ್ಲಿ ನಿರ್ಮಾಣವಾಗಿದೆ. ಸೂಪರ್ ಎಲ್‌ನಿನೋ ಪರಿಣಾಮದಿಂದ ರಾಜ್ಯದಲ್ಲಿ ಈ ಬಾರಿ ಮಳೆಯ ಕೊರತೆ ಉಂಟಾಗಿದೆ ಎಂದು ಪರಮೇಶ್ವರ್ ಸದನದಲ್ಲಿ ತಿಳಿಸಿದರು. ಇನ್ನೂ ರಾಜ್ಯದಲ್ಲಿ ವಾಡಿಕೆಯಂತೆ 852 ಮಿ.ಮೀ. ಮಳೆಯಾಗಬೇಕಿತ್ತು. ಆದರೆ ಈ

### 150 ವರ್ಷಗಳ ಹಿಂದಿನ ಬರಗಾಲಕ್ಕೆ ಹೋಲಿಕೆ

ಬಾರಿ ಕೇವಲ 642 ಮಿ.ಮೀ. ಮಳೆಯಾಗಿದೆ. ಜೂನ್‌ನಿಂದ ಇದುವರೆಗೆ ಶೇ.36ರಷ್ಟು ಮಳೆ ಕೊರತೆಯಾಗಿದೆ. ಮಳೆ ಕೊರತೆಯಿಂದ ಬಿತ್ತನೆಗೆ ತೀವ್ರ ಹಾನಿಯಾಗಿದ್ದು, ಇತಿಹಾಸದಲ್ಲೇ ಇಂತಹ ಪ್ರಮಾಣದ ಬೆಳೆ ನಾಶವಾಗಿರಲಿಲ್ಲ ಎಂದು ಡಿಸಿಎಂ ಮಾಹಿತಿ ನೀಡಿದರು. ರಾಜ್ಯದಲ್ಲಿ ಹಂತ ಹಂತವಾಗಿ ಬರಪೀಡಿತ ತಾಲ್ಲೂಕುಗಳನ್ನ ಘೋಷಣೆ ಮಾಡಲಾಗುತ್ತಿದೆ. ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನ ಬರಪೀಡಿತ ಎಂದು ಘೋಷಿಸಲಾಗಿತ್ತು. ಬಳಿಕ 23 ತಾಲ್ಲೂಕುಗಳನ್ನ 2ನೇ ಹಂತದಲ್ಲಿ ಸೇರಿಸಲಾಯಿತು. ಇದೀಗ ಮತ್ತೆ 53 ತಾಲ್ಲೂಕುಗಳನ್ನ ಬರಪೀಡಿತ ಎಂದು ಘೋಷಿಸಲಾಗುತ್ತಿದೆ. ಇದರೊಂದಿಗೆ ಒಟ್ಟು 177 ತಾಲ್ಲೂಕುಗಳು ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರ್ಪಡೆಯಾಗಿವೆ. ಇನ್ನೂ ಸುಮಾರು 20ತಾಲ್ಲೂಕುಗಳನ್ನ ಬರಪೀಡಿತ ಎಂದು ಘೋಷಿಸುವ ಸಾಧ್ಯತೆಯಿದ್ದು, ಒಟ್ಟಾರೆ 200 ತಾಲ್ಲೂಕುಗಳು ಬರಪೀಡಿತ ಎಂದು ಘೋಷಣೆಯಾಗಬಹುದು ಎಂದು ಪರಮೇಶ್ವರ್ ಮಾಹಿತಿ ನೀಡಿದರು.

1 ಬರ ಕುರಿತ ತೀವ್ರ ಚರ್ಚೆ

2 ಆಡಳಿತ -ಪ್ರತಿಪಕ್ಷ ಸದಸ್ಯರ ಆರೋಪ

3 ಪ್ರತ್ಯಾರೋಪಕ್ಕೆ ವೇದಿಕೆಯಾದ ಮೇಲ್ಮನೆ

4 ಒಟ್ಟು 200 ತಾಲ್ಲೂಕು ಬರ ಪೀಡಿತ ಎಂದು ಘೋಷಣೆ ಆಗಲಿದೆ ಪರಂ ಮಾಹಿತಿ





### ಸದನ ಕದನ

### ಗದಗ ತಾಲ್ಲೂಕು ಪಟ್ಟಿಯಲ್ಲಿದೆಯೇ? ಸಿಟಿ ರವಿ ಪ್ರಶ್ನೆ

ಈ ವೇಳೆ 53 ತಾಲ್ಲೂಕುಗಳ ಪಟ್ಟಿಯಲ್ಲಿ ಗದಗ ಜಿಲ್ಲೆ ಇದೆಯೇ ಎಂದು ಸಿಟಿ ರವಿ ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಪರಮೇಶ್ವರ್, ಗದಗ ಕೂಡ ಪಟ್ಟಿಯಲ್ಲಿ ಇದೆ ಎಂದು ಸ್ಪಷ್ಟಪಡಿಸಿದರು. ಬರಪೀಡಿತ ತಾಲ್ಲೂಕುಗಳ ಘೋಷಣೆ ವಿಚಾರದಲ್ಲೂ ಸದನದಲ್ಲಿ ಮಾತಿನ ಚಕಮಕಿ ನಡೆಯಿತು. ಬರ ಎಂದು ಘೋಷಣೆ ಮಾಡದೇ ಹೋದರೆ ನಿಮ್ಮ ಶಾಸಕರು ರಾಜೀನಾಮೆ ನೀಡುತ್ತೇವೆ ಎಂದು ಹೇಳಿದ್ದಾರೆ. ರಾಜೀನಾಮೆ ನೀಡುವ ಬೆದರಿಕೆ ಹಾಕಿದಾಗ ಮಾತ್ರ ಬರ ಎಂದು ಘೋಷಣೆ ಮಾಡಬೇಕೇ? ಬರದ ವಿಚಾರದಲ್ಲೂ ರಾಜಕೀಯ ಮಾಡಬೇಕೇ ಎಂದು ಸಿಟಿ ರವಿ ಪ್ರಶ್ನಿಸಿದರು.

ಈ ವೇಳೆ ಮಾಜಿ ಬಸವರಾಜ ಹೊರಟ್ಟಿ ಕೂಡ ಚರ್ಚೆಗೆ ಸೇರಿಕೊಂಡರು. ಹೆಚ್.ಕೆ ಪಾಟೀಲ್ ಅವರ ರಾಜೀನಾಮೆ ವಿಚಾರವನ್ನು ಉಲ್ಲೇಖಿಸಿ ಡಿಸಿಎಂ ಪರಮೇಶ್ವರ್ ಅವರ ಕಾಲೆಳೆದ ಹೊರಟ್ಟಿ, ಒಬ್ಬ ಶಾಸಕನನ್ನೂ ಕಳೆದುಕೊಳ್ಳಬೇಡಿ ಎಂದು ಟಾಂಗ್ ಕೊಟ್ಟರು.

## ನಕಲಿ ಔಷಧಿಗಳ ಜಾಲ ನಿಯಂತ್ರಣಕ್ಕೆ ಮಾರ್ಗಸೂಚಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ನಕಲಿ ಔಷಧಿಗಳ ಜಾಲ ನಿಯಂತ್ರಣಕ್ಕೆ ಕೇಂದ್ರ ಔಷಧ ನಿಯಂತ್ರಣ ಇಲಾಖೆ ಮಹತ್ವದ ಮಾರ್ಗಸೂಚಿ ಪ್ರಕಟಿಸಿದೆ. ವೈದ್ಯರಿಗೆ, ಫಾರ್ಮಾಸಿಸ್ಟ್, ರಿಟೇಲರ್, ಡಿಸ್ಟ್ರಿಬ್ಯೂಟರ್, ಆಸ್ಪತ್ರೆ, ಹೆಲ್ತ್ ಕೇರ್‌ಗಳು ಪೈನ್‌ಕಿಲ್ಲರ್, ಆಂಟಿಬಯೋಟಿಕ್, ಇತರೆ ಔಷಧಿ ಸರಬರಾಜು ಮಾಡುವಾಗ ಹಾಗೂ ಖರೀದಿ ಮಾಡುವಾಗ ಅನುಸರಿಸಬೇಕಾದ ಅಂಶಗಳ ಬಗ್ಗೆ ಕೇಂದ್ರ ಔಷಧ ನಿಯಂತ್ರಣ ಇಲಾಖೆ ಮಾರ್ಗಸೂಚಿ ಪ್ರಕಟಿಸಿದೆ. ಔಷಧಿ ಮಾರಾಟದ ಕಾನೂನನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಔಷಧಿಗಳನ್ನು 1945 ಪ್ರಕಾರ ಡಾಕ್ಟರ್ ಚೀಟಿ ಇಲ್ಲದೆ ಮಾರುವಂತಿಲ್ಲ. ಫಾರ್ಮಾಸಿಸ್ಟ್‌ಗಳು ಜನರಿಗೆ ಸ್ವಯಂ ಚಿಕಿತ್ಸೆಗೆ ಆಂಟಿಬಯೋಟಿಕ್ ಅಥವಾ ನೋವು ಮಾತ್ರೆ ತೆಗೆದುಕೊಳ್ಳಲು ಪ್ರೋತ್ಸಾಹಿಸಬಾರದು.

ಔಷಧಿ ಲೇಬಲ್ ಮೇಲಿನ ಎಚ್ಚರಿಕೆ ಮತ್ತು ಮಾರಾಟದ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ನೋವು ನಿವಾರಕ ಮತ್ತು ಆಂಟಿಬಯೋಟಿಕ್‌ಗಳನ್ನು ವಿವೇಚನೆಯಿಂದ ಬಳಸುವ, ಮಾನಿಟರ್ ಮಾಡುವ ವ್ಯವಸ್ಥೆ ಮಾಡಬೇಕು. ಚೀಟಿ ಪರಿಶೀಲನೆ ಮತ್ತು ರೋಗಿಗಳಿಗೆ ಸರಿಯಾದ ಕೌನ್ಸಲಿಂಗ್ ಮಾಡಬೇಕು. ರೋಗಿಯ ವಯಸ್ಸು, ಬೇರೆ ಕಾಯಿಲೆ, ಅವರು ತೆಗೆದುಕೊಳ್ಳುತ್ತಿರುವ ಬೇರೆ ಮಾತ್ರೆ ನೋಡಿಕೊಂಡು, ಅವಶ್ಯಕತೆ ಇದ್ದರೆ ಮಾತ್ರ ನೋವುನಿವಾರಕ ಮತ್ತು ಆಂಟಿಬಯೋಟಿಕ್ ಬರೆಯಬೇಕು.

ಬರೆಯುವಾಗ ಕಡಿಮೆ ಡೋಸ್‌ನಲ್ಲಿ, ಕಡಿಮೆ ದಿನಕ್ಕೆ ಮಾತ್ರ ಬರೆಯಬೇಕು, ಅದರಲ್ಲೂ ಕಿಡ್ನಿ ಸಮಸ್ಯೆ ಇರುವವರಿಗೆ ತುಂಬಾ ಎಚ್ಚರಿಕೆಯಿಂದಿರಬೇಕು.ಕಿಡ್ನಿ ಸಮಸ್ಯೆ, ನಿರ್ಜಲೀಕರಣ, ಹೃದಯ ಕಾಯಿಲೆ ಇರುವವರಿಗೆ ನೋವು ನಿವಾರಕ ಕೊಡುವಾಗ ಎಚ್ಚರಿಕೆ ವಹಿಸಬೇಕು.

ಆಂಟಿಬಯೋಟಿಕ್ ಅನ್ನು ವಿವೇಚನೆಯಿಂದ ಬರೆಯಬೇಕು.ಯಾವ ಬ್ಯಾಕ್ಟೀರಿಯಾ, ಸೋಂಕು ಎಲ್ಲಿ, ಎಷ್ಟು ತೀವ್ರತೆ, ಲ್ಯಾಬ್ ರಿಪೋರ್ಟ್ ನೋಡಿ ಬರೆಯಬೇಕು. ಅನಗತ್ಯ ಕಾಂಬಿನೇಷನ್ ಮಾತ್ರೆ, ತಪ್ಪು ಆಂಟಿಬಯೋಟಿಕ್ ಆಯ್ಕೆ, ತಪ್ಪು ಡೋಸ್, ಅನಗತ್ಯವಾಗಿ ದೀರ್ಘಕಾಲ ಆಂಟಿಬಯೋಟಿಕ್ ಕೊಡುವುದನ್ನು ತಪ್ಪಿಸಬೇಕು.

## ಕಾಂಗ್ರೇಸ್ ಶಾಸಕ ಬಿ.ಕೆ.ಸಂಗಮೇಶ್‌ಗೆ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ಕೊಲೆ ಯತ್ನ ಪ್ರಕರಣಕ್ಕೆ ಸಂಬಂಧಿಸಿದಂತೆ ಭದ್ರಾವತಿ ಕಾಂಗ್ರೆಸ್ ಶಾಸಕ ಬಿ.ಕೆ ಸಂಗಮೇಶ್‌ಗೆ ಬಿಗ್ ರಿಲೀಫ್ ಸಿಕ್ಕಿದೆ. 2010ರ ಕೊಲೆಯತ್ನ ಪ್ರಕರಣದಲ್ಲಿ ಕೋರ್ಟ್ ಮಹತ್ವದ ತೀರ್ಪು ನೀಡಿದ್ದು, ಶಾಸಕ ಬಿ.ಕೆ ಸಂಗಮೇಶ್ ಸೇರಿದಂತೆ ಐವರನ್ನು ನಿರ್ದೋಷಿ ಎಂದು ಬೆಂಗಳೂರಿನ ಜನಪ್ರತಿನಿಧಿಗಳ ಕೋರ್ಟ್‌ಆದೇಶ ಹೊರಡಿಸಿದೆ. ನ್ಯಾಯಾಧೀಶರಾದ ಕೆ.ಬಿ.ಶಿವಪ್ರಸಾದ್ ತೀರ್ಪು ಪ್ರಕಟಿಸಿದ್ದು, ಸಂಗಮೇಶ್ ಸೋದರರು, ಮಕ್ಕಳ ಮೇಲಿದ್ದ ಆರೋಪ ರದ್ದುಗೊಂಡಿದೆ. 2010ರಲ್ಲಿ ಭದ್ರಾವತಿ ಹಳದಮ್ಮ ದೇವಸ್ಥಾನ ಉದ್ಘಾಟನೆ ವೇಳೆ ಗಲಾಟೆ ನಡೆದಿತ್ತು.

ಈ ಗಲಾಟೆಯ ಸಮಯದಲ್ಲಿ ಮಹೇಶ್ ಎಂಬುವರಿಗೆ ಸಂಗಮೇಶ್ ಸಂಗಡಿಗರಿಂದ ಹಲ್ಲೆಯಾಗಿದೆ ಎಂಬ ಆರೋಪ ಮಾಡಿದ್ದು, ಈ ಬಗ್ಗೆ ಭದ್ರಾವತಿ ಪೇಪರ್ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ಈ ದೂರಿನ ಮೇರೆಗೆ ಶಾಸಕ ಬಿಕೆ ಸಂಗಮೇಶ್, ಬಿಕೆ ಮೋಹನ್, ಬಸವರಾಜ್, ಜಗದೀಶ್ ಮತ್ತು ಗಣೇಶ್ ವಿರುದ್ಧ ಪ್ರಕರಣ ದಾಖಲಾಗಿತ್ತು. ಬಳಿಕ ಪೊಲೀಸರು ತನಿಖೆ ನಡೆಸಿ ಕೋರ್ಟ್‌ಗೆ ಚಾರ್ಜ್ ಶೀಟ್ ಸಲ್ಲಿಸಿದ್ದರು. ಇನ್ನು ಈ ಪ್ರಕರಣದ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಎಲ್ಲಾ ಸಾಕ್ಷ್ಯಗಳನ್ನು ಪರಿಶೀಲಿಸಿ ತೀರ್ಪು ನೀಡಿದೆ. ಆರೋಪಿಗಳ ವಿರುದ್ಧದ ಆರೋಪಗಳು ಸಾಬೀತಾಗಿಲ್ಲ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ.

# ವಿಶ್ವಸಂಸ್ಥೆ ಸಾಮಾನ್ಯ ಸಭೆ ಅಧಿವೇಶನ; ವಿದೇಶಿ ಸಚಿವರೊಂದಿಗೆ ಪ್ರಾದೇಶಿಕ, ಜಾಗತಿಕ ಸಮಸ್ಯೆ ಕುರಿತು ಜೈಶಂಕರ್ ಚರ್ಚೆ

## ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಕಾಯಂ ಸ್ಥಾನ: ಮುಂಬರುವ 'ಸೂಪರ್ ಪವರ್' ಬೆಂಬಲಕ್ಕೆ ನಿಂತ ಮಧ್ಯ ಯುರೋಪ್‌ನ 4 ದೇಶಗಳು

• ಉದಯವಾಹಿನಿ, ಬೆಂಗಳೂರು

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 81ನೇ ಅಧಿವೇಶನದ ಉನ್ನತ ಮಟ್ಟದ ಅಧಿವೇಶನಕ್ಕೆ ತೆರಳಿರುವ ವಿದೇಶಾಂಗ ಸಚಿವ ಎಸ್ ಜೈಶಂಕರ್, ಉನ್ನತ ಮಟ್ಟದ ಅಧಿವೇಶನದ ಸಂದರ್ಭದಲ್ಲಿ ನಡೆದ ಸರಣಿ ದ್ವಿಪಕ್ಷೀಯ ಸಭೆಗಳಲ್ಲಿ ಇತರೆ ದೇಶಗಳ ವಿದೇಶಿ ಸಚಿವರೊಂದಿಗೆ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಚರ್ಚಿಸಿದ್ದಾರೆ.

ಸಾಮಾನ್ಯ ಸಭೆಯ 81ನೇ ಅಧಿವೇಶನಕ್ಕಾಗಿ ಭಾರತೀಯ ನಿಯೋಗದ ನೇತೃತ್ವ ವಹಿಸಿರುವ ಜೈಶಂಕರ್ ನ್ಯೂಯಾರ್ಕ್‌ಗೆ ಆಗಮಿಸಿದ್ದು, ಸೋಮವಾರ ಅವರು ಫ್ರಾನ್ಸ್‌ನ ವಿದೇಶಾಂಗ ಸಚಿವ ಜೀನ್ ನೋಯೆಲ್ ಬ್ಯಾರೋಟ್ ಅವರೊಂದಿಗೆ ಸಭೆ ನಡೆಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ನಿಯಮಿತ ಸಭೆಗಳು ಮತ್ತು ದೂರವಾಣಿ ಸಮಾಲೋಚನೆಗಳು, ನಮ್ಮ ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯ ವೇಗವನ್ನು ಕಾಯ್ದುಕೊಳ್ಳಲು ನಮಗೆ ನೆರವಾಗುತ್ತವೆ.

ಈ ಸಂದರ್ಭದಲ್ಲಿ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು, ನಿರ್ದಿಷ್ಟವಾಗಿ ಉಕ್ರೇನ್ ಮತ್ತು ಗಲ್ಫ್ ಬಿಕ್ಕಟ್ಟಿನ ಬಗ್ಗೆ ಚರ್ಚಿಸಲಾಯಿತು. ಅಲ್ಲದೆ, ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆ ಸೇರಿದಂತೆ ಬಹುಪಕ್ಷೀಯ ವಿಷಯಗಳ ಕುರಿತಾಗಿಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಈಕ್ವೆಡಾರ್‌ನ ವಿದೇಶಾಂಗ ಸಚಿವ ರಾಬರ್ಟೊ ಕುರಿ ಜೊತೆಗಿನ ಸಭೆ ಬಳಿಕ



ಮಾತನಾಡಿರುವ ಅವರು, ಇಂಧನ ಮತ್ತು ಔಷಧೀಯ ವಲಯಗಳು, ಜನರ ಸಂಚಾರ , ಸಿಬ್ಬಂದಿ ತರಬೇತಿ, ಅಭಿವೃದ್ಧಿ ಪಾಲುದಾರಿಕೆ ಹಾಗೂ ವಿಶ್ವಸಂಸ್ಥೆಯಂತಹ ಬಹುಪಕ್ಷೀಯ ವೇದಿಕೆಗಳಲ್ಲಿನ ಸಹಕಾರ ಸೇರಿದಂತೆ ನಮ್ಮ ಆರ್ಥಿಕ ಸಂಬಂಧಗಳನ್ನು ಬಲಪಡಿಸುವ ಕುರಿತು ಚರ್ಚಿಸಿದೆವು ಎಂದರು.

ಬಳಿಕ ಸ್ಲೋವಾಕಿಯಾದ ವಿದೇಶಾಂಗ ಸಚಿವ ಜುರಾಜ್ ಬ್ಲಾನರ್ ಅವರೊಂದಿಗೆ ಸಭೆ ನಡೆಸಿದ್ದು, ದ್ವಿಪಕ್ಷೀಯ ಕಾರ್ಯಸೂಚಿಯ ಕುರಿತು ಚರ್ಚಿಸುವುದರ ಜೊತೆಗೆ, ಬಹುಪಕ್ಷೀಯ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಬಗ್ಗೆಯೂ ತಾವು ಚರ್ಚಿಸಿದ್ದಾಗಿ ತಿಳಿಸಿದರು.

ಜೈಶಂಕರ್ ಅವರು ಹಂಗೇರಿಯ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವೆ ಅನಿತಾ ಓರ್ಬನ್ ಅವರೊಂದಿಗೆ ಮೊದಲ ಉತ್ತಮ ಸಭೆಯನ್ನು ನಡೆಸಿದರು. ಮಾತುಕತೆಯಲ್ಲಿ ಬಾಂಧವ್ಯವನ್ನು ಬಲಪಡಿಸಲು ಹಾಗೂ ದ್ವಿಪಕ್ಷೀಯ ಕಾರ್ಯತಂತ್ರದ ಪಾಲುದಾರಿಕೆಯನ್ನು ಮುನ್ನಡೆಸಲು ಒಟ್ಟಾಗಿ ಕೆಲಸ ಮಾಡಲು ನಿರ್ಧರಿಸಿದ್ದಾಗಿ ತಿಳಿಸಿದ್ದಾರೆ.

ಜೈಶಂಕರ್ ಅವರು ಸೆಪ್ಟಂಬರ್ 26 ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ವೇದಿಕೆಯಿಂದ ನಡೆಯುವ ಸಾಮಾನ್ಯ ಚರ್ಚೆಯಲ್ಲಿ ವಿಶ್ವ ನಾಯಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಈ ಅಧಿವೇಶನ ಸೆ. 22ರಿಂದ 28ರವರೆಗೆ ನಡೆಯಲಿದೆ.

### ಭಾರತದ ವಾದವೇನು?

ವಿಶ್ವಸಂಸ್ಥೆ ಸ್ಥಾಪನೆಯಾದ 1945 ರ ಪರಿಸ್ಥಿತಿಗೂ ಇಂದಿನ ಜಾಗತಿಕ ಸ್ಥಿತಿಗೂ ಭಾರಿ ಅಂತರವಿದೆ. ಆಗ ವಸಾಹತುಶಾಹಿಗೆ ಒಳಪಟ್ಟಿದ್ದ ಭಾರತವೀಗ ವಿಶ್ವದ ಅತಿ ಹೆಚ್ಚು ಜನಸಂಖ್ಯೆ, ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ಮತ್ತು ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆಯಲ್ಲಿ ಅಗ್ರ ಪಾತ್ರವಹಿಸುತ್ತಿದೆ. ಹೀಗಾಗಿ ಇಂದಿನ ವಾಸ್ತವತೆಯನ್ನು ಪ್ರತಿಬಿಂಬಿಸಲು ಕೌನ್ಸಿಲ್ ಸುಧಾರಣೆ ಅತ್ಯಗತ್ಯ ಎಂಬುದು ಭಾರತದ ಸ್ಪಷ್ಟ ನಿಲುವಾಗಿದೆ.

### ಚೀನಾದ ಅಡ್ಡಗಾಲು

ಭದ್ರತಾ ಮಂಡಳಿಯ ಹಾಲಿ ಕಾಯಂ ಸದಸ್ಯ ರಾಷ್ಟ್ರಗಳಾದ ಅಮೆರಿಕ, ರಷ್ಯಾ, ಫ್ರಾನ್ಸ್ ಮತ್ತು ಬ್ರಿಟನ್ ದೇಶಗಳು ಭಾರತದ ಕಾಯಂ ಸ್ಥಾನಕ್ಕೆ ಈಗಾಗಲೇ ಬಹಿರಂಗವಾಗಿ ಬೆಂಬಲ ಸೂಚಿಸಿವೆ. ಆದರೆ, ಚೀನಾ ಮಾತ್ರ ಭಾರತದ ಸೇರ್ಪಡೆಗೆ ಸ್ಪಷ್ಟ ಬೆಂಬಲ ನೀಡದೆ ವಿಶಾಲ ಒಮ್ಮತದ ನೆಪವೊಡ್ಡಿ ರಾಜತಾಂತ್ರಿಕವಾಗಿ ತಡೆಗೋಡೆ ನಿರ್ಮಿಸುತ್ತಿದೆ.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,333/Gram 24ct ₹ 14,055 /Gram 22ct ಬೆಳ್ಳಿ: ₹250.00/

# ಸೆ.28ರಿಂದ 'ರೈತ ಸ್ವಾಭಿಮಾನ ಯಾತ್ರೆ' ನಿಖಿಲ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದು, ಬೆಳೆ ನಷ್ಟ, ಸಾಲದ ಹೊರೆ ,ವಿದ್ಯುತ್ ಸಮಸ್ಯೆಯಿಂದ ರೈತರ ಬದುಕು ದುಸ್ತರವಾಗಿದೆ. ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕು ಎಂದು ಜೆಡಿಎಸ್ ಯುವ ಘಟಕದ ಮುಖಂಡ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 3,515ಕ್ಕೂ ಹೆಚ್ಚು ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಹೇಳಿದರು. ರೈತರು ಬೆಳೆ ಕಳೆದುಕೊಂಡಿರುವುದಲ್ಲದೆ, ಬೀಜ, ಗೊಬ್ಬರ, ಕೃಷಿ ಕೂಲಿ ಸೇರಿದಂತೆ ದಿನನಿತ್ಯದ ಖರ್ಚುಗಳನ್ನು ಭರಿಸಲಾಗದ ಸ್ಥಿತಿಯಲ್ಲಿದ್ದಾರೆ. ಬೆಳೆ ನಷ್ಟದ ಜೊತೆಗೆ ಸಾಲದ ಹೊರೆ ಕೂಡ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ತಕ್ಷಣ ಸ್ಪಂದಿಸಬೇಕಿತ್ತು ಎಂದು ಹೇಳಿದರು. ಸರ್ಕಾರ ಈಗ 101ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ.

ಆದರೆ ರಾಜ್ಯದ ಹಲವು ಭಾಗಗಳಲ್ಲಿ ಮಳೆ ಕೊರತೆಯಾಗಿದ್ದು, ಮಲೆನಾಡು ಪ್ರದೇಶದಲ್ಲಿಯೂ ವಾಡಿಕೆಯಂತೆ ಮಳೆಯಾಗಿಲ್ಲ. ಆದ್ದರಿಂದ ಒಟ್ಟು 234 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ನಿಖಿಲ್ ಆಗ್ರಹಿಸಿದರು.

ಸರ್ಕಾರದ ಪಕ್ಷದ ಶಾಸಕರೇ ಬರ ಘೋಷಣೆ ವಿಚಾರದಲ್ಲಿ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಮಾಜಿ ಸಚಿವ ಎಚ್.ಕೆ. ಪಾಟೀಲ್ ಅವರು ತಮ್ಮ ಗದಗ ಜಿಲ್ಲೆಯ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವುದನ್ನೂ ಅವರು ಉಲ್ಲೇಖಿಸಿದರು.

ರೈತರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇನೆ ಎಂದು ಹೇಳುವುದರಿಂದ ರೈತರ ಸಮಸ್ಯೆ ಬಗೆಹರಿಯುವುದಿಲ್ಲ. ಭಾಷಣ ಮತ್ತು ಹೇಳಿಕೆಗಳಿಂದ ರೈತರ ಬದುಕು ಬದಲಾಗುವುದಿಲ್ಲ. ಎಂದು ಹೇಳಿದರು.



ಉದಯವಾಹಿನಿ ಚಿತ್ರ

# ಪಿಎಸ್ಐಗೆ ಶಾಸಕರ ಪುತ್ರಿಯಿಂದ ಕಪಾಳಮೋಕ್ಷ ಪ್ರಕರಣ: ಕ್ಷಮೆಯಾಚಿಸಿದರೆ ನಿರೀಕ್ಷಣಾ ಜಾಮೀನು ಪರಿಗಣಿಸಬಹುದು - ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಕರ್ತವ್ಯನಿರತ ಮಹಿಳಾ ಪೊಲೀಸ್ ಸಬ್ಇನ್ಸ್‌ಪೆಕ್ಟರ್‌ಗೆ ಕಪಾಳಮೋಕ್ಷ ಮಾಡಿದ ಆರೋಪ ಎದುರಿಸುತ್ತಿರುವ ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್ ಗೌಡ ಅವರ ಪುತ್ರಿ ಐಶ್ವರ್ಯಾ ಅವರು ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಪ್ರಕರಣ ಸಂಬಂಧ ಬಂಧನ ಭೀತಿಯಲ್ಲಿರುವ ಐಶ್ವರ್ಯಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ, ಮಹಿಳಾ ಪಿಎಸ್ಐ ಬಳಿ ಐಶ್ವರ್ಯಾ ಕ್ಷಮೆಯಾಚಿಸಿದರೆ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಪರಿಗಣಿಸಬಹುದು ಎಂದು ಮೌಖಿಕವಾಗಿ ಅಭಿಪ್ರಾಯಪಟ್ಟಿದೆ. ಈ ಕುರಿತು ಐಶ್ವರ್ಯಾ ಅವರಿಂದ ಸೂಚನೆ ಪಡೆದು, ನ್ಯಾಯಾಲಯಕ್ಕೆ ಪ್ರತಿಕ್ರಿಯಿಸುವುದಕ್ಕಾಗಿ ಅವರ ಪರ ವಕೀಲರು ಮಂಗಳವಾರದವರೆಗೆ ಕಾಲಾವಕಾಶ ಕೋರಿದರು. ಆ. 12ರಂದು ಭೀಮನ ಅಮಾವಾಸ್ಯೆಯಂದು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಆರತಿ ಉಕ್ಕಡ ಅಹಲ್ಯದೇವಿ ದೇವಸ್ಥಾನಕ್ಕೆ ಐಶ್ವರ್ಯಾ ತಮ್ಮ ಮಕ್ಕಳೊಂದಿಗೆ ತೆರಳಿದ್ದರು. ದೇವಾಲಯದ ಗರ್ಭಗುಡಿಗೆ ಪ್ರವೇಶಿಸುವ ವಿಚಾರವಾಗಿ ಅಲ್ಲಿ ಭದ್ರತಾ ಕರ್ತವ್ಯದಲ್ಲಿದ್ದ ಮಹಿಳಾ ಪಿಎಸ್ಐ ಸವಿತಾ ಪಾಟೀಲ್ ಅವರೊಂದಿಗೆ ಮಾತಿನ ಚಕಮಕಿ ನಡೆದಿತ್ತು ಎನ್ನಲಾಗಿದೆ.

# ಕೊಡೋದಕ್ಕೆ ಹಣ ಇಲ್ಲ, ಸಿಎಂ ಪುಗ್ಸಟ್ಟೆ ಘೋಷಣೆ

• ಉದಯವಾಹಿನಿ, ಬೆಂಗಳೂರು

ಸಿಎಂ ಕೇವಲ ಪುಗ್ಸಟ್ಟೆ ಘೋಷಣೆ ಮಾಡಿಕೊಂಡು ಹೊರಟಿದ್ದಾರೆ, ಕೊಡೋದಕ್ಕೆ ಸರ್ಕಾರದ ಹತ್ತಿರ ಹಣ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ (ಕಿಡಿಕಾರಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಕರಾವಳಿಗೆ ಹೋಗಿ 32-35 ಸಾವಿರ ಕೋಟಿ ರೂ. ಅನೌನ್ಸ್ ಮಾಡಿದ್ದಾರೆ. ಎಲ್ಲಿಂದ ತರುತ್ತಾರೆ ದುಡ್ಡನ್ನು ರಿಯಲ್ ಎಸ್ಟೇಟ್ ಕಂಪನಿಯಿಂದ ತರುತ್ತಾರಾ ಎಂದು ಪ್ರಶ್ನಿಸಿದ್ದಾರೆ. ವಿಶೇಷ ಅಧಿವೇಶನ ಕರೆದಿರುವುದರ ಹಿಂದೆ ಯಾವುದೇ ರಾಜಕೀಯವಿಲ್ಲ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ. ಆದರೆ, ಅವರ ಪಕ್ಷದ ಶಾಸಕರೇ ಈಗ ಇದನ್ನು ವಿರೋಧಿಸಿ ವಾಸ್ತವ ತೋರಿಸುತ್ತಿದ್ದಾರೆ. ರಾಜಕಾರಣ ಮಾಡುವುದಿಲ್ಲ ಎಂದು ಹೇಳಿ, ಸದನ ಕರೆದು ರಾಜಕೀಯ ಮಾಡುತ್ತಿದ್ದಾರೆ. ಬಿಜೆಪಿ ಅವರು ಪಾದಯಾತ್ರೆ ಮಾಡದಿದ್ದರೆ ವಿಶೇಷ ಅಧಿವೇಶನವನ್ನೇ ಇವರು ಕರೆಯುತ್ತಿರಲಿಲ್ಲ, ಮಂಗಳೂರಿನಲ್ಲಿ ಮೀನು ಹಿಡಿದುಕೊಂಡು ಕೂರುತ್ತಿದ್ದರು ಎಂದು ಕಿಡಿಕಾರಿದ್ದಾರೆ. ಹೆಚ್.ಕೆ. ಪಾಟೀಲ್ ಅವರು ಹಿರಿಯ ಶಾಸಕರು, ಅವರೇ ಪಕ್ಷದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ. ಮುದ್ದೇಬಿಹಾಳ ಶಾಸಕರು ಕೂಡ ಇದೇ ಮಾತುಗಳನ್ನು ಹೇಳಿದ್ದಾರೆ. ಜೆಡಿಎಸ್ ಶಾಸಕರು ಸರ್ಕಾರದ ನಡೆಯನ್ನು ವಿರೋಧಿಸಿದ್ದಾರೆ. ಬಿಜೆಪಿಯ 44 ಕ್ಷೇತ್ರದಲ್ಲಿ ಕೇವಲ 23 ತಾಲ್ಲೂಕುಗಳನ್ನು ಮಾತ್ರ ಘೋಷಣೆ ಮಾಡಿದ್ದಾರೆ, ಇದು ರಾಜಕಾರಣ ಅಲ್ಲವಾ? ಕೂಡಲೇ ಶಿವಮೊಗ್ಗ, ಶಿಕಾರಿಪುರ ಸೇರಿದಂತೆ 190ಕ್ಕೂ ಹೆಚ್ಚು ತಾಲ್ಲೂಕುಗಳನ್ನು ಬರ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.ದುಬೈನಲ್ಲಿ ಉಡುಪಿ ಮೂಲದ ವ್ಯಕ್ತಿಯ ಬರ್ಬರ ಹತ್ಯೆ ಕಾರಿನ ಡಿಕ್ಕಿಯಲ್ಲಿ 9 ಪೀಸ್ ಮಾಡಿ ತುಂಬಿದ್ದ ದುಷ್ಕರ್ಮಿಗಳುನೀರಿನ ಕೊರತೆ, ವಿದ್ಯುತ್ ಅಭಾವದಿಂದ ರೈತರಿಗೆ ಗಂಭೀರ ಸಮಸ್ಯೆಯಿದೆ. ಯಡಿಯೂರಪ್ಪ ಅವರು ವಿದ್ಯುತ್ ಅಭಾವವಿದ್ದಾಗ ಬೇರೆ ರಾಜ್ಯದಿಂದ ತರಿಸಿಕೊಂಡಿದ್ದರು. ಕಾಂಗ್ರೆಸ್ ಸರ್ಕಾರ ರೈತರನ್ನು ನಡುಬೀದಿಯಲ್ಲಿ ತಂದು ನಿಲ್ಲಿಸಿದೆ.

# 53 ತಾಲ್ಲೂಕುಗಳು ಬರಪೀಡಿತ ಎಂದು ಘೋಷಣೆ: ಉಪಮುಖ್ಯಮಂತ್ರಿ ಜಿ.ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಹಿಂದೆಂದೂ ಕಾಣದ ಬರಗಾಲ ತಲೆದೂರಿದ್ದು, ಘೋಷಿಸಲಾಗಿರುವ ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಇಂದು 53ತಾಲ್ಲೂಕುಗಳನ್ನ ಸೇರ್ಪಡೆಗೊಳಿಸಿ ಇಂದೇ ಘೋಷಿಸಲಾಗುವುದು ಎಂದು ಉಪಮುಖ್ಯಮಂತ್ರಿ ಜಿ.ಪರಮೇಶ್ವರ್ ಸದನಕ್ಕೆ ಮಾಹಿತಿ ನೀಡಿದ್ದಾರೆ. ಬರ ಸಂಬಂಧ ವಿಶೇಷ ಚರ್ಚೆ ಹಿನ್ನೆಲೆ ವಿಧಾನಪರಿಷತ್‌ನಲ್ಲಿ ಮಾತನಾಡಿದ ಪರಮೇಶ್ವರ್, ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಕೆಲ ಶಾಸಕರು ಹಾಗೂ ರೈತರು ತಮ್ಮ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿಲ್ಲ ಏಕೆ ಎಂದು ಅಸಮಾಧಾನ ವ್ಯಕ್ತಿಪಡಿಸಿದ್ದರು. ಬಳಿಕ ಮುಂದಿನ ಹಂತದ ಪರಿಶೀಲನೆ ವೇಳೆ 23 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಿದೆವು. 53 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡುತ್ತೇವೆ. ಈ ಮೂಲಕ ಒಟ್ಟು 177 ತಾಲ್ಲೂಕು ಬರಪೀಡಿತ ತಾಲ್ಲೂಕು ಘೋಷಣೆ ಮಾಡಲಿದ್ದೇವೆ. ಮುಂದಿನ ದಿನಗಳಲ್ಲಿ ಒಟ್ಟು 210ರವರೆಗೆ ತಾಲ್ಲೂಕು ಘೋಷಣೆ ಮಾಡಬಹುದು ಎಂದರು.

852 ಮಿಲಿಮೀಟರ್ ಮಳೆಯಾಗಬೇಕಿತ್ತು. ಆದರೆ, 642 ಮಿಲಿಮೀಟರ್ ಮಳೆ ಮಾತ್ರ ಆಗಿದೆ. ಜೂನ್ ತಿಂಗಳಿನಿಂದ ಈವರೆಗೂ ರಾಜ್ಯದಲ್ಲಿ ಸರಾಸರಿ ಮೈನಸ್ ಶೇ.36ರಷ್ಟು ಮಳೆ ಕೊರತೆಯಾಗಿದೆ. ಶೇ.82ರಷ್ಟು ಬೆಳೆ ನಷ್ಟವಾಗಿದೆ. ಮಳೆ ಕೊರತೆಯಿಂದ ಬೆಳೆ ನಾಶವಾಗಿದೆ. 2020ರಲ್ಲಿ ಕೇಂದ್ರದ ಬರ ಮಾನದಂಡ ಆಧರಿಸಿ ಬರಪೀಡಿತ ಎಂದು ಘೋಷಿಸಬೇಕಿದೆ ಎಂದು ಡಿಸಿಎಂ ತಿಳಿಸಿದರು.

ವಿಪಕ್ಷ ಸದಸ್ಯ ಸಿ.ಟಿ.ರವಿ, ಗದಗ ಜಿಲ್ಲೆ ಈ ಬರ ಪಟ್ಟಿಯಲ್ಲಿ ಇದೆಯಾ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಪರಮೇಶ್ವರ್, ಹೊಸಪಟ್ಟಿಯಲ್ಲಿ ಗದಗ ಸಹ ಸೇರಿದೆ ಎನ್ನುತ್ತಿದ್ದಂತೆ ಸದ್ಯ, ಒಬ್ಬರ ರಾಜೀನಾಮೆ ತಪ್ಪಿಸಿದರಲ್ಲ ಎಂದು ರವಿ ವ್ಯಂಗ್ಯವಾಡಿದರು. ಹೆಚ್.ಕೆ ಪಾಟೀಲ್ ಅವರು ರಾಜೀನಾಮೆ ಕೊಡಲಿದ್ದಾರೆ ಎಂದು ಬರ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಸಾಧ್ಯವಿಲ್ಲ. ಕೇಂದ್ರದ ನಿಯಮಾನುಸಾರ ಆಧರಿಸಿ ಬರಪೀಡಿತ ಎಂದು ಘೋಷಿಸಲಾಗುತ್ತದೆ.

# ಅರಣ್ಯ ಇಲಾಖೆ ಎಂದರೆ ಜನರಿಗೆ ಕಷ್ಟ ಕೊಡುವ ಇಲಾಖೆಯಾಗಿದೆ: ಶಾಸಕ ಸುನೀಲ್ ಕುಮಾರ್

• ಉದಯವಾಹಿನಿ, ಬೆಂಗಳೂರು

ಅರಣ್ಯ ಇಲಾಖೆ ಎಂದರೆ ಅರಣ್ಯ ಸಂರಕ್ಷಣೆಗಿಂತ, ಜನರಿಗೆ ಕಷ್ಟ ಕೊಡುವ ಇಲಾಖೆಯಾಗಿದೆ. ನಮ್ಮ ಜಿಲ್ಲೆಯಲ್ಲಿ ನಕ್ಸಲ್ ಬೆಳೆದಿದ್ದು ಇದೇ ಕಾರಣಕ್ಕೆ ಎಂದು ಶಾಸಕ ಸುನೀಲ್ ಕುಮಾರ್ ತಿಳಿಸಿದರು. ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಸಂಬಂಧ ವಿಶೇಷ ಚರ್ಚೆ ವೇಳೆ ಮಾತನಾಡಿದ ಅವರು, ಪಶ್ಚಿಮಘಟ್ಟ ಸೆಲ್ಫಿ ಪಾಯಿಂಟ್ ಅಲ್ಲ. ನಮಗೆ ಬದುಕು ಕಟ್ಟಿಕೊಳ್ಳುವ ಪಾಯಿಂಟ್. ಅನೇಕ ಹುಳು, ಉಪ್ಪಟೆಗಳ ಜೊತೆ ನಾವು ಬದುಕುತ್ತಿದ್ದೇವೆ. ಕಸ್ತೂರಿ ರಂಗನ್ ವರದಿಯಿಂದ ಬಹಳ ವಿಚಾರ ಎದುರಿಸಿದ್ದೇವೆ. ನಾನು ಮುಖ್ಯಮಂತ್ರಿಗಳ ಭಾಷಣ ಗಮನಿಸಿದ್ದೇನೆ. ನಾನು ಜನರ ಭಾವನೆಗಳ ಮೇಲೆ ಆಡಳಿತ ಮಾಡಲ್ಲ. ಜನರ ಬದುಕಿನ ಮೇಲೆ ಆಡಳಿತ ನಡೆಸ್ತಿದ್ದೇನೆ ಅಂತ ಹೇಳಿದ್ದಾರೆ.

ನಾವು ಬದುಕು, ಭಾವನೆ ಎರಡರ ಮೇಲೂ ಜೀವನ ಮಾಡ್ತಿದ್ದೇವೆ ಎಂದರು.ಜನ ಸಂಸ್ಕೃತಿ ತೆಗೆದು ಪರಿಸರ ಉಳಿಸ್ತೇನೆ ಎಂಬುದು ಮೂರ್ಖತನ. ನೂರಾರು ವರ್ಷಗಳಿಂದ ಬದುಕು ಕಟ್ಟಿಕೊಂಡ ಸಂಸ್ಕೃತಿ ಇದೆ. ಪರಿಸರ ಉಳಿಸುವುದರಲ್ಲಿ ನಾವು ಮೊದಲಿಗರು. ಮನೆ ಕೋಳಿಗಿಂತ ನವಿಲು ನಮ್ಮ ಮನೆ ಅಂಗಳದಲ್ಲಿ ಓಡಾಡ್ತಿವೆ. ನಗರಗಳಲ್ಲಿ ಕುಳಿತವರು ಏನೆಲ್ಲ ಮಾತನಾಡುತ್ತಾರೆ.

# ಕಾಡು ಹಂದಿ ಬೇಟೆ ಪ್ರಕರಣ: ಆರೋಪ ಪಟ್ಟಿ ರದ್ದುಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ನಡೆದ ಕಾಡು ಹಂದಿ ಬೇಟೆ ಪ್ರಕರಣಕ್ಕೆ ಸಂಬಂಧಿಸಿದಂತೆ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಅಧಿಕೃತ ಅಧಿಕಾರಿ ದೂರು ಸಲ್ಲಿಸದೆ, ಪೊಲೀಸರೇ ನೇರವಾಗಿ ತನಿಖೆ ನಡೆಸಿ ಕ್ರಿಮಿನಲ್ ಪ್ರಕರಣ ದಾಖಲಿಸುವುದು ಕಾನೂನು ಬಾಹಿರ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ತಮ್ಮ ವಿರುದ್ಧದ ಆರೋಪ ಪಟ್ಟಿ ರದ್ದು ಕೋರಿ ರಮೇಶ್ ಎನ್. ಸೇರಿದಂತೆ ನಾಲ್ವರು ಆರೋಪಿಗಳು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಹೆಚ್.ಪಿ. ಸಂದೇಶ್ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ. ಅಲ್ಲದೆ, ನಿಗದಿಪಡಿಸಿದ ಅರ್ಹ ಅಧಿಕಾರಿಗಳ ಮೂಲಕ ಹೊಸದಾಗಿ ದೂರು ದಾಖಲಿಸಲು ಕಾನೂನು ಪ್ರಕಾರ ಪ್ರಕ್ರಿಯೆ ಮುಂದುವರಿಕೆಗೆ ಅನುಮತಿ ನೀಡಿದೆ. ಜೊತೆಗೆ, ಆರೋಪಿಗಳಿಂದ ವಶಪಡಿಸಿಕೊಂಡಿದ್ದ ಏರ್ ಗನ್ ಬಿಡುಗಡೆಗೆ ಸೂಚನೆ ನೀಡಿದೆ.

ವನ್ಯಜೀವಿ ಸಂರಕ್ಷಣಾ ಕಾಯ್ದೆ-1972ರ ಸೆಕ್ಷನ್ 55ರ ಪ್ರಕಾರ, ವನ್ಯಜೀವಿ ಸಂರಕ್ಷಣಾ ನಿರ್ದೇಶಕರು, ಮುಖ್ಯ ವನ್ಯಜೀವಿ ರಕ್ಷಕರು ಅಥವಾ ಸರ್ಕಾರದಿಂದ ಅಧಿಕಾರ ಪಡೆದ ನಿರ್ದಿಷ್ಟ ಅಧಿಕಾರಿಗಳು ದೂರು ಸಲ್ಲಿಸಿದರೆ ಮಾತ್ರ ನ್ಯಾಯಾಲಯಗಳು ಕಾಗ್ನಿಜೆನ್ಸ್ ಪಡೆದುಕೊಳ್ಳಲು ಅವಕಾಶವಿರಲಿದೆ. ಈ ಪ್ರಕರಣದಲ್ಲಿ ಪೊಲೀಸರು ನೇರವಾಗಿ ತನಿಖೆ ನಡೆಸಿ ಆರೋಪಪಟ್ಟಿ ಸಲ್ಲಿಸಿರುವುದು ಕಾಯ್ದೆಯ ಸೆಕ್ಷನ್ 55ರ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಪೀಠ ಹೇಳಿದೆ.

# 8 ಭ್ರಷ್ಟರು ಲೋಕಾ ಬಲೆಗೆ ಅಕ್ರಮ ಆಸ್ತಿಪಾಸ್ತಿಗಳನ್ನು ಪತ್ತೆ

## ಬೆಂಗಳೂರು, ಬೀದರ್,ಮಂಡ್ಯ, ಚಿಕ್ಕಬಳ್ಳಾಪುರ,ಕೊಡಗು ಜಿಲ್ಲೆಗಳಲ್ಲಿ ದಾಳಿ ನಡೆಸಿರುವ 8 ಮಂದಿ ಭ್ರಷ್ಟ ಅಧಿಕಾರಿಗಳ ಕಚೇರಿ ಮನೆಗಳ ಮೇಲಿನ ದಾಳಿ

• ಉದಯವಾಹಿನಿ, ಬೆಂಗಳೂರು

ಆದಾಯಕ್ಕಿಂತಲೂ ನೂರಾರು ಪಟ್ಟು ಅಕ್ರಮ ಆಸ್ತಿ ಗಳಿಕೆ, ಭ್ರಷ್ಟಾಚಾರ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಏಕಕಾಲದಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು 8 ಮಂದಿ ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿಗಳನ್ನು ಪತ್ತೆಹಚ್ಚಿದ್ದಾರೆ.

ಬಲೆಗೆ ಬಿದ್ದಿರುವ 8 ಮಂದಿ ಭ್ರಷ್ಟ ಸರ್ಕಾರಿ ಅಧಿಕಾರಿಗಳ ಕಚೇರಿ ಮನೆ ಸಂಬಂಧಿಕರ ಮನೆಗಳ ಮುಂಜಾನೆಯಿಂದಲೇ ಎಸ್‌ಪಿಗಳ ನೇತೃತ್ವದಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ ಅಪಾರ ಪ್ರಮಾಣದ ನಗದು ಚಿನ್ನಾಭರಣಗಳು, ಐಷಾರಾಮಿ ವಸ್ತುಗಳು,ಆಸ್ತಿಪಾಸ್ತಿಗಳ ದಾಖಲೆ ಪತ್ರಗಳನ್ನು ವಶಪಡಿಸಿಕೊಂಡು ಪರಿಶೀಲನೆ ಕೈಗೊಂಡಿದ್ದಾರೆ.

**1** ಕಚೇರಿ ಮನೆಗಳ ಮೇಲಿನ ದಾಳಿ

**2** ಲೋಕಾಯುಕ್ತರು ದಾಳಿ ನಡೆಸಿ ಶಾಕ್

**3** ದಾಳಿ ನಡೆಸಿ ಅಪಾರ ಪ್ರಮಾಣದ ನಗದು ಚಿನ್ನಾಭರಣಗಳು ಲಭ್ಯ

ಬೆಂಗಳೂರು, ಬೀದರ್,ಮಂಡ್ಯ, ಚಿಕ್ಕಬಳ್ಳಾಪುರ,ಕೊಡಗು ಜಿಲ್ಲೆಗಳಲ್ಲಿ ದಾಳಿ ನಡೆಸಿರುವ 8 ಮಂದಿ ಭ್ರಷ್ಟ ಅಧಿಕಾರಿಗಳ ಕಚೇರಿ ಮನೆಗಳ ಮೇಲಿನ ದಾಳಿಯೂ ಮುಂದುವರೆದಿದ್ದು ಸಂಜೆ ವೇಳೆ ದಾಳಿಯಲ್ಲಿ ಪತ್ತೆಯಾಗಿರುವ ನಗದು ಚಿನ್ನಾಭರಣಗಳು, ಐಷಾರಾಮಿ ವಸ್ತುಗಳು, ವಿದೇಶಿ ಮದ್ಯಗಳು ಸೇರಿ ಅಪಾರ ಪ್ರಮಾಣದ ಆಸ್ತಿಪಾಸ್ತಿಗಳ ದಾಖಲೆ ಪತ್ರಗಳ ಒಟ್ಟಾರೆ ಮೌಲ್ಯ ಲಭ್ಯವಾಗಲಿದೆ.

ಕೃಷಿ ಇಲಾಖೆಯ ನಿವೃತ್ತ ಆಡಳಿತಾಧಿಕಾರಿ ಮಾಣೀಕ್ ಶೆರಿಕಾರ್ ಅವರ ಬೀದರ್ ನಗರದ ಹಳ್ಳಿ ಕಾಲೋನಿ ನಿವಾಸ, ಹುಮ್ನಾಬಾದ್‌ನ ನಿವಾಸ ಮತ್ತು ಚಿಟಗುಪ್ಪ ತಾಲ್ಲೂಕಿನ ಮುತ್ತಂಗಿಯ ಗ್ರಾಮದ ಬಳಿ ಇರುವ ಫಾರ್ಮ್ ಹೌಸ್ ಮೇಲೆ ಲೋಕಾಯುಕ್ತ ಡಿವೈಎಸ್ಪಿ ಹನುಮಂತ ರೆಡ್ಡಿ ನೇತೃತ್ವದ ತಂಡ ದಾಳಿ ನಡೆಸಿದೆ.


ಉದಯವಾಹಿನಿ ಚಿತ್ರ

ಮೂರು ಕಡೆಗಳಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳ ತಂಡ ತೀವ್ರ ತಪಾಸಣೆ ನಡೆಸಿದೆ. ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ರಾಜೇಶ್ವರಿ ಅವರ ಕಚೇರಿ ಕಲಬುರಗಿ ನಗರದ ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ರಾಜೇಶ್ವರಿ ಅವರ ನಿವಾಸ ಹಾಗೂ ಖಾದ್ರಿ ಚೌಕ್‌ನಲ್ಲಿರುವ ಮತ್ತೊಂದು ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಇದರ ಜತೆಗೆ ಜೆಸ್ಕಾಂ ಕಚೇರಿಯ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳು ಹಾಗೂ ಆಸ್ತಿ ವಿವರಗಳನ್ನು ಪರಿಶೀಲಿಸುತ್ತಿದ್ದಾರೆ.

ಜೆಸ್ಕಾಂ ಎಇಇ ರಾಜೇಶ್ವರಿ ಅವರ ಎರಡು ಮನೆ ಹಾಗೂ ಕಛೇರಿ ಮೇಲೆ ಬೆಳಿಗ್ಗೆ ಏಕಕಾಲದಲ್ಲಿ ಲೋಕಾಯುಕ್ತ ದಾಳಿ ನಡೆದಿದೆ. ಕಲಬುರಗಿ ನಗರದ ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ಮನೆ,ಖಾದ್ರಿ ಚೌಕ್‌ನಲ್ಲಿಯ ಇನ್ನೊಂದು ಮನೆ ಹಾಗೂ ಕಲಬುರಗಿಯ ಅವರ ಜೆಸ್ಕಾಂ ಕಛೇರಿಯ ಮೇಲೂ ಲೋಕಾ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಮೇಲೆ ಲೋಕಾಯುಕ್ತ ಅಧಿಕಾರಿಗಳ ದಾಳಿ ನಡೆದಿದೆ.ಬೆಳಿಗ್ಗೆ ವಾಕಿಂಗ್ ಹೋಗಿದ್ದ ಅಧಿಕಾರಿ ಮನೆಗೆ ಬರುವುದರೊಳಗೆ ಲೋಕಾಯುಕ್ತರು ದಾಳಿ ನಡೆಸಿ ಶಾಕ್ ನೀಡಿದ್ದಾರೆ.

1 ದರ್ಶನ್ ಗೌಡ ಪ್ರಥಮ ದರ್ಜೆ ಸಹಾಯಕ, ಜಿಲ್ಲಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ.
2 ರಂಗನಾಥ್ ಹೆಚ್.ಎಂ. ನಿವೃತ್ತ ಸಹಾಯಕ ಕಾರ್ಯಪಾಲಕ ಇಂಜಿನಿಯರ್ , ಬಿಬಿಎಂಪಿ, ಬೆಂಗಳೂರು.
3 ಶ್ರೀದೇವಿ ಜಿಲ್ಲಾ ನೋಂದಣಾಧಿಕಾರಿ, ಬೆಂಗಳೂರು.
4 ಹೆಚ್.ಆರ್. ರಮೇಶ್ ಪೌರಾಯುಕ್ತರು, ನಗರಸಭೆ, ಮಡಿಕೇರಿ.
5 ಕಿರಣ್ ಕುಮಾರ್ ಬೈಂದೂರ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹೆಸ್ಕಾಂ, ಹುಬ್ಬಳ್ಳಿ-ಧಾರವಾಡ.
6 ರಾಜೇಶ್ವರಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಜೆಸ್ಕಾಂ, ಕಲಬುರಗಿ.
7 ಮಾಣಿಕ್ ರಾವ್ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ, ಬೀದರ್.
8 ಶಿವರಾಜು ಹಾಸ್ಟೆಲ್ ಸೂಪರಿಂಟೆಂಡೆಂಟ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಂಡ್ಯ.

ಲೋಕಾಯುಕ್ತ ಅಧಿಕಾರಿಗಳ ತಂಡಗಳು ವಿವಿಧ ಸ್ಥಳಗಳಲ್ಲಿ ದಾಖಲೆಗಳು, ಆಸ್ತಿ-ಪಾಸ್ತಿ ವಿವರಗಳು ಹಾಗೂ ಇತರೆ ಸಂಬಂಧಿತ ದಾಖಲೆಗಳನ್ನು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಲೋಕಾಯುಕ್ತ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

## ವಿವಿಧ ದಾಖಲೆಗಳ ಪರಿಶೀಲನೆ

ಒಂದೇ ಸಮಯದಲ್ಲಿ ಎರಡು ಮನೆಗಳು ಹಾಗೂ ಕಚೇರಿ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳು, ಆದಾಯದ ಮೂಲಗಳು, ಆಸ್ತಿ-ಪಾಸ್ತಿ, ಹಣಕಾಸು ವ್ಯವಹಾರಗಳು ಸೇರಿದಂತೆ ವಿವಿಧ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ ಎಂದು ತಿಳಿದು ಬಂದಿದೆ.

# ಇ-ಆಸ್ತಿ 2.0ಗೆ ಚಾಲನೆ ಒಂದೇ ವೇದಿಕೆಯಲ್ಲಿ ಆಸ್ತಿ ವಿಭಜನೆ ಸೇರಿ ಹಲವು ಸೇವೆಗಳು

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ಆಸ್ತಿ ದಾಖಲೆಗಳು ಹಾಗೂ ಇ-ಖಾತಾ ನಿರ್ವಹಣಾ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ನಿಟ್ಟಿನಲ್ಲಿ ಇ-ಆಸ್ತಿ 2.0 ತಂತ್ರಾಂಶಕ್ಕೆ ಇಂದು ಬೆಂಗಳೂರು ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಚಾಲನೆ ನೀಡಿದರು. ನಾಗರಿಕರಿಗೆ ಆಸ್ತಿ ಸಂಬಂಧಿತ ಸೇವೆಗಳನ್ನು ಸುಲಭವಾಗಿ, ವೇಗವಾಗಿ ಹಾಗೂ ಪಾರದರ್ಶಕವಾಗಿ ಒದಗಿಸುವ ಉದ್ದೇಶದಿಂದ ಈ ನೂತನ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ. ಹಿಂದಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಕ್ಟೋಬರ್ 2024ರಲ್ಲಿ ಇ-ಆಸ್ತಿ 1.0 ತಂತ್ರಾಂಶವನ್ನು ಜಾರಿಗೊಳಿಸಲಾಗಿತ್ತು. ಇದರಡಿ ಸುಮಾರು 25 ಲಕ್ಷ ಆಸ್ತಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ, ಗಣಕೀಕರಣಗೊಳಿಸಿ ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗಿತ್ತು. ತಂತ್ರಜ್ಞಾನ ಆಧಾರಿತ ಹಾಗೂ ನಾಗರಿಕ ಕೇಂದ್ರಿತ ಸೇವೆಗಳಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ, ಈ



ಉದಯವಾಹಿನಿ ಚಿತ್ರ

ಯೋಜನೆಗೆ ಭಾರತ ಸರ್ಕಾರದ ರಾಷ್ಟ್ರೀಯ ಇ-ಆಡಳಿತ ಚಿನ್ನದ ಪ್ರಶಸ್ತಿ-2025 ದೊರೆತಿತ್ತು. ಇದೀಗ ಅದರ ಮುಂದುವರಿದ ಭಾಗವಾಗಿ ಜಿಬಿಎಯ ಆಂತರಿಕ ಮಾಹಿತಿ ತಂತ್ರಜ್ಞಾನ ತಂಡವು ಇ-ಆಸ್ತಿ 2.0 ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ. ಸುಧಾರಿತ ತಂತ್ರಜ್ಞಾನ, ಉತ್ತಮ ಬಳಕೆದಾರ ಅನುಭವ, ಸ್ವಯಂಚಾಲಿತ ಕಾರ್ಯವಿಧಾನ, ದತ್ತಾಂಶ ಸುರಕ್ಷತೆ ಹಾಗೂ ಇತರ ಸರ್ಕಾರಿ ವ್ಯವಸ್ಥೆಗಳೊಂದಿಗೆ ಸಮನ್ವಯಕ್ಕೆ ಆದ್ಯತೆ ನೀಡಲಾಗಿದೆ. ನೂತನ ವ್ಯವಸ್ಥೆಯ ನಾಗರಿಕ ಮಾಡ್ಯೂಲ್ ಮೂಲಕ ಸಾರ್ವಜನಿಕರು ಇ-ಖಾತಾ ಹಾಗೂ ಆಸ್ತಿ ಸಂಬಂಧಿತ ವಿವಿಧ ಸೇವೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯ ಸ್ಥಿತಿಗತಿಯನ್ನು ಪರಿಶೀಲಿಸಲು ಹಾಗೂ ಪ್ರಕ್ರಿಯೆಯ ಪ್ರಗತಿಯನ್ನು ಗಮನಿಸಲು ಸಹ ಅವಕಾಶ ಕಲ್ಪಿಸಲಾಗಿದೆ. ಇದರಿಂದ ಕಚೇರಿಗಳಿಗೆ ಖುದ್ದಾಗಿ ಭೇಟಿ ನೀಡುವ ಅಗತ್ಯ ಕಡಿಮೆಯಾಗಲಿದೆ ಎಂದು ಜಿಬಿಎ ತಿಳಿಸಿದೆ.

ಕರಡು ಇ-ಖಾತಾವನ್ನು ಅಗತ್ಯ ಪರಿಶೀಲನೆಗಳ ಬಳಿಕ ಅಂತಿಮ ಇ-ಖಾತಾವಾಗಿ ಪರಿವರ್ತಿಸುವ ವ್ಯವಸ್ಥೆಯೂ ಇರಲಿದೆ. ಜತೆಗೆ, ಆಸ್ತಿ ಮಾಲೀಕತ್ವ ಬದಲಾವಣೆಗಳಿಗೆ ಸಂಬಂಧಿಸಿದ ಖಾತಾ ವರ್ಗಾವಣೆ ಅಥವಾ ಮ್ಯುಟೇಷನ್ ಸೇವೆಗಳನ್ನು ಸಹ ನೂತನ ವ್ಯವಸ್ಥೆಯಡಿ ನಿರ್ವಹಿಸಬಹುದಾಗಿದೆ. -ಸಚಿವ ಕೃಷ್ಣ ಬೈರೇಗೌಡ

# ಮಂಗಳೂರು ಪಿಲಿಕುಳಕ್ಕೆ ಹೊಸ ರೂಪ: 339.90 ಎಕರೆ ಸಮಗ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್, ಶೀಘ್ರ ಟೆಂಡರ್

• ಉದಯವಾಹಿನಿ, ಬೆಂಗಳೂರು

**ಮಂಗಳೂರಿನಲ್ಲಿರುವ ಪಿಲಿಕುಳಕ್ಕೆ ಹೊಸ ರೂಪ ನೀಡಲು ಸರ್ಕಾರ ಮುಂದಾಗಿದ್ದು, ಇದಕ್ಕಾಗಿ ಮಾಸ್ಟರ್ ಪ್ಲಾನ್ ರೂಪಿಸಲಾಗುತ್ತಿದೆ ಎಂದು ಸಚಿವ ಅಜಯ್‌ಧರಂ ಸಿಂಗ್ ಹೇಳಿದ್ದಾರೆ.**

ಮಂಗಳೂರಿನ ಪಿಲಿಕುಳ ನಿಸರ್ಗಧಾಮವನ್ನು ವಿಜ್ಞಾನ, ಪರಿಸರ, ಶಿಕ್ಷಣ ಮತ್ತು ಪ್ರವಾಸೋದ್ಯಮವನ್ನು ಒಳಗೊಂಡ ಸಮಗ್ರ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಮಾಸ್ಟರ್ ಪ್ಲಾನ್ ರೂಪಿಸಲಾಗುತ್ತಿದ್ದು, ಇದಕ್ಕಾಗಿ ಶೀಘ್ರದಲ್ಲೇ ಟೆಂಡರ್ ಕರೆಯುವಂತೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳು, ವಿಜ್ಞಾನಿಗಳು ಹಾಗೂ ವಿವಿಧ ಅಧೀನ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಇಲಾಖೆಯ ಪ್ರಮುಖ ಯೋಜನೆಗಳು ಹಾಗೂ ಮುಂದಿನ ಕಾರ್ಯಕ್ರಮಗಳ ಕುರಿತು ಸಮಗ್ರ ಮಾಹಿತಿ ಪಡೆದರು. ಪಿಲಿಕುಳದ ಅಭಿವೃದ್ಧಿ ಕುರಿತು ವಿಶೇಷವಾಗಿ ಚರ್ಚಿಸಿದ ಅವರು, ಲಭ್ಯವಿರುವ ಜಮೀನಿನ ಸಮರ್ಪಕ ಬಳಕೆ, ಈಗಿರುವ ಸೌಲಭ್ಯಗಳ ಉನ್ನತೀಕರಣ, ಹೊಸ ಆಕರ್ಷಣೆಗಳ ಅಭಿವೃದ್ಧಿ, ವಿಜ್ಞಾನ ಶಿಕ್ಷಣ, ಪರಿಸರ ಮತ್ತು ಜೈವವೈವಿಧ್ಯ ಸಂರಕ್ಷಣೆ ಹಾಗೂ ಪ್ರವಾಸಿಗರಿಗೆ ಉತ್ತಮ ಅನುಭವ ನೀಡುವ ಅಂಶಗಳು ಮಾಸ್ಟರ್ ಪ್ಲಾನ್‌ನಲ್ಲಿ ಒಳಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಪಿಲಿಕುಳದಲ್ಲಿ ಉತ್ತಮ ಭೂಮಿ, ಪ್ರಕೃತಿ ಸಂಪತ್ತು ಹಾಗೂ ಈಗಾಗಲೇ ವಿಜ್ಞಾನ ಮತ್ತು ಪ್ರವಾಸೋದ್ಯಮಕ್ಕೆ ಪೂರಕವಾದ ಮೂಲಸೌಕರ್ಯ ಇದೆ.


ಉದಯವಾಹಿನಿ ಚಿತ್ರ

ಇದನ್ನು ತುಂಡು-ತುಂಡಾಗಿ ಅಭಿವೃದ್ಧಿಪಡಿಸುವ ಬದಲು ಮುಂದಿನ 1015 ವರ್ಷಗಳ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಸಮಗ್ರ ಮಾಸ್ಟರ್ ಪ್ಲಾನ್ ರೂಪಿಸಬೇಕು.

ಪಿಲಿಕುಳವನ್ನು ದೇಶದ ಪ್ರಮುಖ ವಿಜ್ಞಾನ ಮತ್ತು ಪರಿಸರ ಪ್ರವಾಸೋದ್ಯಮ ತಾಣಗಳಲ್ಲಿ ಒಂದಾಗಿ ಬೆಳೆಸುವ ಸಾಧ್ಯತೆಗಳನ್ನು ಪರಿಶೀಲಿಸಬೇಕು ಎಂದು ಹೇಳಿದ್ದಾರೆ.

ಪಿಲಿಕುಳದ ಅಭಿವೃದ್ಧಿಯಲ್ಲಿ ಸಾರ್ವಜನಿಕಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಬಹುದು, ಯಾವ ಸೌಲಭ್ಯಗಳನ್ನು ವಾಣಿಜ್ಯವಾಗಿ ಮತ್ತು ಸುಸ್ಥಿರವಾಗಿ ನಿರ್ವಹಿಸಬಹುದು ಹಾಗೂ ನಿಸರ್ಗಧಾಮವನ್ನು ಆರ್ಥಿಕವಾಗಿ ಸದೃಢಗೊಳಿಸಲು ಯಾವ ರೀತಿಯ ಆದಾಯ ಮಾದರಿಗಳನ್ನು ರೂಪಿಸಬಹುದು ಎಂಬುದನ್ನು ಮಾಸ್ಟರ್ ಪ್ಲಾನ್‌ನಲ್ಲಿ ಸಮಗ್ರವಾಗಿ ಅಧ್ಯಯನ ಮಾಡಬೇಕು ಎಂದು ಸಚಿವರು ಸೂಚಿಸಿದ್ದಾರೆ.

# ನೇಮಕಾತಿ ಅಕ್ರಮ; ಕೆಪಿಎಸ್‌ಸಿಯನ್ನೇ ಮುಚ್ಚುವ ಬಗ್ಗೆ ಚರ್ಚೆ ನಡೆಸುತ್ತಿದ್ದೇವೆ ಎಂದ ಸಿಎಂ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿಯಲ್ಲಿ ಪದೇಪದೆ ಅಕ್ರಮಗಳು ಬೆಳಕಿಗೆ ಬರುತ್ತಿರುವ ಹಿನ್ನೆಲೆಯಲ್ಲಿ ಕೆಪಿಎಸ್‌ಸಿಯನ್ನೇ ಮುಚ್ಚುವ (ರದ್ದು) ಬಗ್ಗೆ ಚರ್ಚೆ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಸಂಸ್ಥೆಯ ಮೇಲೆ ಅಪಾರ ನಂಬಿಕೆ ಇಟ್ಟು ನೇಮಕಾತಿ ಜವಾಬ್ದಾರಿ ವಹಿಸಲಾಗುತ್ತಿತ್ತು. ಅಕ್ರಮಗಳು ಮರುಕಳಿಸುತ್ತಿರುವುದು ಲಕ್ಷಾಂತರ ಅಭ್ಯರ್ಥಿಗಳ ಹಾಗೂ ಮಕ್ಕಳ ಭವಿಷ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಇನ್ನು ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ತನಿಖೆಗೆ ಎಸ್‌ಐಟಿ ರಚಿಸಲು ಹೈಕೋರ್ಟ್ ಆದೇಶ ನೀಡಿರುವ ಬಗ್ಗೆ ಮಾತನಾಡಿರುವ ಅವರು, ಹೈಕೋರ್ಟ್ ನಿರ್ದೇಶನವನ್ನು ಸ್ವಾಗತಿಸುತ್ತೇವೆ.

ನಮ್ಮ ಪೊಲೀಸರೂ ಕೂಡ ಈಗಾಗಲೇ ಉತ್ತಮವಾಗಿ ತನಿಖೆ ನಡೆಸುತ್ತಿದ್ದಾರೆ. ಆದರೆ, ಇಂತಹುದೇ ಪೊಲೀಸ್ ಅಧಿಕಾರಿ ನೇತೃತ್ವದಲ್ಲಿ ತನಿಖೆ ನಡೆಸಬೇಕು ಎಂದು ಸೂಚಿಸಿರುವುದು ಸರಿಯಲ್ಲ. ಯಾವ ಅಧಿಕಾರಿಗಳ ಕೈಯಲ್ಲಿ ತನಿಖೆ ಮಾಡಿಸಬೇಕು. ನಮ್ಮ ಪೊಲೀಸರೂ ಕೂಡ ಈಗಾಗಲೇ ಉತ್ತಮವಾಗಿ ಎಂಬುವುದನ್ನು ಸರ್ಕಾರಕ್ಕೆ ಬಿಡಬೇಕು ಎಂದು ಹೇಳಿದ್ದಾರೆ.

# ಯಾವುದೇ ರಾಜಕೀಯ ಬೆರೆಸದೆ, ಪರಿಸರ ಪ್ರಕೃತಿ ಸಂರಕ್ಷಿಸಬೇಕು, ಆ ಪ್ರದೇಶಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಬೇಕು: ಸಚಿವ ಈಶ್ವರ್ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ದೊಡ್ಡ ಒತ್ತುವರಿದಾರರಿಗೆ ಅವಕಾಶ ನೀಡಬಾರದು. ಯಾವುದೇ ರಾಜಕೀಯ ಬೆರೆಸದೆ, ಪರಿಸರ ಪ್ರಕೃತಿ ಸಂರಕ್ಷಿಸಬೇಕು, ನೇಪಾಳದ ದುರಂತ ನಮ್ಮ ಕಣ್ಣಮುಂದಿದೆ. ಜಾಗತಿಕ ತಾಪಮಾನ ಏರುತ್ತಿದೆ. ಇದನ್ನೂ ಗಮನಹರಿಸಬೇಕು ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದರು. ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಮೇಲಿನ ಚರ್ಚೆ ವೇಳೆ ಮಾತನಾಡಿದ ಅವರು, ಕೇಂದ್ರ ಅಧಿಸೂಚನೆ ಹೊರಡಿಸಿದ್ದು, ಅದಕ್ಕೂ ಉತ್ತರದಾಯಿತ್ವ ಇದೆ. ಹೀಗಾಗಿ ಆ ಪ್ರದೇಶಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮಸ್ಯೆ ಪರಿಹರಿಸಬೇಕು. ಕಸ್ತೂರಿ ರಂಗನ್ ವರದಿಗೆ ಸಂಬಂಧಿಸಿದಂತೆ ರಾಜ್ಯಗಳ ಸಲಹೆ ಪರಿಶೀಲಿಸಲು ನೇಮಕವಾದ ಸಂಜಯ ಕುಮಾರ್ ಸಮಿತಿ, ಪಶ್ಚಿಮ ಘಟ್ಟದ ಬಾಧಿತ ಗ್ರಾಮಗಳಿಗೆ ಭೇಟಿ ನೀಡಿ ಜನರ ಅಭಿಪ್ರಾಯವನ್ನೇ ಪಡೆಯಲಿಲ್ಲ ಎಂದರು.

ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಮೇಲಿನ ಚರ್ಚೆ ವೇಳೆ ಸಚಿವ ಈಶ್ವರ್ ಖಂಡ್ರೆ ಮಾತನಾಡಿದರು. ನಿವೃತ್ತ ಅರಣ್ಯಾಧಿಕಾರಿ ಸಂಜಯ್‌ಕುಮಾರ್ ಅರಣ್ಯ ಸಚಿವನಾಗಿದ್ದಾಗ ನನ್ನ ಭೇಟಿ ಮಾಡಿದ್ದರು. ನಾನು ಗ್ರಾಮ ಪಂಚಾಯಿತಿಗಳಿಗೆ ಹೋಗಿ, ಜನವಸತಿ ಪ್ರದೇಶಕ್ಕೆ ಭೇಟಿ ನೀಡಿ ಅಭಿಪ್ರಾಯ ಪಡೆಯಲು ಸಲಹೆ ನೀಡಿದ್ದೆ. ಆದರೆ, ಅವರು ತಮ್ಮ ಕರ್ತವ್ಯ ಮಾಡಲಿಲ್ಲ.


ಉದಯವಾಹಿನಿ ಚಿತ್ರ

ಕಸ್ತೂರಿ ರಂಗನ್ ವರದಿಯಲ್ಲಿ ನಮೂದಿಸಿರುವ 20,668 ಚದರ ಕಿ.ಮೀ. ಪರಿಸರ ಸೂಕ್ಷ್ಮ ಪ್ರದೇಶದ ಪೈಕಿ 16,000 ಚದರ ಕಿ.ಮೀ ಈಗಾಗಲೇ ಹುಲಿ ಸಂರಕ್ಷಿತ ಪ್ರದೇಶ, ಅಭಯಾರಣ್ಯ, ಮೀಸಲು ಅರಣ್ಯ ಹೀಗೆ ಒಂದಲ್ಲಾ ಒಂದು ರೀತಿಯಲ್ಲಿ ಶೇ.80ರಷ್ಟು ಸಂರಕ್ಷಿತವಾಗಿದೆ. ಇದರ ಹೊರತಾಗಿ 10 ಜಿಲ್ಲೆಗಳ 34 ತಾಲ್ಲೂಕಿನ 1,449 ಹಳ್ಳಿಗಳು ಸೂಕ್ಷ್ಮ ಪ್ರದೇಶದಲ್ಲಿವೆ.

ಅವರಿಗೆ ನ್ಯಾಯ ಸಿಗಬೇಕು ಎಂದರೆ ಅಷ್ಟು ಪ್ರದೇಶ ಬಿಟ್ಟು ಬಿಡಿ ಎಂದು ಕೇಳಬೇಕು ಎಂದರು.

ಕೇರಳ ರಾಜ್ಯದಲ್ಲಿ ಸುಮಾರು 13 ಸಾವಿರ ಚ.ಕಿ.ಮೀ. ಪರಿಸರ ಸೂಕ್ಷ್ಮ ಪ್ರದೇಶ ಇತ್ತು. ಇದನ್ನು 9,900 ಚ.ಕಿ.ಮೀ. ಇಳಿಸಲಾಗಿದೆ. ಅದೇ ರೀತಿ ಸಭೆ ಮಾಡಿ ಸಮೀಕ್ಷೆ ಮಾಡಬೇಕು. ಹಲವು ನದಿಗಳ ಮೂಲವಾದ ಪಶ್ಚಿಮ ಘಟ್ಟ 8ನೇ ಜೀವವೈವಿಧ್ಯ ತಾಣವಾಗಿದೆ.

ಮಳೆಯ ಮಾರುತ ತಡೆದು ದೇಶವ್ಯಾಪ್ತಿ ಮಳೆ ಸುರಿಸಲು ನೆರವಾಗುತ್ತದೆ. ಹೀಗಾಗಿ ಅದನ್ನು ಸಂರಕ್ಷಿಸಬೇಕು. ಇಷ್ಟು ದಿನ ಅದು ಉಳಿದಿದ್ದರೆ ಅಲ್ಲಿನ ನಿವಾಸಿಗಳಿಂದ ಎಂದರು.

# ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕ್ವಾರಿಕ್ರಷರ್ ಬಂದ್ ಇಲಾಖೆಗೆ ಖಡಕ್ ಎಚ್ಚರಿಕೆ

## ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿರುವ ಕ್ರಷರ್‌ಗಳು ಬಂದ್‌ಗೆ ಬೆಂಬಲ ಸೂಚಿಸಿದ್ದು, ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಗಳ ಕಾರ್ಯಾಚರಣೆ ಸ್ಥಗಿತಗೊಂಡಿದೆ

• ಉದಯವಾಹಿನಿ, ಬೆಂಗಳೂರು

ಕಲ್ಲು ಗಣಿಗಾರಿಕೆಗೆ ಸಂಬಂಧಿಸಿದಂತೆ ಎರಡು ಕಡೆ ರಾಜಧನ ವಸೂಲಿ ಮಾಡುವ ಕ್ರಮ ಹಾಗೂ ಕ್ರಷರ್ ಮಾಲೀಕರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡಿರುವ ನೋಟಿಸ್‌ಗಳನ್ನು ವಿರೋಧಿಸಿ ಕರ್ನಾಟಕ ರಾಜ್ಯ ಕಲ್ಲು ಗಣಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಒಕ್ಕೂಟದ ನೇತೃತ್ವದಲ್ಲಿ ಸೆಪ್ಟೆಂಬರ್ 18ರಿಂದ ರಾಜ್ಯಾದ್ಯಂತ ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಮತ್ತು ಎಂ.ಸ್ಯಾಂಡ್ ಘಟಕಗಳ ಬಂದ್ ಮುಂದುವರಿದಿದೆ.

**1** ರಾಜಧನ ವಸೂಲಿ ಮಾಡುವ ಕ್ರಮ

**2** ಉದ್ಯಮದ ಮೇಲೆ ಅನಗತ್ಯ ಹೊರೆ

**3** ನೋಟಿಸ್‌ಗಳನ್ನು ಹಿಂಪಡೆಯಬೇಕು

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿರುವ ಕ್ರಷರ್‌ಗಳು ಬಂದ್‌ಗೆ ಬೆಂಬಲ ಸೂಚಿಸಿದ್ದು, ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಗಳ ಕಾರ್ಯಾಚರಣೆ ಸ್ಥಗಿತಗೊಂಡಿದೆ. ಒಕ್ಕೂಟದ ಪ್ರಮುಖ ಬೇಡಿಕೆಗಳನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಸರ್ಕಾರ ಕೂಡಲೇ ಪರಿಗಣಿಸಿ ಸ್ಪಷ್ಟವಾದ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಡಿ. ಸಿದ್ಧರಾಜು, ''ಎರಡು ಕಡೆ ರಾಜಧನ ವಸೂಲಿ ಮಾಡುವ ಕ್ರಮವನ್ನು ಕೂಡಲೇ ಕೈಬಿಡಬೇಕು. ಈಗಾಗಲೇ ರಾಜಧನ ಪಾವತಿಯಾಗಿದ್ದರೂ ಮತ್ತೊಮ್ಮೆ ಗಣಿಗುತ್ತಿಗೆದಾರರಿಂದ ರಾಜಧನ ವಸೂಲಿ ಮಾಡುತ್ತಿರುವುದು ಉದ್ಯಮದ ಮೇಲೆ ಅನಗತ್ಯ ಆರ್ಥಿಕ ಹೊರೆ ಉಂಟುಮಾಡುತ್ತಿದೆ. ಇದರ ಜೊತೆಗೆ ಕ್ರಷರ್ ಮಾಲೀಕರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡುತ್ತಿರುವ ನೋಟಿಸ್‌ಗಳನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ಸೆಪ್ಟೆಂಬರ್ 18ರಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಗಳನ್ನು ಬಂದ್ ಮಾಡಲಾಗಿದೆ. ನಮ್ಮ ಬೇಡಿಕೆಗಳು ಈಡೇರುವವರೆಗೆ ಈ ಹೋರಾಟ ಮುಂದುವರಿಯಲಿದೆ. ರಾಜಧನ ಸಂಗ್ರಹದ ಕುರಿತು ಸರ್ಕಾರ ಸ್ಪಷ್ಟ ಆದೇಶ ಹೊರಡಿಸಿ, ಅದನ್ನು ರಾಜ್ಯಪತ್ರದಲ್ಲಿ ಪ್ರಕಟಿಸುವವರೆಗೆ ಬಂದ್ ಹಿಂಪಡೆಯುವ ಪ್ರಶ್ನೆಯೇ ಇಲ್ಲ,'' ಎಂದು ಅವರು ಸ್ಪಷ್ಟಪಡಿಸಿದರು. ನಿರ್ಮಾಣ ಕಾಮಗಾರಿಗಳಿಗೆ ಅಗತ್ಯವಾಗಿರುವ ಜಲ್ಲಿ ಮತ್ತು ಎಂ.ಸ್ಯಾಂಡ್ ಪೂರೈಕೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ನಿರ್ಮಾಣ ಕ್ಷೇತ್ರದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ''ನಮ್ಮ ಪ್ರಮುಖ ಬೇಡಿಕೆಗಳನ್ನು ಈಡೇರಿಸದೆ ಹೋರಾಟವನ್ನು ನಿರ್ಲಕ್ಷಿಸಿದರೆ, ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಒಕ್ಕೂಟದ ಉಪಾಧ್ಯಕ್ಷರಾದ ವಾಗೀಶ್, ಅಬ್ದುಲ್ ಮಜಿದ್, ಮನೋಜ್ ಶೆಟ್ಟರ್, ಪಂಚಮಿ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಸಿ.ಎಸ್. ಭಾಸ್ಕರ್, ಉಪ ಕಾರ್ಯದರ್ಶಿ ಡಿ.ಆರ್. ಮಹೇಶ್, ಸಂಘಟನಾ ಕಾರ್ಯದರ್ಶಿ ಕೆ.ವಿ. ಚೌಧರಿ, ಕೋಶಾಧಿಕಾರಿ ಉಮಾಶಂಕರಯ್ಯ, ವಿ.ಎಸ್. ಪಾಟೀಲ್ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

ಅಗತ್ಯವಿದ್ದಲ್ಲಿ ಸರ್ಕಾರದ ವಿರುದ್ಧ ಕಾನೂನು ಹೋರಾಟವನ್ನೂ ನಡೆಸಲಾಗುವುದು. ಬೇಡಿಕೆ ಈಡೇರುವವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಬಂದ್ ಮತ್ತು ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು - ಡಿ. ಸಿದ್ಧರಾಜು.

## ಹೋರಾಟಕ್ಕೆ ಬೆಂಬಲ

ರಾಜ್ಯದ ಎಲ್ಲಾ ಜಿಲ್ಲಾ ಘಟಕಗಳು ಬಂದ್‌ಗೆ ಸಂಪೂರ್ಣ ಬೆಂಬಲ ನೀಡಿವೆ. ಕರ್ನಾಟಕ ಪಟ್ಟಾ ಲ್ಯಾಂಡ್ ಕ್ವಾರಿ ಅಂಡ್ ಜಲ್ಲಿ ಸ್ಟೋನ್ ಕ್ರಷರ್ ಓನರ್ಸ್ ಅಸೋಸಿಯೇಷನ್ ಕೂಡ ಹೋರಾಟಕ್ಕೆ ಬೆಂಬಲ ಸೂಚಿಸಿದೆ ಎಂದು ಒಕ್ಕೂಟ ತಿಳಿಸಿದೆ.

# ರಾಜಮನೆತನದ ಖಾಸಗಿ ದಸರಾ ಆಚರಣೆ ಕುರಿತು ಪ್ರಮೋದಾದೇವಿ ಒಡೆಯರ್ ಹೇಳಿದ್ದೇನು?

• ಉದಯವಾಹಿನಿ, ಮೈಸೂರು

ಪ್ರತಿ ಬಾರಿಯಂತೆ ಈ ಬಾರಿಯೂ ರಾಜಮನೆತನದ ಖಾಸಗಿ ದಸರಾ ಆಚರಣೆ ಸಾಂಪ್ರದಾಯಿಕ ಹಾಗೂ ಶಾಸ್ತ್ರೋಕ್ತವಾಗಿ ನಡೆಯಲಿದ್ದು, ರಾಜಮನೆತನದ ದಸರಾ ಆಚರಣೆ ಕುರಿತು ಮಾಧ್ಯಮದವರಿಗೆ ರಾಜಮಾತೆ ಪ್ರಮೋದಾದೇವಿ ಒಡೆಯರ್ ಮಾಹಿತಿ ನೀಡಿದ್ದಾರೆ. ಮಂಗಳವಾರ ಅಂಬಾವಿಲಾಸ ಅರಮನೆಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಗಣೇಶ ಹಬ್ಬದ ಬಳಿಕ ದಸರಾದ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಅ.5 ರಂದು ಸಿಂಹಾಸನ ಜೋಡಣೆ ನಡೆಯಲಿದ್ದು, ಅಂದು ಬೆಳಗ್ಗೆ 7:30ಕ್ಕೆ ನವಗ್ರಹ ಹೋಮ, ಶಾಂತಿ ಹೋಮ ನಡೆಸಿ 10 ಗಂಟೆಯಿಂದ 10:20ಕ್ಕೆ ಸಿಂಹಾಸನವನ್ನು ಜೋಡಿಸಲಾಗುವುದು ಎಂದರು. ಅಕ್ಟೋಬರ್ 11 ರಂದು ಬೆಳಗ್ಗೆ 6 ರಿಂದ 7:12 ಗಂಟೆವರೆಗೆ ಸಿಂಹಾಸನಕ್ಕೆ ಸಿಂಹ ಜೋಡಣೆಯಾಗುತ್ತದೆ. 8:35 ರಿಂದ 9:05ರೊಳಗೆ ಕಂಕಣ ಧಾರಣೆ, 11:45ರಿಂದ ಮಧ್ಯಾಹ್ನ 12:05ರೊಳಗೆ ಸಿಂಹಾಸನಾರೋಹಣ, 1:40 ರಿಂದ 2:05ಕ್ಕೆ ತಾಯಿ ಚಾಮುಂಡೇಶ್ವರಿಯನ್ನು ಚಾಮುಂಡಿ ತೊಟ್ಟಿಯಿಂದ ಕನಕ ತೊಟ್ಟಿಗೆ ತಂದು ವಿಜಯದಶಮಿ ಪರ್ಯಂತ ನಿತ್ಯಪೂಜೆ ಮಾಡಲಾಗುವುದು. ಅಕ್ಟೋಬರ್ 16ರ ಬೆಳಗ್ಗೆ 10:10 ರಿಂದ 10:30ರ ತನಕ ಸರಸ್ವತಿ ಪೂಜೆ ಪ್ರಾರಂಭವಾಗಲಿದೆ. ಅಕ್ಟೋಬರ್ 17ರ ಸಾಯಂಕಾಲ ದರ್ಬಾರ್ ಆದ ಬಳಿಕ ಕಾಳರಾತ್ರಿ ಪೂಜೆ ಜರುಗಲಿದ್ದು, ಅ.18 ರಂದು ದುರ್ಗಾಷ್ಟಮಿ ಪೂಜೆ ನೆರವೇರಲಿದೆ ಎಂದು ತಿಳಿಸಿದ್ದಾರೆ. **ಆಯುಧ ಪೂಜೆ:** ಅಕ್ಟೋಬರ್ 20 ರಂದು ಮಹಾನವಮಿ ಪ್ರಯುಕ್ತ ಬೆಳಗ್ಗೆ 6 ಗಂಟೆಗೆ ಚಂಡಿ ಹೋಮ ಪ್ರಾರಂಭವಾಗಲಿದ್ದು, 6:30ಕ್ಕೆ ಕೋಡಿ ಸೋಮೇಶ್ವರ ದೇವಸ್ಥಾನಕ್ಕೆ ಅರಮನೆಯಿಂದ ಆಯುಧಗಳನ್ನು ಕೊಂಡೊಯ್ದು ಅವುಗಳಿಗೆ ಎಣ್ಣೆ ಶಾಸ್ತ್ರವಾಗಿ 8:30ರಿಂದ 8:50ರೊಳಗೆ ಕಲ್ಯಾಣ ಮಂಟಪಕ್ಕೆ ವಾಪಸ್ ಬರಲಿವೆ. 9:15ಕ್ಕೆ ಚಂಡಿ ಹೋಮ ಪೂರ್ಣಾಹುತಿ ಆಗಲಿದೆ. 11:32ರಿಂದ 11:52ರೊಳಗೆ ಕಲ್ಯಾಣಮಂಟಪದಲ್ಲಿ ಆಯುಧಪೂಜೆ ನಡೆಸಲಾಗುವುದು. ಅದಾದ ಬಳಿಕ ಅರಮನೆ ಆನೆ, ಹಸು, ಕುದುರೆ ಹಾಗೂ ವಾಹನಗಳಿಗೆ ಪೂಜೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

**ವಿಜಯದಶಮಿ:** ಅಕ್ಟೋಬರ್ 21 ವಿಜಯದಶಮಿಯಂದು ಬೆಳಗ್ಗೆ 8ಕ್ಕೆ ಆನೆ, ಕುದುರೆಗಳನ್ನು ಆನೆ ಬಾಗಿಲ ಬಳಿ ಕರೆತರಲಾಗುವುದು. ಬಳಿಕ 8:15ಕ್ಕೆ ಕಲ್ಯಾಣ ಮಂಟಪದಲ್ಲಿ ಉತ್ತರ ಪೂಜೆ ಪ್ರಾರಂಭವಾಗಲಿದ್ದು, 9:30 ರಿಂದ 10:10ರೊಳಗೆ ವಿಜಯ ಯಾತ್ರೆ ನಡೆಯಲಿದೆ. ಆಯುಧ ಪೂಜೆ, ಬಳಿಕ ಸಿಂಹ ವಿಸರ್ಜನೆಯಾಗಲಿದ್ದು ನ.19 ರಂದು ಸಿಂಹಾಸನವನ್ನು ಯಥಾಸ್ಥಾನದಲ್ಲೇ ಇರಿಸಲಾಗುವುದು ಎಂದು ಪ್ರಮೋದಾದೇವಿ ಒಡೆಯರ್ ಅರಮನೆಯಲ್ಲಿ ನಡೆಯಲಿರುವ ರಾಜಮನೆತನದ ನವರಾತ್ರಿ ಪೂಜಾ ಕೈಂಕರ್ಯಗಳ ಬಗ್ಗೆ ಮಾಹಿತಿ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ಉದಯವಾಹಿನಿ
ಪ್ರಾದೇಶಿಕ
ಬುಧವಾರ
23 ಸೆಪ್ಟೆಂಬರ್ 2026


## ಮಿನಿ ನ್ಯೂಸ್

### ಕಾಲೇಜು ಮುಂದೆ ಕಾರು ಡಿಕ್ಕಿಯಾಗಿ ವಿದ್ಯಾರ್ಥಿ ಸಾವು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಕಾರು ಡಿಕ್ಕಿ ಹೊಡೆದು ಕಾಲೇಜಿನ ಮುಂಭಾಗ ನಿಂತಿದ್ದ ವಿದ್ಯಾರ್ಥಿ ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ನಂಜನಗೂಡು ತಾಲ್ಲೂಕಿನ ಮುಖ್ಯ ರಸ್ತೆಯಲ್ಲಿನ ಜೆಎಸ್‌ಎಸ್ ಪಾಲಿಟೆಕ್ನಿಕ್ ಕಾಲೇಜಿನ ಮುಂದೆ ಬೆಳಗ್ಗೆ ನಡೆದಿದೆ. ಮೃತನನ್ನು ನಂಜನಗೂಡು ಪಟ್ಟಣದ ನಿವಾಸಿ ಧರಣೇಂದ್ರ ಬಾಬು ಅವರ ಪುತ್ರ ಪ್ರಿತೇಶ್ ಜೈನ್ (19) ಎಂದು ಗುರುತಿಸಲಾಗಿದೆ. ಪ್ರಿತೇಶ್ ಜೈನ್ ಕೋರ್ಸ್ ಪೂರ್ಣಗೊಳಿಸಿ ಉದ್ಯೋಗಕ್ಕೂ ಆಯ್ಕೆಯಾಗಿದ್ದ. ನೇಮಕಾತಿ ಪ್ರಮಾಣಪತ್ರ ಪಡೆದು ರಸ್ತೆ ಬದಿ ನಿಂತಿದ್ದ ವಿದ್ಯಾರ್ಥಿಗೆ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದಿದೆ ಎಂದು ತಿಳಿದುಬಂದಿದೆ. ಅಪಘಾತದ ರಭಸಕ್ಕೆ ಗಂಭೀರವಾಗಿ ಗಾಯಗೊಂಡ ಪ್ರಿತೇಶ್ ಜೈನ್ ಸ್ಥಳದಲ್ಲಿಯೇ ಪ್ರಾಣಬಿಟ್ಟಿದ್ದಾನೆ. ಘಟನೆ ಬಳಿಕ ಸ್ಥಳದಲ್ಲೇ ಕಾರನ್ನು ಬಿಟ್ಟು ಚಾಲಕ ಪರಾರಿಯಾಗಿದ್ದಾನೆ. ಪೊಲೀಸರು ಘಟನಾ ಸ್ಥಳಕ್ಕೆ ಆಗಮಿಸಿ, ಬೆಂಗಳೂರು ನೋಂದಣಿಯ ಕಾರನ್ನು ವಶಕ್ಕೆ ಪಡೆದಿದ್ದಾರೆ. ವಿದ್ಯಾರ್ಥಿಯ ಸಾವಿನಿಂದ ಆಕ್ರೋಶಗೊಂಡ ವಿದ್ಯಾರ್ಥಿಗಳು ಜೆಎಸ್ ಎಸ್ ಪಾಲಿಟೆಕ್ನಿಕ್ ಕಾಲೇಜಿನ ಮುಂಭಾಗ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿರುದ್ಧ ಘೋಷಣೆ ಕೂಗಿ, ಮೃತ ವಿದ್ಯಾರ್ಥಿ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡುವಂತೆ ಆಗ್ರಹಿಸಿದರು. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಾರು ಚಾಲಕನಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ.

# ನಾಲೆ, ಕೆರೆಕಟ್ಟೆಗಳಿಗೆ ನೀರು ಹರಿಸಲು ಆಗ್ರಹಿಸಿ ಮಳವಳ್ಳಿಯಲ್ಲಿ ಪ್ರತಿಭಟನೆ

**ಮಳವಳ್ಳಿ ಪಟ್ಟಣದ ಸುಲ್ತಾನ್ ರಸ್ತೆಯ ಟಿಎಪಿಸಿಎಂಎಸ್ ಕಚೇರಿ ಮುಂಭಾಗ ಜೆಡಿಎಸ್-ಬಿಜೆಪಿ ಕಾರ್ಯಕರ್ತರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾಜಿ ಶಾಸಕ ಕೆ.ಅನ್ನದಾನಿ ಮಾತನಾಡಿದರು**

• ಉದಯವಾಹಿನಿ, ಮಳವಳ್ಳಿ

1 ಕೆರೆ ಕಟ್ಟೆಗಳಿಗೆ ನೀರು ಹರಿಸುತ್ತಿಲ್ಲ.
2 ಸಚಿವರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ
3 ನಮ್ಮ ರೈತರಿಗೆ ಅನ್ಯಾಯವಾಗುತ್ತಿದೆ'

ತಾಲ್ಲೂಕಿನ ನೀರಾವರಿ ಸಮಸ್ಯೆ ಹಾಗೂ ಟಿಎಪಿಸಿಎಂಎಸ್‌ನಲ್ಲಿ ನಡೆದಿರುವ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹಿಸಿ ಹಾಗೂ ತಾಲ್ಲೂಕು ಆಡಳಿತ ವೈಫಲ್ಯ ಖಂಡಿಸಿ ಜೆಡಿಎಸ್-ಬಿಜೆಪಿ ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು. ಪಟ್ಟಣದ ಸುಲ್ತಾನ್ ರಸ್ತೆಯ ಟಿಎಪಿಸಿಎಂಎಸ್ ಕಚೇರಿ ಮುಂಭಾಗ ಮಾಜಿ ಶಾಸಕ ಕೆ.ಅನ್ನದಾನಿ ನೇತೃತ್ವದಲ್ಲಿ ಜಮಾಯಿಸಿದ ಎರಡು ಪಕ್ಷಗಳ ಕಾರ್ಯಕರ್ತರು ವಿವಿಧ ಇಲಾಖೆಗಳ ಹಾಗೂ ಸಚಿವರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕೆ.ಅನ್ನದಾನಿ ಮಾತನಾಡಿ, ರಾಜ್ಯದ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳಗಿ ಹೋಗಿದೆ. ಮಳವಳ್ಳಿಯಲ್ಲಿ ಅಧಿಕಾರಿಗಳು ಹಣವಿಲ್ಲದೇ ಕೆಲಸ ಮಾಡುವುದಿಲ್ಲ, ಆಡಳಿತ ವ್ಯವಸ್ಥೆಯು ಹಳ್ಳ ಹಿಡಿದಿದೆ. ಸಮರ್ಪಕವಾಗಿ ಮಳೆವಿಲ್ಲದೇ ಬೆಳೆಗಳು ಒಣಗುತ್ತಿವೆ.

ಕೆಆರ್ ಎಸ್ ಜಲಾಶಯದಲ್ಲಿ ನೀರು ಇದ್ದರೂ ಕೆರೆ ಕಟ್ಟೆಗಳಿಗೆ ನೀರು ಹರಿಸುತ್ತಿಲ್ಲ. ಇದ್ದರಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿಗೆ ಹಾಹಾಕಾರ ಎದುರಾಗಿದೆ. ಜಿಲ್ಲೆಯವರೇ ನೀರಾವರಿ ಹಾಗೂ ಕೃಷಿ ಸಚಿವರಾಗಿದ್ದರೂ ನಮ್ಮ ರೈತರಿಗೆ ಅನ್ಯಾಯವಾಗುತ್ತಿದೆ' ಎಂದು ಆರೋಪಿಸಿದರು.ನಾಲೆಗಳಿಗೆ ಕೂಡಲೇ ನೀರು ಹರಿಸಬೇಕು. ಟಿಎಪಿಸಿಎಂಎಸ್ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಅಮಾನತು ಮಾಡಬೇಕು. ಎಫ್‌ಐಆರ್ ರದ್ದುಗೊಳಿಸಬೇಕು.



ಉದಯವಾಹಿನಿ ಚಿತ್ರ

ಆಡಳಿತಾಧಿಕಾರಿಗಳು ನೇಮಕವಾಗಿರುವ ಸಹಕಾರ ಸಂಘಗಳಿಗೆ ಕೂಡಲೇ ಚುನಾವಣೆ ನಡೆಸಬೇಕು ಎಂದು ಆಗ್ರಹಿಸಿದರು. ಬಿಜೆಪಿ ರೈತ ಮೋರ್ಚಾದ ರಾಜ್ಯ ಕಾರ್ಯದರ್ಶಿ ಎಚ್.ಆರ್.ಅಶೋಕ್ ಕುಮಾರ್ ಮಾತನಾಡಿ, ರಾಜ್ಯದ ಅನೇಕ ಸಚಿವರು ಭ್ರಷ್ಟಾಚಾರದಲ್ಲಿ ತೊಡಗಿಸಿದ್ದಾರೆ. ರಾಜ್ಯದಲ್ಲಿ ಭೀಕರ ಬರಗಾಲ ಕಾಡುತ್ತಿದ್ದರೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ವಿರೋಧ ಪಕ್ಷಗಳ ನಾಯಕರನ್ನು ಟೀಕಿಸುವುದರಲ್ಲಿ ಕಾಲ ಕಳೆಯುತ್ತಿದ್ದಾರೆ. ಕೂಡಲೇ ಸಂಕಷ್ಟದಲ್ಲಿ ಇರುವ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು' ಎಂದು ಆಗ್ರಹಿಸಿದರು. ಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಪುಟ್ಟರಾಮು ಮಾತನಾಡಿ, ತಾಲ್ಲೂಕಿನಲ್ಲಿ ಸಹಕಾರ ವ್ಯವಸ್ಥೆಯು ಸಂಪೂರ್ಣವಾಗಿ ಹಾಳಾಗಿ ಹೋಗಿದೆ.

ರಾಜಕೀಯ ರಹಿತ ಸಹಕಾರ ಕ್ಷೇತ್ರವನ್ನು ಕೆಲವರು ಕಲುಷಿತಗೊಳಿಸಿದ್ದಾರೆ. ಹಲವು ಸಂಘಗಳಿಗೆ ಚುನಾವಣೆ ನಡೆಸದೇ ರಾಜಕೀಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಬಿಜೆಪಿ ರೈತ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ಯಮದೂರು ಸಿದ್ದರಾಜು, ಜೆಡಿಎಸ್ ಹಿಂದುಳಿದ ವರ್ಗಗಳ ಘಟಕದ ರಾಜ್ಯ ಅಧ್ಯಕ್ಷ ಜಯರಾಮು, ಮುಖಂಡರಾದ ಶಿವರುದ್ರಪ್ಪ, ಮಧು ಗಂಗಾಧರ್, ಅಶೋಕ್, ಚಿಕ್ಕಣ್ಣ, ಬಸವರಾಜು, ಮೆಹಬೂಬ್ ಪಾಷಾ, ಚಿಕ್ಕಣ್ಣ, ಹನುಮಂತು ಹಾಗೂ ಟಿಎಪಿಸಿಎಂಎಸ್‌ನ ಜೆಡಿಎಸ್ ಬೆಂಬಲಿತ ನಿರ್ದೇಶಕರು ಪಾಲ್ಗೊಂಡಿದ್ದರು.

> ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಹಾಸನದ ಪ್ರಜಾಸೇವಾ ಆಂದೋಲನದ ಕಾರ್ಯಕ್ರಮದ ಸಾರ್ವಜನಿಕ ವೇದಿಕೆಯಲ್ಲಿ ಲಂಚಕ್ಕೆ ಪ್ರೇರೇಪಿಸಿರುವುದು ಸರ್ಕಾರದ ಭ್ರಷ್ಟಾಚಾರಕ್ಕೆ ಸಾಕ್ಷಿಯಾಗಿದೆ. ಅಬಕಾರಿ ಸಚಿವರಾದ ಮೇಲೆ ಸಿಎಲ್-7 ಪರವಾನಗಿಗೆ ಲಂಚಕ್ಕೆ ಬೇಡಿಕೆಗೆ ಇಡುವ ಮೂಲಕ ಹಣ ಲೂಟಿಗೆ ಮುಂದಾಗಿದ್ದಾರೆ ಎಂದು ಮಾಜಿ ಶಾಸಕ ಕೆ.ಅನ್ನದಾನಿ ಆರೋಪಿಸಿದರು.



### ಬಿಡದಿ ಟೌನ್ ಶಿಪ್ : ಉಪವಾಸನಿರತರು ಅಸ್ವಸ್ಥ:ರಸ್ತೆ ತಡೆದು ಗಣೇಶ ಪ್ರತಿಷ್ಠಾಪನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಿಡದಿ

ಹೋಬಳಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆ ವಿರೋಧಿಸಿ, ಬೈರಮಂಗಲ ವೃತ್ತದಲ್ಲಿ ರೈತರು ನಿನ್ನೆಯಿಂದ ನಡೆಸುತ್ತಿರುವ ಅಹೋರಾತ್ರಿ ಉಪವಾಸ ಧರಣಿ ತಾರಕಕ್ಕೇರಿದೆ. ಉಪವಾಸ ನಿರತ ಮೂವರು ರೈತರು ಮಂಗಳವಾರ ಅಸ್ವಸ್ಥರಾಗಿದ್ದು, ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ.

ಬೆಳಿಗ್ಗೆ ಬಿಡದಿ- ಹಾರೋಹಳ್ಳಿ ರಸ್ತೆ ತಡೆದ ರೈತರು, ಅಲ್ಲಿಯೇ ಉಪವಾಸ ನಡೆಸಿದರು. ನಂತರ ರಸ್ತೆಯಲ್ಲೇ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ಉಪವಾಸ ಕುಳಿತರು. ಸರ್ಕಾರ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಘೋಷಣೆಗಳನ್ನು ಕೂಗಿದರು. ನಿನ್ನೆಯಿಂದಲೇ ಉಪವಾಸ ಕೈಗೊಂಡಿದ್ದ ರೈತರಾದ ನಾಗೇಶ್, ಕೃಷ್ಣಪ್ಪ ಹಾಗೂ ವೀರೇಶ್ ಅವರು ಮಧ್ಯಾಹ್ನ ಅಸ್ವಸ್ಥರಾದರು. ಸ್ಥಳಕ್ಕೆ ಬಂದ ವೈದ್ಯರು ಮೂವರಿಗೂ ಹಣ್ಣಿನ ರಸ ಕುಡಿಸಿ ಪ್ರಾಥಮಿಕ ಚಿಕಿತ್ಸೆ ನೀಡಿದರು.

## ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿ ರಜೆ ಮೇಲೆ ಊರಿಗೆ ಬಂದಿದ್ದ ಐಟಿಬಿಪಿ ಯೋಧ ಸಾವು

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿಯಾಗಿ, ರಜೆಯ ಮೇಲೆ ಊರಿಗೆ ಬಂದಿದ್ದ ಐಟಿಬಿಪಿ ಯೋಧ ಮೃತಪಟ್ಟ ಘಟನೆ ಕನಕಪುರ ಬೈಪಾಸ್ ರಸ್ತೆಯ ಗಡಸಳ್ಳಿ ಬಳಿ ತಡರಾತ್ರಿ ನಡೆದಿದೆ.

ಕನಕಪುರ ತಾಲ್ಲೂಕಿನ ಶಿವನಹಳ್ಳಿ ನಿವಾಸಿ ಚನ್ನವೀರೇಗೌಡ (45) ಮೃತಪಟ್ಟ ಯೋಧ. ಇಂಡೋ-ಟಿಬೆಟಿಯನ್ ಬಾರ್ಡರ್ ಪೊಲೀಸ್ ಪಡೆಯ ಯೋಧರಾಗಿದ್ದ ಚನ್ನವೀರೇಗೌಡ, ಮೊನ್ನೆಯಷ್ಟೇ ರಜೆಯ ಮೇಲೆ ಸ್ವಗ್ರಾಮಕ್ಕೆ ಬಂದಿದ್ದರು.

ತಡರಾತ್ರಿ ಯೋಧ ತಮ್ಮ ಮಗನೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ, ಗಡಸಳ್ಳಿ ಬಳಿ ರಸ್ತೆ ಬದಿ ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿಯಾಗಿದೆ. ಅಪಘಾತದ ತೀವ್ರತೆಗೆ ಚನ್ನವೀರೇಗೌಡಗೆ ಗಂಭೀರ ಗಾಯಗಳಾಗಿದ್ದು, ಕೂಡಲೇ ಕನಕಪುರ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಆದರೆ ಆಸ್ಪತ್ರೆಯಲ್ಲಿ ಯೋಧನಿಗೆ ಸೂಕ್ತ ಚಿಕಿತ್ಸೆ ಸಿಗದೇ ಮೃತಪಟ್ಟಿರೋದಾಗಿ ಕುಟುಂಬಸ್ಥರು ಆರೋಪ ಮಾಡಿದ್ದಾರೆ.

## ನಾಲ್ಕು ನೂರು ವರ್ಷಗಳ ಇತಿಹಾಸದ ಗಂಗಾಧರೇಶ್ವರ ದೇವಾಲಯದಲ್ಲಿ ಮಹಾ ಕುಂಭಾಭಿಷೇಕ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂತಾಮಣಿ

ಸುಮಾರು ನಾಲ್ಕು ನೂರು ವರ್ಷಗಳ ಇತಿಹಾಸ ಹೊಂದಿರುವ ತಾಲ್ಲೂಕಿನ ಕೆಂಚಾರ್ಲಹಳ್ಳಿ ಗ್ರಾಮದ ಶ್ರೀ ಗಂಗಾಧರೇಶ್ವರ ಸ್ವಾಮಿ ಹಾಗೂ ಜ್ಯೇಷ್ಠಾದೇವಿ ಸಮೇತ ದೇವಸ್ಥಾನ ದಲ್ಲಿ ಮಹಾ ಕುಂಭಾಭಿಷೇಕ ಮಹೋತ್ಸವವನ್ನು ಭಾನುವಾರ ಹಾಗೂ ಸೋಮವಾರ ಧಾರ್ಮಿಕ ಶ್ರದ್ಧಾಭಕ್ತಿಗಳಿಂದ ವಿಜೃಂಭಣೆಯಿಂದ ನೆರವೇರಿಸಲಾಯಿತು.

ಪುರಾತನ ದೇವಾಲಯದಲ್ಲಿ ಹಲವು ದಶಕಗಳ ಬಳಿಕ ನಡೆದ ಕುಂಭಾಭಿಷೇಕ ಮಹೋತ್ಸವಕ್ಕೆ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿಶೇಷ ಪೂಜೆ ಸಲ್ಲಿಸಿದರು. ದೇವಾಲಯವನ್ನು ದೀಪಾಲಂಕಾರ, ಬಾಳೆಕಂಬ ಹಾಗೂ ವಿವಿಧ ಅಲಂಕಾರಗಳಿಂದ ಸಿಂಗರಿಸಲಾಗಿದ್ದು, ಭಕ್ತರ ಗಮನ ಸೆಳೆಯಿತು. ಸುಮಾರು 5060 ವರ್ಷಗಳ ಹಿಂದೆ ದೇವಾಲಯದಲ್ಲಿ ಕುಂಭಾಭಿಷೇಕ ನೆರವೇರಿಸಲಾಗಿತ್ತು. ಆ ಸಂದರ್ಭದಲ್ಲಿ ಉತ್ತಮ ಮಳೆಯಾಗಿ ಗ್ರಾಮದಲ್ಲಿ ಸಮೃದ್ಧಿ ನೆಲೆಸಿತ್ತು ಎಂಬುದನ್ನು ಗ್ರಾಮದ ಹಿರಿಯರು ಸ್ಮರಿಸುತ್ತಾರೆ. ಇದೇ ನಂಬಿಕೆಯಿಂದ ಪ್ರಸ್ತುತ ಬರ ಪರಿಸ್ಥಿತಿಯಿಂದ ಸಂಕಷ್ಟದಲ್ಲಿರುವ ರೈತಾಪಿ ಜನರು ಒಗ್ಗೂಡಿ ಈ ಬಾರಿ ಕುಂಭಾಭಿಷೇಕ ಮಹೋತ್ಸವವನ್ನು ಆಯೋಜಿಸಿದ್ದಾರೆ. ರಾಜಣ್ಣ ಸ್ವಾಮಿ, ಗುರುಂಪಲ್ಲಿ ಸ್ವಾಮಿ ಹಾಗೂ ಕೊತ್ತಕೋಟ ಸ್ವಾಮಿಗಳ ನೇತೃತ್ವದಲ್ಲಿ ವಿವಿಧ ಧಾರ್ಮಿಕ ವಿಧಿ-ವಿಧಾನಗಳು ನೆರವೇರಿದವು.

ಭಕ್ತರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೆ.ಎಸ್.ಹರೀಶ್ ಕುಮಾರ್ ಹಾಗೂ ಅಶೋಕ್ ಮಾತನಾಡಿ, ಗ್ರಾಮದ ಹಾಗೂ ಸುತ್ತಮುತ್ತಲಿನ ರೈತಾಪಿ ಜನರು ಒಗ್ಗೂಡಿ ಭಗವಂತನ ಕೃಪೆಗಾಗಿ ಕುಂಭಾಭಿಷೇಕ ನೆರವೇರಿಸಿದ್ದೇವೆ. ಉತ್ತಮ ಮಳೆ-ಬೆಳೆ ಲಭಿಸಿ ರೈತರು ಸೇರಿದಂತೆ ಸಮಸ್ತ ಜನತೆಗೆ ಶ್ರೇಯಸ್ಸು, ಸುಖ-ಸಮೃದ್ಧಿ ದೊರೆಯಲಿ ಎಂದು ಶ್ರೀ ಗಂಗಾಧರೇಶ್ವರ ಸ್ವಾಮಿಯಲ್ಲಿ ಪ್ರಾರ್ಥಿಸಿದ್ದೇವೆ ಎಂದು ಹೇಳಿದರು.

## ರೈತರ ನಂಬಿಕೆ ಎಂದಿಗೂ ಹುಸಿಗೊಳಿಸುವುದಿಲ್ಲ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂತಾಮಣಿ

ರೈತರ ಹಿತ ಕಾಯುವುದು ಹಾಗೂ ಹಾಲು ಒಕ್ಕೂಟವನ್ನು ಮತ್ತಷ್ಟು ಬಲಪಡಿಸು ವುದು ನಮ್ಮ ಪ್ರಮುಖ ಆದ್ಯತೆಯಾಗಿದ್ದು, ರೈತರು ನಮ್ಮ ಮೇಲೆ ಇಟ್ಟಿರುವ ನಂಬಿಕೆಯನ್ನು ಎಂದಿಗೂ ಹುಸಿಗೊಳಿಸುವುದಿಲ್ಲ ಎಂದು ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ನಿರ್ದೇಶಕ ಕೆ.ಎನ್.ಆವಲಪ್ಪ ಹೇಳಿದರು.

ತಾಲ್ಲೂಕಿನ ವಿರೂಪಾಕ್ಷಪುರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ 2025-26ನೇ ಸಾಲಿನ ಸರ್ವ ಸದಸ್ಯರ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದರು. ಸಂಘದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು. ಹಾಲು ಉತ್ಪಾದಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಂಘ ಹಾಗೂ ಒಕ್ಕೂಟವನ್ನು ಬಲಪಡಿಸಲು ಅಗತ್ಯ ಸಹಕಾರ ನೀಡಲಾಗು ವುದು ಎಂದು ಭರವಸೆ ನೀಡಿದರು.ಸಂಘದ ಅಧ್ಯಕ್ಷ ಆರ್.ಮುನಿರಾಜು ಅಧ್ಯಕ್ಷತೆ ವಹಿಸಿದ್ದರು. ವಿಸ್ತರಣಾಧಿಕಾರಿ ಗುಲಾಬ್ ಜಾನ್, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ನಾರಾಯಣಸ್ವಾಮಿ, ಉಪಾಧ್ಯಕ್ಷ ಚಿಕ್ಕನಾರಾಯಣ ಸ್ವಾಮಿ, ನಿರ್ದೇಶಕರಾದ ಎಂ.ಮಂಜುನಾಥ್, ವಿ.ಎಂ.ಮಂಜುನಾಥ್, ವಿ.ಆರ್.ಮಂಜುನಾಥ್, ವಿ.ಎಂ.ನಾರಾಯಣಸ್ವಾಮಿ, ಎಂ.ನಾರಾಯಣಸ್ವಾಮಿ, ಭೀಮಣ್ಣ, ಕೆ.ರಮೇಶ್, ಅನುಸೂಯಮ್ಮ, ಮುನಿರತ್ನಮ್ಮ, ಸುಶೀಲಮ್ಮ ಮತ್ತಿತರರು ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಸೂಚನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ಬಾಗೇಪಲ್ಲಿ ತಾಲ್ಲೂಕಿನ ದೊರಣಾಲಪಲ್ಲಿ ಗ್ರಾಮಕ್ಕೆ ಜಿಲ್ಲಾಧಿಕಾರಿ ಜಿ.ಪ್ರಭು ಅವರು ಭೇಟಿ ನೀಡಿ, ಗ್ರಾಮದ ಕುಡಿಯುವ ನೀರಿನ ಸಮಸ್ಯೆಯನ್ನು ಖುದ್ದಾಗಿ ಪರಿಶೀಲಿಸಿ, ತಕ್ಷಣ ಪರಿಹಾರ ಕಲ್ಪಿಸಲು ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮದಲ್ಲಿ ಪ್ರಸ್ತುತ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿರುವ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ನೀರಿನ ಲಭ್ಯತೆ ಹಾಗೂ ಪೂರೈಕೆ ವ್ಯವಸ್ಥೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಗ್ರಾಮದ ಸಮೀಪದಲ್ಲಿರುವ ಖಾಸಗಿ ಕೊಳವೆಬಾವಿ ಮಾಲೀಕ ಬೀರಪ್ಪ ಅವರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು, ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಶೇ.60ರಷ್ಟು ಮಳೆಯ ತೀವ್ರ ಕೊರತೆಯಾಗಿರುವುದರಿಂದ ಜಿಲ್ಲೆಯಾದ್ಯಂತ ಬರದ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸಹಕಾರ ನೀಡುವಂತೆ ಮನವಿ ಮಾಡಿದರು. ಜಿಲ್ಲಾಧಿಕಾರಿಗಳ ಮನವಿಗೆ ಸ್ಪಂದಿಸಿದ ಬೀರಪ್ಪ ಅವರು, ತಮ್ಮ ಪ್ರಸ್ತುತ ಚಾಲ್ತಿಯಲ್ಲಿರುವ ಕೊಳವೆಬಾವಿಯಿಂದ ಗ್ರಾಮದ ಕುಡಿಯುವ ನೀರಿನ ಉದ್ದೇಶಕ್ಕಾ ನೀರು ಪೂರೈಸಲು ಒಪ್ಪಿಗೆ ನೀಡಿದರು. ಗ್ರಾಮಸ್ಥರಿಗೆ ಕುಡಿಯುವ ನೀರು ಒದಗಿಸಲು ಸಹಕರಿಸುವುದಾಗಿ ಜಿಲ್ಲಾಧಿಕಾರಿಗಳಿಗೆ ಭರವಸೆ ನೀಡಿದರು.

ನಂತರ ಅಧಿಕಾರಿಗಳಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು ಅವರು, ಜಿಲ್ಲೆಯ ಯಾವುದೇ ಗ್ರಾಮ ಅಥವಾ ನಗರ ವಾರ್ಡ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಒಂದು ದಿನವೂ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.ಅಗತ್ಯವಿರುವ ಕಡೆಗಳಲ್ಲಿ ಅಕ್ಕಪಕ್ಕದ ಗ್ರಾಮಗಳು ಹಾಗೂ ವಾರ್ಡ್‌ಗಳಲ್ಲಿರುವ ಖಾಸಗಿ ಕೊಳವೆ ಬಾವಿಗಳ ಮಾಲೀಕರ ಸಹಕಾರ ಪಡೆದು ಕುಡಿಯುವ ನೀರಿನ ಪೂರೈಕೆಗೆ ಆದ್ಯತೆ ನೀಡಬೇಕು.

ನೀರು ಪೂರೈಸುವ ಖಾಸಗಿ ಕೊಳವೆಬಾವಿ ಮಾಲೀಕರಿಗೆ ಸರ್ಕಾರ ನಿಗದಿಪಡಿಸಿರುವ ಮೊತ್ತವನ್ನು ಯಾವುದೇ ಕಾಲವಿಳಂಬವಿಲ್ಲದೆ ತ್ವರಿತವಾಗಿ ಪಾವತಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಪೂರೈಸುವ ಉದ್ದೇಶದಿಂದ ಪಕ್ಕದ ಕದಿರಮ್ಮಗಾರಿಕೋಟೆ ಗ್ರಾಮದ ಕೊಳವೆಬಾವಿಗಳಿಂದ ಪೈಪ್‌ಲೈನ್ ಮೂಲಕ ನೀರು ತರುವ ಸಾಧ್ಯತೆಯನ್ನು ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆಯೂ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

## ಬೆಳೆ ಪರಿಹಾರ, ವಿಮೆಗೆ ಆಗ್ರಹಿಸಿ ಕೋಲಾರದಲ್ಲಿ ರೈತರ ಮನವಿ

• ಉದಯವಾಹಿನಿ, ಕೋಲಾರ

ಮೇ ತಿಂಗಳಲ್ಲಿ ಕೆಜಿಎಫ್ ತಾಲ್ಲೂಕಿನಲ್ಲಿ ಸುರಿದ ಆಲಿಕಲ್ಲು ಮಳೆ ಮತ್ತು ಬಿರುಗಾಳಿಯಿಂದ ಹಾನಿಯಾದ ಮಾವು, ಬಾಳೆ ಸೇರಿದಂತೆ ತೋಟಗಾರಿಕಾ ಬೆಳೆಗಳ ಪರಿಹಾರ ಹಾಗೂ 2025-26ನೇ ಸಾಲಿನ ಮಾವು ಬೆಳೆ ವಿಮಾ ಮೊತ್ತವನ್ನು ಶೀಘ್ರ ಬಿಡುಗಡೆ ಮಾಡುವಂತೆ ಆಗ್ರಹಿಸಿ ಕೆಜಿಎಫ್ ತಾಲ್ಲೂಕು ಮಾವು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದಿಂದ ಸೋಮವಾರ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಕಟಾವಿನ ಹಂತದಲ್ಲಿದ್ದ ಬೆಳೆಗಳು ಸಂಪೂರ್ಣ ನಾಶವಾಗಿ ರೈತರು ಅಪಾರ ನಷ್ಟ ಅನುಭವಿಸಿದ್ದಾರೆ.

ಇದರ ಜೊತೆಗೆ ಮಾವು ಬೆಳೆ ವಿಮಾ ಮೊತ್ತವೂ ಇದುವರೆಗೆ ರೈತರಿಗೆ ತಲುಪಿಲ್ಲ ಎಂದು ಸಂಘದ ಪದಾಧಿಕಾರಿಗಳು ಹೇಳಿದರು.ಬೆಳೆ ಹಾನಿಯಾದ ಸಂದರ್ಭದಲ್ಲಿ ಶಾಸಕರು ಹಾಗೂ ತಹಶೀಲ್ದಾರ್ ಸಮ್ಮುಖದಲ್ಲಿ ತೋಟಗಾರಿಕಾ ಇಲಾಖೆ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿ ಸ್ಥಳ ಪರಿಶೀಲನೆ ನಡೆಸಿದ್ದರು.

ಆ ಸಮಯದಲ್ಲಿ ಎನ್‌ಡಿಆರ್‌ಎಫ್ ಹಾಗೂ ಸರ್ಕಾರದ ವಿಶೇಷ ಪರಿಹಾರ ನಿಧಿಯಡಿ ಮುಂದಿನ 30 ದಿನಗಳ ಒಳಗಾಗಿ ಬಾಧಿತ ರೈತರಿಗೆ ಪರಿಹಾರ ಹಣ ಬಿಡುಗಡೆ ಮಾಡಲಾಗುವುದು ಎಂದು ಭರವಸೆ ನೀಡಲಾಗಿತ್ತು.

### ಕಪಾಳಮೋಕ್ಷ ಪ್ರಕರಣ ಕ್ಷಮೆಯಾಚಿಸಿದ ಶಾಸಕ ಸುರೇಶ್‌ಗೌಡ ಪುತ್ರಿ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಲೇಡಿ ಪಿಎಸ್‌ಐಗೆ ಕಪಾಳಮೋಕ್ಷ ಪ್ರಕರಣ ಸಂಬಂಧ ಶಾಸಕ ಸುರೇಶ್‌ಗೌಡ ಪುತ್ರಿ ಐಶ್ವರ್ಯ ಪಿಎಸ್‌ಐ ಸವಿತಾ ಪಾಟೀಲ್‌ಗೆ ವೀಡಿಯೋ ಮೂಲಕ ಕ್ಷಮೆಯಾಚಿಸಿದ್ದಾರೆ. ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಸುರೇಶ್ ಗೌಡ ಪುತ್ರಿ ಐಶ್ವರ್ಯ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಆರತಿ ಉಕ್ಕಡ ದೇವರ ದರ್ಶನಕ್ಕೆ ಬಂದಿದ್ದ ವೇಳೆ ಗರ್ಭಗುಡಿಗೆ ಬಿಡುವ ವಿಚಾರದಲ್ಲಿ ಕಿರಿಕ್ ಮಾಡಿದ್ದರು. ಭದ್ರತೆಗೆ ನಿಯೋಜನೆಗೊಂಡಿದ್ದ ಪಿಎಸ್‌ಐ ಸವಿತಾ ಬಳಿ ಐಶ್ವರ್ಯ ವಾಗ್ವಾದ ನಡೆಸಿದ್ದರು. ಈ ವೇಳೆ ಐಶ್ವರ್ಯ ಪಿಎಸ್‌ಐಗೆ ಕಪಾಳಮೋಕ್ಷ ಮಾಡಿದ್ದರು. ಈ ಸಂಬಂಧ ಕ್ಯಾತನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕ್ಷಮೆ ಕೋರಲು ಕೋರ್ಟ್ ತಾಕೀತು ಹಿನ್ನೆಲೆ ಐಶ್ವರ್ಯಗೌಡ ಬಹಿರಂಗ ಕ್ಷಮೆಕೋರಿದ್ದಾರೆ.ಆಗಸ್ಟ್ 12ರಂದು ಭೀಮನ ಅಮಾವಾಸ್ಯೆಯಂದು ನಾನು ಮತ್ತು ನನ್ನ ಇಬ್ಬರು ಮಕ್ಕಳು ಪಾಂಡವಪುರದ ಉಕ್ಕಡಮ್ಮ ದೇವಸ್ಥಾನಕ್ಕೆ ತೆರಳಿದ್ದೆವು. ಅಂದು ದೇಗುಲದಲ್ಲಿ ಹೆಚ್ಚು ಜನಸಂದಣಿ ಇದ್ದಿದ್ದರಿಂದ ಹಾಗೂ ನನ್ನ ಮಕ್ಕಳಿಗೆ 'ಅಮ್ಮ' ಆಗಿದ್ದ ಕಾರಣ ದೇವರ ದರ್ಶನ ಪಡೆಯುವ ಸಂದರ್ಭದಲ್ಲಿ ನನ್ನ ಮತ್ತು ಮಹಿಳಾ ಪಿಎಸ್‌ಐ ನಡುವೆ ಸಣ್ಣ ಮಾತಿನ ಚಕಮಕಿ ನಡೆಯಿತು. ಉದ್ವೇಗದಿಂದ ಅಹಿತಕರ ಘಟನೆ ನಡೆದಿದೆ. ಈ ಘಟನೆ ನಡೆಯಬಾರದಿತ್ತು. ಈ ಘಟನೆ ಬಗ್ಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಈ ಘಟನೆಯಿಂದ ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ನೋವಾಗಿದ್ದರೆ, ಬೇಷರತ್ ಆಗಿ ಕ್ಷಮೆ ಯಾಚಿಸುತ್ತೇನೆ ಎಂದು ವೀಡಿಯೋ ಮೂಲಕ ಐಶ್ವರ್ಯ ಕ್ಷಮೆಯಾಚಿಸಿದ್ದಾರೆ.

# ದೇಶದ 6,000 ತಾಲ್ಲೂಕುಗಳಲ್ಲಿ ಸಾಯಿ ಸ್ವಾಸ್ಥ್ಯ ಆರೋಗ್ಯ ಕೇಂದ್ರ ಆರಂಭಿಸುವ ಉದ್ದೇಶವಿದೆ

## ಆರೋಗ್ಯ ಕ್ಷೇತ್ರದಲ್ಲಿ ಸೂಕ್ತ ಮೂಲಸೌಕರ್ಯ ನಿರ್ಮಾಣ ಈ ಕ್ಷಣದ ತುರ್ತು. ಇದಕ್ಕೆ ನಾವು ಆದ್ಯತೆ ನೀಡಬೇಕಿದೆ.

• ಉದಯವಾಹಿನಿ, ಮಂಡ್ಯ

1 50ಕ್ಕೂ ಅಧಿಕ ಮನೆಗಳಿಗೆ ನೀರು
2 ದಿನಸಿ ವಸ್ತುಗಳು ನೀರುಪಾಲಾಗಿದ್ದು
3 4 ಹಸುಗಳಿಗೆ ಗಾಯಗಳಾಗಿರುವ

ದೇಶಾದ್ಯಂತ ಎಲ್ಲಾ 6,000 ತಾಲೂಕುಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸಾಯಿ ಸ್ವಾಸ್ಥ್ಯ ಕೇಂದ್ರ' ವನ್ನು ಆರಂಭಿಸುವ ಉದ್ದೇಶ ಇದೆ ಎಂದು ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು. ನಗರದಲ್ಲಿ ಸೋಮವಾರ ನಡೆದ ದಿವ್ಯ ಸಂಜೆ ಸಂವಾದ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಕೆ.ಎನ್. ಚನ್ನೇಗೌಡ ಅವರ ಪ್ರಶ್ನೆಗಳಿಗೆ ಉತ್ತರಿಸಿದ ಸದ್ಗುರು, ಈಗಾಗಲೇ ದೇಶದ ನೂರಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಆರೋಗ್ಯ ಕೇಂದ್ರವನ್ನು ಸ್ಥಾಪಿಸಿದ್ದೇವೆ ಎಂದರು.

ಆರೋಗ್ಯ ಶಿಕ್ಷಣವನ್ನು ಪ್ರಾಥಮಿಕ ಶಾಲಾ ಹಂತದಿಂದಲೇ ಪಠ್ಯಕ್ರಮದ ಭಾಗವಾಗಿಸಬೇಕು.

ಅದು ಹಲವು ಆರೋಗ್ಯ ಸಂಬಂಧಿ ಸಮಸ್ಯೆಗಳಿಗೆ ಪರಿಣಾಮಕಾರಿ ಪರಿಹಾರ ಆಗಲಿದೆ ಎಂದರು.

ಆರೋಗ್ಯ ಕ್ಷೇತ್ರದಲ್ಲಿ ಸೂಕ್ತ ಮೂಲಸೌಕರ್ಯ ನಿರ್ಮಾಣ ಈ ಕ್ಷಣದ ತುರ್ತು. ಇದಕ್ಕೆ ನಾವು ಆದ್ಯತೆ ನೀಡಬೇಕಿದೆ. ವೈದ್ಯಕೀಯ ರಂಗದ ವಿಪರೀತ ವಾಣಿಜ್ಯೀಕರಣ ಸದಾ ಅಪಾಯಕಾರಿ. ವಾಣಿಜ್ಯದ ಹಿಡಿತದಿಂದ ಆರೋಗ್ಯ ಕ್ಷೇತ್ರವನ್ನು ಮುಕ್ತಗೊಳಿಸಬೇಕು ಎನ್ನುವ ಉದ್ದೇಶದಿಂದ ನಾವು



ಉದಯವಾಹಿನಿ ಚಿತ್ರ

ಉಚಿತ ವೈದ್ಯಕೀಯ ಶಿಕ್ಷಣ ಕಾಲೇಜು ಆರಂಭಿಸಿದೆವು ಎಂದು ವಿವರಿಸಿದರು. ಯಾವುದೇ ದೇಶದ ಜನಸಾಮಾನ್ಯರು ಯುದ್ಧ-ಸಂಘರ್ಷ ಬಯಸುತ್ತಿಲ್ಲ. ಜಾಗತಿಕ ಅಶಾಂತಿಗೆ ನಾಯಕರ ಸ್ವಾರ್ಥವೇ ಮುಖ್ಯ ಕಾರಣ. ಸರಿಯಾದ ನಾಯಕರನ್ನು ಆಯ್ಕೆ ಮಾಡದಿರುವುದೇ ಜನರು ಮಾಡುತ್ತಿರುವ ತಪ್ಪು. ಮತದಾರರು ಸರಿಯಾದರೆ ನಾಯಕರು ಸರಿಯಾಗುತ್ತಾರೆ ಎಂದು ಕಿವಿಮಾತು ಹೇಳಿದರು. ಕರ್ನಾಟಕ ಸರ್ಕಾರದ ಗ್ಯಾರೆಂಟಿ ಯೋಜನೆಗಳು ಮತ್ತು ತಮ್ಮ ನೇತೃತ್ವದ ಸಂಸ್ಥೆಗಳಲ್ಲಿ ಸಿಗುತ್ತಿರುವ ಉಚಿತ ಸೌಲಭ್ಯಗಳ ಕುರಿತು ಕೇಳಿಬರುತ್ತಿರುವ ಆಕ್ಷೇಪಗಳ ಕುರಿತು ಪ್ರತಿಕ್ರಿಯಿಸಿದ ಸದ್ಗುರು, ಅರ್ಹರಿಗೆ ದಾನ ಕೊಡಬೇಕು. ಸರ್ಕಾರವು ಕಡುಬಡವರಿಗೆ ಅಗತ್ಯ ನೆರವು ಕೊಡುವುದರಲ್ಲಿ ಯಾವುದೇ ತಪ್ಪಿಲ್ಲ. ನಮ್ಮ ಸಂಸ್ಥೆಗಳಲ್ಲಿ ನಾವು ಯಾವುದೇ ತಾರತಮ್ಯ ಮಾಡದೇ ಎಲ್ಲರಿಗೂ ಆರೋಗ್ಯ ಸೇವೆ ಒದಗಿಸುತ್ತಿದ್ದೇವೆ. ಆದರೆ ನಮ್ಮ ಸೇವೆ ದುರುಪಯೋಗವಾಗದಂತೆ ಅಗತ್ಯ ಎಚ್ಚರಿಕೆ ವಹಿಸುತ್ತೇವೆ ಎಂದು ವಿವರಿಸಿದರು. ಕರ್ನಾಟಕ ರಾಜ್ಯವನ್ನು ನಿಮ್ಮ ಸುಪರ್ದಿಗೆ 10 ವರ್ಷಗಳ ಅವಧಿಗೆ ಒಪ್ಪಿಸಿದರೆ ಏನು ಮಾಡುತ್ತೀರಿ' ಎನ್ನುವ ಪ್ರಶ್ನೆಗೆ ಉತ್ತರಿಸಿದ ಸದ್ಗುರು, ಶಿಕ್ಷಕರ ಬಗ್ಗೆ ಹೆಚ್ಚು ಗಮನ ಕೊಡುತ್ತೇನೆ, ಅವರ ಸಂಬಳ-ಸೌಕರ್ಯ ಸುಧಾರಿಸಿ ಅವರ ಮೂಲಕ ಶಾಲೆಗಳನ್ನು ಉತ್ತಮಪಡಿಸುತ್ತೇನೆ. ಯೋಗ್ಯ ಶಿಕ್ಷಕರು-ಶಾಲೆಗಳೇ ದೇಶದ ಆಧಾರಸ್ತಂಭ' ಎಂದು ತಮ್ಮ ನಿಲುವು ಸ್ಪಷ್ಟಪಡಿಸಿದರು.

> ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕನಿಷ್ಠ 50 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಸ್ಥಾಪಿಸಲಾಗುವುದು. ಮಂಡ್ಯದಲ್ಲಿರುವ ಶ್ರೀ ಶಾರದಾ ನಿಕೇತನ ಗುರುಕುಲದ ಬಳಿಯಲ್ಲಿ 20 ಹಾಸಿಗೆಗಳ ಆಸ್ಪತ್ರೆ ನಿರ್ಮಿಸುವ ಉದ್ದೇಶ ಇದೆ ಎಂದು ತಿಳಿಸಿದರು. ಯುವಜನರಲ್ಲಿ ಹೃದಯಾಘಾತ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಸಮಸ್ಯೆ ಕಾಣಿಸಿಕೊಂಡ ನಂತರ ಪರಿಹಾರ ಹುಡುಕುವುದಕ್ಕಿಂತಲೂ ಸಮಸ್ಯೆ ಬಾರದಂತೆ ಮುನ್ನೆಚ್ಚರಿಕೆ ವಹಿಸುವುದು ಜಾಣತನ.

### ಹೆಣ್ಣುಮಕ್ಕಳಿಗೆ ವಿಶೇಷ ಆದ್ಯತೆ

ನಮ್ಮ ಶಿಕ್ಷಣ ಸಂಸ್ಥೆಗಳಲ್ಲಿ ಹೆಣ್ಣುಮಕ್ಕಳಿಗೆ ವಿಶೇಷ ಆದ್ಯತೆ ಕೊಡುತ್ತಿದ್ದೇವೆ. ಈಗಾಗಲೇ ಮೂರು ಕ್ಯಾಂಪಸ್‌ಗಳಿವೆ. ಇನ್ನಷ್ಟು ಹೆಚ್ಚಿನ ಶಾಲೆಗಳನ್ನು ಹೆಣ್ಣು ಮಕ್ಕಳಿಗಾಗಿ ಆರಂಭಿಸುವ ಉದ್ದೇಶ ಇದೆ ಎಂದರು. ಪದವಿಯ ನಂತರ ನಮ್ಮಲ್ಲಿ ಇಂಟರ್ನ್‌ಶಿಪ್ ಮಾಡುವ ಯುವತಿಯರಿಗೆ ಸ್ಟೈಫಂಡ್ ಕೂಡ ನೀಡುತ್ತಿದ್ದೇವೆ. ನಮ್ಮ ವಿಶ್ವವಿದ್ಯಾಲಯದಲ್ಲಿರುವ ಒಟ್ಟು ವಿದ್ಯಾರ್ಥಿಗಳ ಪೈಕಿ ಮಹಿಳೆಯರ ಪ್ರಮಾಣ ಶೇ 60 ರಷ್ಟು ಇದೆ.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ ಬಿ.ಎನ್. ನರಸಿಂಹಮೂರ್ತಿ, ರಾಮಕೃಷ್ಣ ಪರಮಹಂಸರ ಸಂದೇಶಗಳನ್ನು ಸ್ವಾಮಿ ವಿವೇಕಾನಂದರು ಕಾರ್ಯರೂಪಕ್ಕೆ ತಂದಂತೆ ಇಂದು ಭಗವಾನ್ ಶ್ರೀ ಸತ್ಯಸಾಯಿ ಬಾಬಾರವರ ಸಂದೇಶಗಳನ್ನು ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಕಾರ್ಯರೂಪಕ್ಕೆ ತರುತ್ತಿದ್ದಾರೆ ಎಂದು ವಿವರಿಸಿದರು.

## ಬಿಜೆಪಿ ನಾಯಕರನ್ನ ರಣಹದ್ದು ಎಂದ ಸಚಿವ ಯತೀಂದ್ರ ವಿರುದ್ಧ ದೂರು

• ಉದಯವಾಹಿನಿ, ರಾಮನಗರ

ಬಿಜೆಪಿಯವರನ್ನು ರಣಹದ್ದುಗಳಿಗೆ ಹೋಲಿಸಿ ಹೇಳಿಕೆ ನೀಡಿದ್ದ ಸಚಿವ ಯತೀಂದ್ರ ಸಿದ್ದರಾಮಯ್ಯ ವಿರುದ್ಧ ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ದೂರು ಸಲ್ಲಿಕೆಯಾಗಿದೆ.

ಟಿ.ನರಸೀಪುರದಲ್ಲಿ ನಡೆದಿದ್ದ ಗಲಭೆ ವಿಚಾರವಾಗಿ ಬಿಜೆಪಿ ನಾಯಕರ ಆರೋಪಗಳಿಗೆ ತಿರುಗೇಟು ನೀಡುವ ಭರದಲ್ಲಿ ಯತೀಂದ್ರ ಸಿದ್ದರಾಮಯ್ಯ ಬಿಜೆಪಿ ನಾಯಕರನ್ನು ರಣಹದ್ದುಗಳು ಎಂದಿದ್ದರು. ಈ ಹೇಳಿಕೆ ಈಗ ಹೊಸ ಸ್ವರೂಪದ ವಿವಾದಕ್ಕೆ ಕಾರಣವಾಗಿದೆ. ಸಾಮಾಜಿಕ ಕಾರ್ಯಕರ್ತ ಕುಮಾರಸ್ವಾಮಿ ಎಂಬವರು ಈ ಬಗ್ಗೆ ದೂರು ಸಲ್ಲಿಸಿದ್ದು, ಸಚಿವರು ರಾಜಕೀಯ ಟೀಕೆ ಮಾಡುವ ಭರದಲ್ಲಿ ಅಳಿವಿನಂಚಿನಲ್ಲಿರುವ ರಣಹದ್ದು ಪಕ್ಷಿ ಬಗ್ಗೆ ತಪ್ಪು ಮಾಹಿತಿ ಮತ್ತು ಸಂದೇಶ ಹರಡಿದ್ದಾರೆ. ರಣಹದ್ದುಗಳು ಕ್ರೂರಿಗಳು ಹಾಗೂ ಗಲಭೆ ಸೃಷ್ಟಿಸುವ ಪಕ್ಷಿಗಳು ಎಂಬಂತೆ ಬಿಂಬಿಸುವ ಮೂಲಕ ವನ್ಯಪ್ರೇಮಿಗಳು ಮತ್ತು ಪರಿಸರಾಸಕ್ತರ ಭಾವನೆಗಳಿಗೆ ಧಕ್ಕೆ ತರಲಾಗಿದೆ ಎಂದು ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ನಿಯಮಗಳನ್ನು ಯತೀಂದ್ರ ಉಲ್ಲಂಘಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದ್ದು, ಅಳಿವಿನಂಚಿನಲ್ಲಿರುವ ಪಕ್ಷಿ ಬಗ್ಗೆ ತಪ್ಪು ಸಂದೇಶ ರವಾನಿಸಿದ ಯತೀಂದ್ರ ಸಿದ್ದರಾಮಯ್ಯ ವಿರುದ್ಧ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಕೃಷಿಗೆ ಅಗತ್ಯವಿರುವ ನೀರು ಲಭ್ಯವಿದ್ದರೂ ರೈತರ ಜಮೀನುಗಳಿಗೆ ನೀರು ಹರಿಸದೆ ಇದ್ದರೆ ರೈತರ ಸಮಸ್ಯೆಗೆ ಯಾರು ಹೊಣೆ?

# ಕಬ್ಬು ಬೆಳೆ ಉಳಿಸಲು ನೀರಾವರಿ ವೇಳಾಪಟ್ಟಿ ಪ್ರಕಟಿಸಿ

**ಉದಯವಾಹಿನಿ, ಆಳಂದ**

ಅಮರ್ಜಾ ನೀರಾವರಿ ಯೋಜನೆಯ ಕೆಳಭಾಗದ ರೈತರಿಗೆ ಸಮರ್ಪಕವಾಗಿ ನೀರು ಹರಿಸುವ ಮೂಲಕ ಕಬ್ಬು ಸೇರಿದಂತೆ ವಿವಿಧ ಬೆಳೆಗಳನ್ನು ಉಳಿಸಬೇಕು. ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಪರಿಗಣಿಸಿ, ಕುಡಿಯುವ ನೀರಿಗೆ ಅಗತ್ಯ ಪ್ರಮಾಣ ಕಾಯ್ದಿರಿಸಿದ ಬಳಿಕ ಉಳಿದ ನೀರನ್ನು ಕನಿಷ್ಠ ನವೆಂಬರ್–ಡಿಸೆಂಬರ್‌ವರೆಗೆ ಕೃಷಿ ಉದ್ದೇಶಕ್ಕೆ ಹಂತ ಹಂತವಾಗಿ ಹರಿಸಬೇಕು ಎಂದು ರೈತ ಮುಖಂಡ ಆನಂದ ಪಾಟೀಲ ಕೊರಳ್ಳಿ ಅವರು ಜಿಲ್ಲಾಡಳಿತಕ್ಕೆ ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗ್ರಾಮಸ್ಥರೊಂದಿಗೆ ಸೋಮವಾರ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಪಾಟೀಲ ಅವರು, ಅಮರ್ಜಾ ಯೋಜನೆಯ ನೀರಿನ ಮೇಲೆ ಅವಲಂಬಿತರಾಗಿ ನೂರಾರು ರೈತರು ಕಬ್ಬು ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆದಿದ್ದಾರೆ. ಕಬ್ಬು ದೀರ್ಘಾವಧಿಯ ಬೆಳೆಯಾಗಿದ್ದು, ನಿರ್ಣಾಯಕ ಹಂತದಲ್ಲಿ ನೀರು ದೊರೆಯದಿದ್ದರೆ ರೈತರು ಭಾರಿ ಆರ್ಥಿಕ ನಷ್ಟ ಅನುಭವಿಸಬೇಕಾಗುತ್ತದೆ. ಈಗಾಗಲೇ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಹಣ



ಉದಯವಾಹಿನಿ ಚಿತ್ರ

ವ್ಯಯಿಸಿರುವ ರೈತರಿಗೆ ನೀರಿನ ಕೊರತೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ ಎಂದು ಹೇಳಿದರು.

ಜಲಾಶಯದಲ್ಲಿ ನೀರು ಲಭ್ಯವಿರುವ ಸಂದರ್ಭದಲ್ಲಿ ಕೃಷಿ ಉದ್ದೇಶಕ್ಕೆ ಅದನ್ನು ಸಮರ್ಪಕವಾಗಿ ಬಳಸಿಕೊಳ್ಳದೆ ಮುಂಚಿತವಾಗಿ ನೀರು ಹರಿಸುವುದನ್ನು ಸ್ಥಗಿತಗೊಳಿಸುವುದು ಕೆಳಭಾಗದ ರೈತರಿಗೆ ಅನ್ಯಾಯವಾಗಲಿದೆ. ಆದ್ದರಿಂದ ಜಲಾಶಯದ ನೀರಿನ ಪ್ರಮಾಣ, ಬೆಳೆಗಳ ಸ್ಥಿತಿ ಹಾಗೂ ರೈತರ ಅಗತ್ಯವನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ನೀರು ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿದರು.

"ಜಲಾಶಯದಲ್ಲಿ ನೀರು ಲಭ್ಯವಿರುವಾಗ ರೈತರ ಜಮೀನುಗಳಿಗೆ ನೀರು ಏಕೆ ಹರಿಸಬಾರದು?" ಎಂದು ಪ್ರಶ್ನಿಸಿದ ಅವರು, ಕುಡಿಯುವ ನೀರಿಗೆ ಅಗತ್ಯವಿರುವ ಪ್ರಮಾಣವನ್ನು ಕಾಯ್ದಿರಿಸಿಕೊಂಡು, ಉಳಿದ ನೀರನ್ನು ಕೃಷಿ ಬಳಕೆಗೆ ಬಿಡುಗಡೆ ಮಾಡಬೇಕು. ವಿಶೇಷವಾಗಿ ಕಬ್ಬು ಬೆಳೆಗಾರರಿಗೆ ನವೆಂಬರ್–ಡಿಸೆಂಬರ್‌ವರೆಗೆ ನೀರು ದೊರೆಯುವಂತೆ ಸ್ಪಷ್ಟ ನೀರಾವರಿ ವೇಳಾಪಟ್ಟಿ ರೂಪಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ನೀರಾವರಿ ನಿಗಮ ಹಾಗೂ ಸಂಬಂಧಿಸಿದ ಅಧಿಕಾರಿಗಳು ರೈತರ ಮನವಿಗೆ ತಕ್ಷಣ ಸ್ಪಂದಿಸಬೇಕು. ಅಮರ್ಜಾ ಜಲಾಶಯದಲ್ಲಿರುವ ನೀರಿನ ಲಭ್ಯತೆ ಮತ್ತು ಕೆಳಭಾಗದ ರೈತರ ಅಗತ್ಯವನ್ನು ಪರಿಶೀಲಿಸಿ, ನೀರು ಹರಿಸುವ ದಿನಾಂಕ ಹಾಗೂ ಪ್ರಮಾಣದ ಕುರಿತು ಸ್ಪಷ್ಟ ವೇಳಾಪಟ್ಟಿ ಪ್ರಕಟಿಸಬೇಕು. ಇದರಿಂದ ರೈತರಲ್ಲಿರುವ ಗೊಂದಲ ನಿವಾರಣೆಯಾಗಲಿದೆ ಎಂದು ಹೇಳಿದರು.

ರೈತರ ಬೇಡಿಕೆಗೆ ಅಧಿಕಾರಿಗಳು ಸ್ಪಂದಿಸದೆ ನೀರು ಹರಿಸುವುದನ್ನು ಸ್ಥಗಿತಗೊಳಿಸಿದರೆ, ಮುಂದಿನ ದಿನಗಳಲ್ಲಿ ರೈತರು ಒಗ್ಗೂಡಿ ಕರ್ನಾಟಕ ನೀರಾವರಿ ನಿಗಮದ ಕಚೇರಿ ಮುಂದೆ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಆನಂದ್ ಪಾಟೀಲ್ ಎಚ್ಚರಿಸಿದರು.

> ಕಬ್ಬು ಸೇರಿದಂತೆ ವಿವಿಧ ಬೆಳೆಗಳನ್ನು ಉಳಿಸಲು ನವೆಂಬರ್–ಡಿಸೆಂಬರ್‌ವರೆಗೆ ನೀರು ಹರಿಸುವ ಕುರಿತು ತುರ್ತು ನಿರ್ಧಾರ ಕೈಗೊಳ್ಳಬೇಕು. ರೈತರ ಬೇಡಿಕೆಗೆ ಸ್ಪಂದಿಸದೆ ಹೋರಾಟಕ್ಕೆ ಕಾರಣವಾದರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೇ ಹೊಣೆ.
>
> –ಆನಂದ್ ಪಾಟೀಲ್

## ಕೂಲಿ ಹಣ ವಿಳಂಬ: ಕಾರ್ಮಿಕರ ಆಕ್ರೋಶ

**ಉದಯವಾಹಿನಿ, ಕೊಟ್ಟೂರು**

ಉಜ್ಜಿನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ.ಬಿ.ಜಿ. ರಾಮ್ ಜಿ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸಿದ ಕೂಲಿ ಕಾರ್ಮಿಕರಿಗೆ ಕಳೆದ ಎರಡೂ ತಿಂಗಳುಗಳಿಂದ ಕೂಲಿ ಹಣ ಪಾವತಿಯಾಗದೆ ವಿಳಂಬವಾಗಿದ್ದು, ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರು ಕೆಲಸ ನಿರ್ವಹಿಸಿದ್ದಾರೆ. ಆದರೆ ಕೆಲಸ ಪೂರ್ಣಗೊಳಿಸಿ ಹಲವು ದಿನಗಳು ಕಳೆದರೂ ಕೂಲಿ ಹಣ ಖಾತೆಗೆ ಜಮೆಯಾಗಿಲ್ಲ ಎಂದು ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದರು. ದಿನಗೂಲಿ ಕೆಲಸವನ್ನೇ ಅವಲಂಬಿಸಿರುವ ಕುಟುಂಬಗಳಿಗೆ ಕೂಲಿ ಹಣ ವಿಳಂಬವಾಗಿರುವುದು ತೀವ್ರ ತೊಂದರೆ ಉಂಟುಮಾಡಿದೆ. ದಿನನಿತ್ಯದ ಜೀವನ ನಿರ್ವಹಣೆ, ಮಕ್ಕಳ ಶಿಕ್ಷಣ, ಮನೆ ಖರ್ಚು ಹಾಗೂ ಅಗತ್ಯ ವಸ್ತುಗಳ ಖರೀದಿಗೆ ಹಣದ ಕೊರತೆ ಎದುರಾಗಿದೆ ಎಂದು ಕಾರ್ಮಿಕರು ತಿಳಿಸಿದರು. ಯೋಜನೆಯಡಿ ಕೆಲಸ ಮಾಡಿದ ನಂತರ ನಿಗದಿತ ಅವಧಿಯಲ್ಲಿ ಕೂಲಿ ಹಣ ಪಾವತಿಯಾಗಬೇಕು. ಆದರೆ ಹಣ ಪಾವತಿಗೆ ಸಂಬಂಧಿಸಿದಂತೆ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ವಿಳಂಬವಾಗುತ್ತಿದ್ದ ಇದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಬೇಕೆಂದು ಕಾರ್ಮಿಕರು ಒತ್ತಾಯಿಸಿದ್ದಾರೆ. ನಾವು ಕೂಲಿ ಕೆಲಸ ಮಾಡಿ ಕುಟುಂಬ ನಿರ್ವಹಣೆ ಮಾಡುತ್ತಿದ್ದೇವೆ. ಕೆಲಸ ಮಾಡಿದ ಹಣ ಸಮಯಕ್ಕೆ ಸರಿಯಾಗಿ ದೊರೆಯದಿದ್ದರೆ ಜೀವನ ನಡೆಸುವುದು ಕಷ್ಟವಾಗುತ್ತದೆ. ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಬಾಕಿ ಇರುವ ಕೂಲಿ ಹಣವನ್ನು ಪಾವತಿಸಬೇಕು" ಎಂದು ಕಾರ್ಮಿಕರು ಆಗ್ರಹಿಸಿದರು



ಉದಯವಾಹಿನಿ ಚಿತ್ರ

## ಜಗಳೂರು ಬಂದ್ ವೇಳೆ ಪೊಲೀಸರ ಕರ್ತವ್ಯಕ್ಕೆ ಅಡ್ಡಿ, ಸರ್ಕಾರಿ ಸ್ವತ್ತು ನಾಶ

**ಉದಯವಾಹಿನಿ, ದಾವಣಗೆರೆ**

ಬರ ಪೀಡಿತ ಪಟ್ಟಿಯಿಂದ ಜಗಳೂರು ತಾಲ್ಲೂಕನ್ನು ಕೈ ಬಿಟ್ಟ ಹಿನ್ನೆಲೆಯಲ್ಲಿ ಸೋಮವಾರ ಜಗಳೂರು ಬಂದ್‌ಗೆ ಕರೆ ನೀಡಿದ್ದ ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖಲಾಗಿದೆ. ಈ ಬಂದ್ ನಲ್ಲಿ ಭಾಗಿಯಾದ 15 ಜನ ಬಿಜೆಪಿ ಕಾರ್ಯಕರ್ತರ ಮೇಲೆ ಪ್ರಕರಣ ದಾಖಲಾಗಿದೆ.

ಕರ್ತವ್ಯಕ್ಕೆ ಅಡ್ಡಿ ಆರೋಪದ ಹಿನ್ನೆಲೆಯಲ್ಲಿ ಒಟ್ಟು ಹದಿನೈದು ಜನರ ಮೇಲೆ ಜಗಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ. ಇನ್ನು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು ಕರೆದೊಯ್ಯುವ ವೇಳೆ ಬಿಜೆಪಿ ಕಾರ್ಯಕರ್ತರು ಕೆಎಸ್ಆರ್ ಟಿಸಿ ಬಸ್ ಕಿಟಕಿ ಗಾಜು ಒಡೆದಿದ್ದಾರೆ. ಅಲ್ಲದೆ ಕಾರ್ಯಕರ್ತರನ್ನು ವಶಕ್ಕೆ ಪಡೆಯುವ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರು ಬಸ್‌ಗೆ ಅಡ್ಡಲಾಗಿ ಮಲಗಿ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದರು. ಈ ಹಿನ್ನೆಲೆ ಜಗಳೂರು ಪೊಲೀಸ್ ಠಾಣೆಯಲ್ಲಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲು ಮಾಡಿದ್ದೇವೆ ಎಂದು ಪಿಐ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.





ಉದಯವಾಹಿನಿ ಚಿತ್ರ

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿರುವ ಅವರು, "ಜಗಳೂರು ಪಟ್ಟಣದಲ್ಲಿ ಸೋಮವಾರ ಪ್ರತಿಭಟನೆಯನ್ನು ಬೆಳಗ್ಗೆಯಿಂದ ಆರಂಭಿಸಿದ್ದರು. ಮೊದಲು ಪ್ರತಿಭಟನೆ ಶಾಂತಿಯುತವಾಗಿ ನಡೆದಿತ್ತು. ಟೈರ್ ಗೆ ಬೆಂಕಿ ಹಂಚಿದ್ದರು. ಒಟ್ಟು ಹದಿನೈದು ಜನರ ಮೇಲೆ ಎಫ್ಐಆರ್ ಆಗಿದೆ. ಕರ್ತವ್ಯಕ್ಕೆ ಅಡ್ಡಿ ಹಾಗೂ ಸರ್ಕಾರಿ ಸ್ವತ್ತು ನಾಶ ಪಡಿಸಿದ್ದಕ್ಕಾಗಿ ಈ ಪ್ರಕರಣ ದಾಖಲು ಮಾಡಿದ್ದೇವೆ. ಬಸ್ ಕಿಟಕಿ ಗ್ಲಾಸ್ ಒಡೆದಿದ್ದಕ್ಕೆ ನಮ್ಮ ಸಿಬ್ಬಂದಿ ಕಣ್ಣಿಗೆ ಗಾಯ ಆಯಿತು" ಎಂದು ಹೇಳಿದ್ದಾರೆ.

## ಕಳಪೆ ಕುಂಬಳ ಬೀಜ ರೈತರಿಗೆ ಲಕ್ಷಾಂತರ ರೂಪಾಯಿ ನಷ್ಟ

**ಉದಯವಾಹಿನಿ, ಕೊಟ್ಟೂರು**

ಕೊಟ್ಟೂರು ತಾಲ್ಲೂಕಿನ ಹ್ಯಾಳ್ಯಾ ಗ್ರಾಮದ ರೈತರಾದ ಹಾಲೇಶ ಮತ್ತು ಕೊಟ್ರೇಶ ಎಫ್ 1 ರಾಮ್ ಕುಂಬಳ ಬೀಜ ಬಿತ್ತಿ ಫಲ ಕೊಡದೆ ತೀವ್ರ ನಷ್ಟಕ್ಕೆ ಒಳಗಾಗಿದ್ದಾರೆ ಒಂದೆಡೆ ಮಳೆ ಬಾರದೆ ಕಂಗಾಲಾಗಿದ್ದು ಮತ್ತೊಂದಡೆ ಕಳಪೆ ಬೀಜದಿಂದ ಸಂಕಷ್ಟಕ್ಕೆ ಗುರಿಯಾಗಿದ್ದಾರೆ ಅಧಿಕ ಇಳುವರಿ ಹೆಚ್ಚು ಲಾಭದ ನಿರೀಕ್ಷೆಯಿಂದ ದಾವಣಗೆರೆಯ ಬ್ರಹ್ಮಲಿಂಗೇಶ್ವರ ಆಗ್ರೋ ಫರ್ಟಿಲೈಜರ್ಸನಲ್ಲಿ ಹ್ಯಾಳ್ಯಾದ ರೈತರಾದ ಹಾಲೇಶ ಮತ್ತು ಕೊಟ್ರೇಶ 18600 ರೂ. ಕೊಟ್ಟು ಎಫ್ 1 ರಾಮ್ ಕುಂಬಳ ಬೀಜವನ್ನು ತಂದು ನೀರಾವರಿಗೆ ಬಿತ್ತನೆ ಮಾಡಿದ್ದಾರೆ.ಈ ಎಫ್1 ರಾಮ್ ಕುಂಬಳ ಬೀಜವನ್ನು ಹಾಲೇಶ ಮೂರು ಎಕರೆಗೆ ಬಿತ್ತನೆ ಮಾಡಿದ್ದು ಕೊಟ್ರೇಶ್ ಒಂದು ಎಕರೆಯಲ್ಲಿ ಬಿತ್ತನೆ ಮಾಡಿದ್ದಾರೆ

ಆರಂಭದಲ್ಲಿ ಕುಂಬಳ ಬೆಳೆ ಚನ್ನಾಗಿ ಬೆಳೆಯಿತು ಇನ್ನೇನು ಕಾಯಿ ಕಟ್ಟುತ್ತದೆ ಎಂದು ಆಸೆಯಿಂದ ಕಾದಿದ್ದ ರೈತರಿಗೆ ಮೂರು ತಿಂಗಳಾದರೂ ಒಂದೇ ಒಂದು ಕಾಯಿ ಕಟ್ಟದಿದ್ದರಿಂದ ದೊಡ್ಡ ನಿರಾಶೆ ಉಂಟಾಗಿದೆ



ಉದಯವಾಹಿನಿ ಚಿತ್ರ

ಈ ರೈತರು ಹೊಲಕ್ಕೆ ಬಂದು ಕಾಯಿ ಬಿಡದ ಕುಂಬಳ ನೋಡಿ ತಲೆ ಮೇಲೆ ಕೈಹೊತ್ತುಕೊಂಡು ಕುಳಿತರು ಕುಂಬಳ ಬೀಜ ಕಳಪೆ ಎಂಬುದರಲ್ಲಿ ಎರಡು ಮಾತಿರಲಿಲ್ಲ ಇತರೆ ರೈತರು ಇದನ್ನೇ ಹೇಳಿದರು ಎಕರೆಗೆ 30000 ರೂಗಳಂತೆ ಮೂರು ಎಕರೆಗೆ 1 ಲಕ್ಷ ರೂ ಖರ್ಚಾಗಿದೆ ಕುಂಬಳ ಬೆಳೆಗೆ ಪಂಪ್ ಸೆಟ್ ನಿಂದ ಸರಿಯಾಗಿ ನೀರು ಹಾಯಿಸಲಾಗಿದೆ ಮೂರು ತಿಂಗಳಾದರೂ ಕಾಯಿ ಬಿಟ್ಟಿಲ್ಲ ಹಾಕಿದ ಬಂಡವಾಳವೂ ಇಲ್ಲ ಬೆಳೆಯು ಇಲ್ಲದೆ ರೈತರಿಗೆ ಚಿಂತೆ ಆವರಿಸಿದೆ.

## ಉದ್ಯಾನವನಕ್ಕೆ ಕೂಡ್ಲಿಗಿ ಶಾಸಕ ಭೂದಾನ

**ಉದಯವಾಹಿನಿ, ಕೂಡ್ಲಿಗಿ**

ಮಗನ ಭವಿಷ್ಯಕ್ಕಾಗಿ ತಂದೆ ಭೂದಾನ ಮಾಡಿ ಕೊಟ್ಟರೆ ಅದರಲ್ಲಿ 2 ಎಕರೆ ಭೂಮಿಯನ್ನು ಪರಿಸರದ ದೃಷ್ಟಿ ಇಟ್ಟುಕೊಂಡ ಮಗ ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ಭೂದಾನ ಮಾಡಿಕೊಟ್ಟ ಅಪರೂಪದ ಪ್ರಸಂಗ ಕೂಡ್ಲಿಗಿಯಲ್ಲಿ ಕಂಡು ಬಂದಿದೆ.



ಉದಯವಾಹಿನಿ ಚಿತ್ರ

ಹೌದು, ಈ ರೀತಿಯ ಅಪರೂಪದ ಸನ್ನಿವೇಶಕ್ಕೆ ಸಾಕ್ಷಿಯಾದವರು ಬೇರಾರು ಅಲ್ಲ ಕೂಡ್ಲಿಗಿ ಕ್ಷೇತ್ರದ ಹಾಲಿ ಶಾಸಕ ಡಾ ಶ್ರೀನಿವಾಸ ಎನ್ ಟಿ ಯಾಗಿದ್ದಾರೆ. ಇವರ ತಂದೆ ಮಾಜಿ ಶಾಸಕ ಎನ್ ಟಿ ಬೊಮ್ಮಣ್ಣ ಮೂಲೆ ಕಟ್ಟಿನ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ತೆರೆದು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಕಾಳಜಿವಹಿಸಿದ್ದ ಶಿಕ್ಷಣ ಪ್ರೇಮಿ ಅವರು ಈ ಹಿಂದೆ ತನ್ನ ಕೊನೆ ಮಗನಿಗೆ ಭವಿಷ್ಯದ ದೃಷ್ಟಿಯಲ್ಲಿ ಇರಲಿ ಎಂದು ಕೂಡ್ಲಿಗಿ ತಾಲ್ಲೂಕಿನ ಗುಡೇಕೋಟೆ ಹೋಬಳಿಯ ಬೆಳ್ಳಗಟ್ಟ ಕಂದಾಯ ಗ್ರಾಮದ ಸರ್ವೆ ನಂಬರ್ 266/2 ರ 9 ಎಕರೆ ಭೂಮಿಯನ್ನು ದಾನವಾಗಿ ಮಾಡಿಕೊಟ್ಟಿದ್ದರು ತಂದೆ ಶಿಕ್ಷಣ ಪ್ರೇಮಿಯಾದರೆ ಮಗ ಹಾಲಿ ಕೂಡ್ಲಿಗಿ ಶಾಸಕ ಗುಣಸಾಗರದಲ್ಲಿ ಸರ್ಕಾರಿ ಶಾಲೆಗೆ ಸ್ವಂತ ಖರ್ಚಿನಲ್ಲಿ ಖರೀದಿಸಿದ ಭೂಮಿ ದಾನ ಮಾಡಿ ಶಿಕ್ಷಣ ಪ್ರೇಮಿಯಾಗುವ ಜೊತೆಗೆ ತಂದೆ ಕೊಟ್ಟ ಭೂಮಿಯಲ್ಲಿನ ಎರಡು ಎಕರೆ ಭೂಮಿಯನ್ನು ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ರಾಜ್ಯದ ರಾಜ್ಯಪಾಲರ ಪರವಾಗಿ ತೋಟಗಾರಿಕೆ ಇಲಾಖೆಗೆ ಯಾವುದೇ ಫಲಾಪೇಕ್ಷೆ ಬಯಸದೆ ಉಚಿತವಾಗಿ ದಾನ ಮಾಡಿ 2026 ಸೆಪ್ಟೆಂಬರ್ 18ರಂದು ಕೂಡ್ಲಿಗಿ ಉಪನೋಂದಣಿ ಕಚೇರಿಯಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಜಿ ಪಂ ಇವರಿಗೆ ದಾನ ಮಾಡಿ ಪರಿಸರ ಪ್ರೇಮಿ ಶಾಸಕರಾಗುವ ಜೊತೆಗೆ ಈ ರೀತಿಯ ಸಾಮಾಜಿಕ ಕಳಕಳಿ ಇಟ್ಟುಕೊಂಡ ಇತಿಹಾಸದ ಮೊದಲ ಶಾಸಕರೆಂದರೆ ತಪ್ಪಾಗದು.

## ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಸಿಪಿಐ(ಎಂ) ಕಾರ್ಯಕರ್ತರ ಪ್ರತಿಭಟನೆ

**ಉದಯವಾಹಿನಿ, ಹೊಸಪೇಟೆ**

ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಭಾರತ ಕಮ್ಯೂನಿಷ್ಟ ಪಕ್ಷ ಮಾರ್ಕ್ಸ್ ವಾದಿ ತಾಲ್ಲೂಕು ಸಮಿತಿ ನೇತೃತ್ವದಲ್ಲಿ ಕಾರ್ಯಕರ್ತರು ಸೋಮವಾರ ಸ್ಥಳೀಯ ತಹಶೀಲ್ದಾರರ ಕಛೇರಿ ಎದುರು ಪ್ರತಿಭಟನೆ ನಡೆಸಿದರು.

ಅಕ್ರಮವಾಗಿ ಟೋಲ್ ಸಂಗ್ರಹ ಮಾಡುತ್ತಿರುವುದನ್ನು ವಿರೋಧಿಸಿ, ಪ್ರತಿಭಟನೆ ನಡೆಸುತ್ತಿದ್ದ ಸಿಪಿಐ(ಎಂ) ಮುಖಂಡರನ್ನು ಬಂಧಿಸಿರುವ ಕ್ರಮವನ್ನು ಖಂಡಿಸಿ, ಹಾಗೂ ರಾಯಚೂರಿನಲ್ಲಿ ಜರುಗಿದ ದಲಿತ ಮಹಿಳೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಆರೋಪಿಗಳಿಗೆ ತಕ್ಕ ಶಿಕ್ಷೆ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ ಸಿಪಿಐ(ಎಂ) ಕಾರ್ಯಕರ್ತರು ನಂತರ ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಆರ್.ಭಾಸ್ಕರ್ ರೆಡ್ಡಿ, ರಾಜ್ಯ ಹೈಕೋರ್ಟ್ ಆದೇಶದಂತೆ ನೈಸ್ ಕಂಪನಿ ವಶಪಡಿಸಿಕೊಂಡಿರುವ ಭೂಮಿ ರೈತರಿಗೆ ವಾಪಸ್ ನೀಡಬೇಕು ಹಾಗೂ ಅಕ್ರಮ ಟೋಲ್ ವಸೂಲಿ ಸಂಗ್ರಹ ನಿಲ್ಲಿಸಬೇಕೆಂದು ಆಗ್ರಹಿಸಿ ಸಿಪಿಐ(ಎಂ)ರಾಜ್ಯ ಕಾರ್ಯದರ್ಶಿ ಕೆ.ಪ್ರಕಾಶ್ ರವರು ಸೇರಿದಂತೆ ಇತರೆ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರನ್ನೊಳಗೊಂಡ ಮುಖಂಡರು ನೈಸ್ ಟೋಲ್ ಗೇಟ್ ಬಳಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದವರನ್ನು ಬಂಧಿಸಿರುವುದು ತೀವ್ರವಾಗಿ ಖಂಡಿಸಿದರು.





ಉದಯವಾಹಿನಿ ಚಿತ್ರ

## 42,500 ರೂ. ಮೌಲ್ಯದ ಪಡಿತರ ಅಕ್ಕಿಯನ್ನು ವಶ

**ಉದಯವಾಹಿನಿ, ಸಿರುಗುಪ್ಪ**

ನಗರದ ಅಭಯಾಂಜನೇಯ ಸ್ವಾಮಿ ದೇವಸ್ಥಾನದ ಪಕ್ಕದ ಕಾಲೋನಿ ರಸ್ತೆಯ ಮೂಲಕ ಸಿಂಧನೂರು ಕಡೆಗೆ ಅಕ್ರಮವಾಗಿ ಟಾಟಾ ಕಂಪನಿಯ ಗೂಡ್ಸ್ ವಾಹನದಲ್ಲಿ ಸಾಗಿಸಲಾಗುತ್ತಿದ್ದ ಪಡಿತರ ಅಕ್ಕಿಯನ್ನು ಅಧಿಕಾರಿಗಳು ದಾಳಿ ನಡೆಸಿ ವಶಪಡಿಸಿಕೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಆಹಾರ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ವಾಹನ ಸಹಿತ ಅಕ್ಕಿ ವಶಕ್ಕೆ ಪಡೆದುಕೊಂಡಿದ್ದಾರೆ. ಈ ಬಗ್ಗೆ ಸಿರುಗುಪ್ಪ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಟಾಟಾ ಕಂಪನಿಯ ಗೂಡ್ಸ್ ವಾಹನದಲ್ಲಿ ಸುಮಾರು 1,850 ಕೆಜಿ (18.50 ಕ್ವಿಂಟಲ್) ಪಡಿತರ ಅಕ್ಕಿ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ 42,500 ರೂ. ಮೌಲ್ಯದ ಪಡಿತರ ಅಕ್ಕಿ ವಶಪಡಿಸಿಕೊಳ್ಳಲಾಗಿದೆ ಎಂದು ಪಡಿತರ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಮಿನಿ ನ್ಯೂಸ್

### ಸಿದ್ದರಾಮಯ್ಯ ಪ್ರತಿಮೆ ಮರುಸ್ಥಾಪನೆಗೆ ಆಗ್ರಹ

**ಉದಯವಾಹಿನಿ, ಕಲಬುರಗಿ**

ಕಲಬುರಗಿ ನಗರದಲ್ಲಿ ತೆರವುಗೊಳಿಸಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಅದೇ ಸ್ಥಳದಲ್ಲಿ ಮರುಸ್ಥಾಪಿಸುವಂತೆ ಆಗ್ರಹಿಸಿ ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವ ಸಂಘ ಹಾಗೂ ಸಿದ್ದರಾಮಯ್ಯ ಅಭಿಮಾನಿ ಬಳಗದ ವತಿಯಿಂದ ಆಳಂದ ತಹಸೀಲ್ದಾರರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಹಾಲುಮತ ಸಮುದಾಯದ ಯುವ ನಾಯಕ ಬಾಲಾಜಿ ಘೋಡಕೆ ಅವರ ನೇತೃತ್ವದಲ್ಲಿ ನಡೆದ ಮನವಿ ಸಲ್ಲಿಕೆ ಸಂದರ್ಭದಲ್ಲಿ, ತೆರವುಗೊಳಿಸಿರುವ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಅದೇ ಸ್ಥಳದಲ್ಲಿ ಮರುಸ್ಥಾಪಿಸಬೇಕು ಎಂದು ಒತ್ತಾಯಿಸಲಾಯಿತು. ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಶಿವಲಿಂಗ ಯಳಸಂಗಿ, ಉಮೇಶ್ ಪೂಜಾರಿ, ಪರಮೇಶ್ವರ್ ಪೂಜಾರಿ, ಶಿವಪ್ಪ ಪೂಜಾರಿ, ಸಂಜುಕುಮಾರ್ ಕುಡಕಿ, ಸಿದ್ದು ಪೂಜಾರಿ ಮೊಘ, ಸೈಬಣ್ಣ ಬಿರಾದಾರ, ರಮೇಶ್ ಘೋಡಕೆ, ವಿಶ್ವನಾಥ್ ಘೋಡಕೆ, ಕನಕದಾಸ ಪೂಜಾರಿ, ಸುನೀಲ್ ಪೂಜಾರಿ, ಜಗದೀಶ್ ಪೂಜಾರಿ, ಮಾಳು ಮಂಟಕಿ, ಖಂಡು ಪೂಜಾರಿ ಸೇರಿದಂತೆ ಹಲವಾರು ಯುವಕರು ಉಪಸ್ಥಿತರಿದ್ದರು.

### ಸೆ.27ರಂದು ಪೂರ್ವಭಾವಿ ಸಭೆ

**ಉದಯವಾಹಿನಿ, ಚಿತ್ತಾಪುರ**

ಪಟ್ಟಣದಲ್ಲಿ ಸುಸಜ್ಜಿತ ಬಸವ ಭವನ ಹಾಗೂ ಸಮಾಜದ ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ಪೂರಕವಾಗುವಂತೆ ವಿದ್ಯಾರ್ಥಿನಿಯರ ವಸತಿ ನಿಲಯ ನಿರ್ಮಿಸಲು ಕಳೆದ ಕೆಲ ತಿಂಗಳುಗಳ ಹಿಂದೇ ಚರ್ಚಿಸಿದಂತೆ ಬಸವ ಭವನ ನಿರ್ಮಾಣ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯ ನಿರ್ಮಾಣದ ಗುದ್ದಲಿ ಪೂಜೆ ನೆರವೇರಿಸಿದ್ದೆವು, ಅದರಂತೆ ನವೆಂಬರ್ ತಿಂಗಳ ಮೂರನೇ ಅಥವಾ ನಾಲ್ಕನೇ ವಾರದಲ್ಲಿ ಬಸವ ಭವನ ಉದ್ಘಾಟನೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಬಸವೇಶ್ವರ ಚಾರಿಟೇಬಲ್ ಟ್ರಸ್ಟ್ ಕಾರ್ಯದರ್ಶಿ ನಾಗರಾಜ ಭಂಕಲಗಿ ಹೇಳಿದರು. ಪಟ್ಟಣದ ಬಸವ ಭವನ ನಿರ್ಮಾಣದ ಆವರಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಸವ ಭವನ ನಿರ್ಮಾಣ ಕಾಮಗಾರಿ ಕೆಲವೇ ದಿನಗಳಲ್ಲಿ ಮುಗಿಯುವ ಹಂತದಲ್ಲಿದ್ದು, ಹೀಗಾಗಿ ಬಸವ ಭವನದ ಉದ್ಘಾಟನೆ ಕಾರ್ಯಕ್ರಮವನ್ನು ಅದ್ದೂರಿಯಾಗಿ ನೆರವೇರಿಸಲು ಚಿಂತನೆ ನಡೆಸಿದ್ದೇವೆ. ಹಿಂದಿನ ದಿನಗಳಲ್ಲಿ ಮಾತು ಕೊಟ್ಟಿರುವಂತೆ ವಸತಿ ನಿಲಯದ ಉದ್ಘಾಟನೆಯೂ ಕೂಡ ಅತೀ ಶೀಘ್ರದಲ್ಲಿಯೇ ಹಮ್ಮಿಕೊಳ್ಳಲಾಗುವುದು ಎಂದರು. ಶರಣಬಸಪ್ಪ ದರ್ಶನಾಪುರ, ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಶರಣಕುಮಾರ್ ಮೋದಿ ಸೇರಿದಂತೆ ಸಮಾಜದ ಹಿರಿಯರ ಹಾಗೂ ವಿವಿಧ ಮಠಾಧೀಶರ ಸಮ್ಮುಖದಲ್ಲಿ ಉದ್ಘಾಟನೆ ನೆರವೇರಿಸಲು ಸಿದ್ಧತೆಯನ್ನು ಮಾಡಿಕೊಳ್ಳಲಾಗಿದೆ ಎಂದರು. ನವೆಂಬರ್ ತಿಂಗಳಲ್ಲಿ ಬಸವ ಭವನ ಉದ್ಘಾಟನೆಯಾದ ಕೂಡಲೇ ಮದುವೆ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾದರೇ ನ.27ರ ನಂತರ ಬುಕ್ಕಿಂಗ್ ಕೂಡ ಮಾಡಿಕೊಳ್ಳಲು ಸಿದ್ಧತೆಗಳನ್ನು ಮಾಡಿಕೊಂಡಿದ್ದೇವೆ ಎಂದರು.



ಉದಯವಾಹಿನಿ ಚಿತ್ರ

### ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಚಾಲನೆ

**ಉದಯವಾಹಿನಿ, ಕಲಬುರಗಿ**

ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಹಿರಿಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಕ್ರೀಡಾಕೂಟಕ್ಕೆ ಮಾಜಿ ಸಂಸದ ಬಸವರಾಜ ಪಾಟೀಲ ಸೇಡಂ ಅವರು ಚಾಲನೆ ನೀಡಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ರೀಡಾಪಟುಗಳು ನಿರಂತರ ಪರಿಶ್ರಮ, ಶಿಸ್ತು ಹಾಗೂ ಆತ್ಮವಿಶ್ವಾಸದೊಂದಿಗೆ ಸಾಧನೆಯತ್ತ ಮುನ್ನಡೆಯಬೇಕು. ಕ್ರೀಡಾಕೂಟಗಳು ಹಿರಿಯ ಕ್ರೀಡಾಪಟುಗಳ ಪ್ರತಿಭೆ ಹಾಗೂ ಸಾಮರ್ಥ್ಯವನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿವೆ ಎಂದು ಹೇಳಿದರು. ಕ್ರೀಡಾಕೂಟದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಹಿರಿಯ ಅಥ್ಲೆಟಿಕ್ಸ್ ಕ್ರೀಡಾಪಟುಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಾ. ವಿಜಯ ಮೋಹನ್, ಕಲಬುರಗಿ ಜಿಲ್ಲಾ ಅಥ್ಲೆಟಿಕ್ಸ್ ಸಂಘದ ಅಧ್ಯಕ್ಷ ಮಹೇಬೂಬ ಪಟೇಲ್ ಎಮ್. ಆರ್. ಎಲ್, ರಾಜ್ಯ ಕಾರ್ಯದರ್ಶಿ ರಾಜವೇಲು ಆರ್. ಎಂ.ಆರ್.ಎಲ್.ಸಿ. ಎನ್. ಬಾಬಳಗಾಂವ, ರಾಹುಲ್ ಬಿಲಗುಂದಿ, ಎಸ್.ಎಸ್. ತವಡೆ, ಶ್ರೀನಿವಾಸ, ರಾಜಶೇಖರ, ದತ್ತಾತ್ರೇಯ, ನಾಗರಾಜ, ಸಂಜಯ ಬಾಣದ, ಯಾಳಗಣ್ಣವರ, ಸಂತೋಷ ಭಾವಿಮನಿ, ಪ್ರವೀಣ ಕುಮಾರ ಪುಣೆ ಸೇರಿದಂತೆ ಕ್ರೀಡಾಪಟುಗಳು, ಸಂಘದ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

### ತಾಳಿಕೋಟೆ ಸಂಪೂರ್ಣ ಬಂದ್ ಯಶಸ್ವಿ

**ಉದಯವಾಹಿನಿ, ತಾಳಿಕೋಟೆ**

ತಾಳಿಕೋಟೆ ತಾಲ್ಲೂಕು ಒಳಗೊಂಡು ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಎಂದು ಆಗ್ರಹಿಸಿ ಭಾರತೀಯ ಜನತಾ ಪಕ್ಷ ರೈತ ಮೂರ್ಚಾ ಹಾಗೂ ಜೆಡಿಎಸ್ ಪಕ್ಷದ ನೇತೃತ್ವದಲ್ಲಿ ಸೋಮವಾರರಂದು ಕರೆ ನೀಡಿದ್ದ ತಾಳಿಕೋಟೆ ಬಂದ್ ಸಂಪೂರ್ಣ ಯಶಸ್ವಿಯಾಯಿತು.

ಬರಪೀಡಿತ ತಾಲ್ಲೂಕು ಘೋಷಣೆಗೆ ಆಗ್ರಹಿಸಿ ನಡೆಯುತ್ತಿರುವ ಹೋರಾಟದ ಭಾಗವಾಗಿ 3 ದಿನಗಳ ಸತತ ಹೋರಾಟದ ನಂತರ ಸೋಮವಾರರಂದು ಸಂಪೂರ್ಣ ಬಂದ್ ಕರೆಯೊಂದಿಗೆ ಪಟ್ಟಣದ ಶ್ರೀ ಖಾಸ್ಗತೇಶ್ವರ ಮಠದಿಂದ ಬೃಹತ್ ಪ್ರತಿಭಟನೆಯ ಮೂಲಕ ಕತ್ರಿ ಬಜಾರ, ವಿಠ್ಠಲ ಮಂದಿರ ರಸ್ತೆ, ಶಿವಾಜಿ ಮಹಾರಾಜರ ವೃತ್ತ, ಬಸ್ ನಿಲ್ದಾಣದ ಮುಂಭಾಗದ ರಸ್ತೆಗುಂಟಾ ಹಾಯ್ದು ಬಸವೇಶ್ವರ ವೃತ್ತದಲ್ಲಿ ಸಭೆಯಾಗಿ ಮಾರ್ಪಟ್ಟಿತು. ತಾಳಿಕೋಟೆ ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ಬಹುತೇಕ ಎಲ್ಲಾ ಅಂಗಡಿ–ಮುಂಗಟ್ಟುಗಳು ಬೆಳಗ್ಗೆಯಿಂದಲೇ ಮುಚ್ಚಿದ್ದವು. ಮದ್ಯ ಮಾರುಕಟ್ಟೆ, ಸರಾಫ್ ಬಜಾರ್, ಎಪಿಎಂಸಿ, ಕಿರಾಣಿ, ಅಡತ್ ಮರ್ಚಂಟ್, ತರಕಾರಿ, ಹಣ್ಣು ಸೇರಿದಂತೆ ವಿವಿಧ ವ್ಯಾಪಾರ ವಹಿವಾಟುಗಳು ಸಂಪೂರ್ಣ ಸ್ಥಗಿತಗೊಂಡಿದ್ದವು. ಪರಿಣಾಮ ಪಟ್ಟಣದ ಪ್ರಮುಖ ರಸ್ತೆಗಳು ಜನಸಂಚಾರವಿಲ್ಲದೆ ಬಿಕೋ ಎನ್ನುತ್ತಿದ್ದವು. ಬಂದ್‌ಗೆ ವ್ಯಾಪಾರಸ್ಥರು, ರೈತರು ಹಾಗೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಬಂದ್ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ಸಂಚಾರವೂ ಸ್ಥಗಿತಗೊಂಡಿದ್ದರಿಂದ ತಾಳಿಕೋಟೆ ಬಸ್ ನಿಲ್ದಾಣ ಪ್ರಯಾಣಿಕರಿಲ್ಲದೆ ಬಿಕೋ ಎನ್ನುತ್ತಿತ್ತು. ಪ್ರತಿದಿನ ಪ್ರಯಾಣಿಕರಿಂದ ಗಿಜಿಗುಡುತ್ತಿದ್ದ ಬಸ್ ನಿಲ್ದಾಣದಲ್ಲಿ ಬಸ್‌ಗಳ ಸಂಚಾರ ಹಾಗೂ ಪ್ರಯಾಣಿಕರ ಓಡಾಟ ಇಲ್ಲದೆ ಖಾಲಿ ಖಾಲಿಯಾಗಿ ಕಂಡುಬಂತು.



ಉದಯವಾಹಿನಿ ಚಿತ್ರ

1959ರಲ್ಲಿ ಈ ಮಂಡಳಿ ಸ್ಥಾಪನೆ ಆಗಿದ್ದು, ಆರಂಭದಲ್ಲಿ ಎಲ್ಲರಂತೆ ಮಣ್ಣು ಮತ್ತು ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುತ್ತಿತ್ತು

# 14 ವರ್ಷಗಳಿಂದ ಒಂದೇ ಮೂರ್ತಿ ಪ್ರತಿಷ್ಠಾಪನೆ, ಪಟಾಕಿ ಸಿಡಿಸಲ್ಲ, ಡಿಜೆ ಹಚ್ಚಲ್ಲ!

**ಉದಯವಾಹಿನಿ, ಬೆಳಗಾವಿ**

ಬಹುತೇಕ ಸಾರ್ವಜನಿಕ ಗಣೇಶ ಮಂಡಳಿಗಳು ಪ್ರತಿವರ್ಷ ಆಕರ್ಷಕ, ಹೊಸ ಗಣಪತಿ ಮೂರ್ತಿ ಪ್ರತಿಷ್ಠಾಪಿಸುವುದು ಸಾಮಾನ್ಯ. ಆದರೆ, ಬೆಳಗಾವಿ ಆರ್‌ಪಿಡಿ ಕ್ರಾಸ್ ಮಹಾಗಣಪತಿ ಸಾರ್ವಜನಿಕ ಗಣೇಶೋತ್ಸವ ಮಂಡಳಿ ಕಳೆದ 14 ವರ್ಷಗಳಿಂದ ಒಂದೇ ಮೂರ್ತಿಯನ್ನು ಪ್ರತಿಷ್ಠಾಪಿಸುತ್ತಿದೆ. ಅಲ್ಲದೇ ಪಟಾಕಿ ಸಿಡಿಸುವುದಿಲ್ಲ, ಡಿಜೆ ಕೂಡ ಹಚ್ಚದೇ ಪರಿಸರಸ್ನೇಹಿ ಗಣೇಶೋತ್ಸವ ಆಚರಿಸುತ್ತಿದೆ.

1959ರಲ್ಲಿ ಈ ಮಂಡಳಿ ಸ್ಥಾಪನೆ ಆಗಿದ್ದು, ಆರಂಭದಲ್ಲಿ ಎಲ್ಲರಂತೆ ಮಣ್ಣು ಮತ್ತು ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುತ್ತಿತ್ತು. 11 ದಿನಗಳ ಬಳಿಕ ಮೂರ್ತಿ ನಿಮಜ್ಜನ ಮಾಡುವಾಗ, ನೀರು ಕಲುಷಿತವಾಗುತ್ತಿತ್ತು. ಅಲ್ಲದೇ ನೀರಲ್ಲಿ ಮುಳಗದೇ ಇದ್ದಾಗ ಮೂರ್ತಿ ಮೇಲೆ ತೇಲುವುದನ್ನು ಮತ್ತು ಅದರ ಮೇಲೆ ಜನ ಕಾಲಿಡುವುದನ್ನು ಪ್ರತಿವರ್ಷ ನೋಡುತ್ತಿದ್ದರು. ಇದನ್ನು ಹೇಗಾದರೂ ಮಾಡಿ ತಪ್ಪಿಸಬೇಕು ಎಂದು ಯೋಚಿಸಿದಾಗ, ಅವರ ಕಣ್ಮುಂದೆ ಬಂದಿದ್ದು ಪುಣೆ ಮಾದರಿ. ಪುಣೆಯಲ್ಲಿ ಹಲವು ಸಾರ್ವಜನಿಕ ಮಂಡಳಿಗಳು ಪ್ರತಿವರ್ಷ ಹೊಸ ಮೂರ್ತಿ ಮಾಡಿಸುವುದಿಲ್ಲ. ಬದಲಾಗಿ ಹಳೆ ಮೂರ್ತಿಗಳನ್ನೇ ಕೂರಿಸಿ ಪೂಜೆ ಮಾಡುತ್ತಾರೆ. ಇದೇ ಸಂಪ್ರದಾಯಕ್ಕೆ ಬೆಳಗಾವಿಯಲ್ಲಿ ನಾಂದಿ ಹಾಡಿದ ಆರ್.ಪಿ.ಡಿ. ಕ್ರಾಸ್ ಮಹಾಗಣಪತಿ ಸಾರ್ವಜನಿಕ ಗಣೇಶೋತ್ಸವ ಮಂಡಳಿ ಪದಾಧಿಕಾರಿಗಳು, 2013ರಲ್ಲಿ ಬೆಳಗಾವಿ ಅನಗೋಳದ ಕಲಾವಿದ ಮಾರುತಿ ಪಾಟೀಲ ಎಂಬುವರಿಂದ 1.11 ಲಕ್ಷ ರೂ. ವೆಚ್ಚದಲ್ಲಿ ಫೈಬರ್‌ನಲ್ಲಿ 13 ಅಡಿ ಎತ್ತರದ ಗಣೇಶನ ಮೂರ್ತಿ ಮಾಡಿಸಿದರು. ಅಂದಿನಿಂದ ಪ್ರತಿವರ್ಷ ಇದೇ ಮೂರ್ತಿ ಪ್ರತಿಷ್ಠಾಪಿಸಿ, ಭಕ್ತಿಯಿಂದ ಪೂಜಿಸುತ್ತಿದ್ದಾರೆ. ಬಳಿಕ ಅದನ್ನು ಮಂಡಳಿ ಅಧ್ಯಕ್ಷ ಕಿರಣ ಸಾಯನಾಕ ಅವರ ಶೆಡ್ಡಿನಲ್ಲಿ ಜತನದಿಂದ ಇಡುತ್ತಾರೆ.



ಉದಯವಾಹಿನಿ ಚಿತ್ರ

ಮೊದಲು ಮಣ್ಣಿನ ಮೂರ್ತಿ ಪೂಜೆ ಮಾಡುತ್ತಿದ್ದರಿಂದ, ಅದು ಸರಳವಾಗಿ ನೀರಲ್ಲಿ ಮುಳುಗುತ್ತಿತ್ತು. ಈಗಿನ ಪಿಒಪಿ ಮೂರ್ತಿಗಳು ಮುಳುಗದೇ, ಮೇಲೆಯೇ ತೇಲಾಡುತ್ತವೆ. ಈ ವೇಳೆ ಮೂರ್ತಿಯ ಮೇಲೆ ಒಂದಿಷ್ಟು ಜನರು ಕಾಲಿಟ್ಟು ಮುಳುಗಿಸಲು ಪ್ರಯತ್ನಿಸುವುದನ್ನು ನೋಡಿದ್ದೇವೆ. ಹಾಗಾಗಿ, ಇದು ದೇವರಿಗೆ ಮಾಡುವ ಅಪಮಾನ ಅಂತಾ ತಿಳಿದು, ನಾವು ಕಳೆದ 14 ವರ್ಷಗಳಿಂದ ಒಂದೇ ಮೂರ್ತಿ ಪೂಜಿಸುತ್ತಿದ್ದೇವೆ. ಗಣೇಶೋತ್ಸವ ಸಮೀಪಿಸುತ್ತಿದ್ದಂತೆ, ಎರಡು ವರ್ಷಕ್ಕೊಮ್ಮೆ ಹೊಸದಾಗಿ ಬಣ್ಣ ಬಳಿಯುತ್ತೇವೆ. ಆರ್‌ಪಿಡಿ ಕ್ರಾಸ್ ಮಹಾಗಣಪತಿ ಸಾರ್ವಜನಿಕ ಗಣೇಶ ಮಂಡಳಿ ಕಾರ್ಯ ಇಡೀ ರಾಜ್ಯಕ್ಕೆ ಮಾದರಿ ಆಗಿದೆ. ಒಂದೇ ಗಣಪತಿ ಪೂಜಿಸುವುದರಿಂದ ದುಡ್ಡು ಉಳಿತಾಯ ಆಗುತ್ತದೆ. ಅದರ ಜೊತೆಗೆ ಪರಿಸರವನ್ನು ಕಾಪಾಡಬಹುದು. ಸಂಪ್ರದಾಯಂತೆ ಚಿಕ್ಕ ಮಣ್ಣಿನ ಮೂರ್ತಿಯನ್ನು ಮಾತ್ರ ಬಾವಿಯಲ್ಲಿ ನಿಮಜ್ಜನ ಮಾಡುತ್ತಾರೆ ಎಂದು ಸ್ಥಳೀಯರಾದ ಲಕ್ಷ್ಮೀ ನಾರಾಯಣ ಕಿನಿ ಪ್ರಶಂಸಿಸಿದ್ದಾರೆ.

ಪವನ ಪದರಾ ಎಂಬುವರು ಮಾತನಾಡಿ, ಬೆಳಗಾವಿಯಲ್ಲಿ ಅದ್ದೂರಿ ಆಗಿ ಗಣೇಶೋತ್ಸವ ಆಚರಿಸಲಾಗುತ್ತದೆ. ಅದರಲ್ಲೂ ಆರ್‌ಪಿಡಿ ಕ್ರಾಸ್ ಮಂಡಳಿಯವರು ತುಂಬಾ ಸರಳ ಮತ್ತು ಅರ್ಥಪೂರ್ಣವಾಗಿ ಆಚರಿಸುತ್ತಾರೆ. ಒಂದೇ ಮೂರ್ತಿ ಪೂಜಿಸುತ್ತಾರೆ.

> ನಾವು ಮೆರವಣಿಗೆ ನಡೆಸುವುದಿಲ್ಲ. ಪಟಾಕಿ ಸಿಡಿಸುವುದಿಲ್ಲ. ಡಿಜೆ ಹಚ್ಚುವುದಿಲ್ಲ. ಕಿವಿಗಡಚಿಕ್ಕುವ ಶಬ್ದಕ್ಕಿಂತ ಭಜನೆ, ಪೂಜೆ ಹಾಗೂ ಭಕ್ತಿಯಲ್ಲಿ ನಾವು ಮುಳುಗಿರುತ್ತೇವೆ. ಜೊತೆಗೆ ವಿದ್ಯಾರ್ಥಿಗಳಿಗೆ, ಅನಾರೋಗ್ಯಕ್ಕೆ ತುತ್ತಾದವರಿಗೆ ಮಂಡಳಿಯಿಂದ ಆರ್ಥಿಕ ನೆರವು ನೀಡುತ್ತೇವೆ.
>
> –ಕಿರಣ ಸಾಯನಾಕ

> ಗಣೇಶನಿಗೆ ಹೊಸ ಪೇಟಾ, ಬಟ್ಟೆಯನ್ನು ಉಡಿಸಿ, ಶೃಂಗರಿಸುತ್ತೇವೆ. ಮಹಾಪ್ರಸಾದ ಮಾಡಿಸುತ್ತೇವೆ. ನಮ್ಮ ಉದ್ದೇಶ ಪರಿಸರ ಸ್ನೇಹಿ ಆಚರಣೆ ಜೊತೆಗೆ ಆರ್ಥಿಕ ಹೊರೆಯನ್ನು ತಪ್ಪಿಸುವುದಾಗಿದೆ. ಸ್ವಯಂ ಸ್ಫೂರ್ತಿಯಿಂದ ನೀಡುವವರ ಬಳಿ ಮಾತ್ರ ದೇಣಿಗೆ ಪಡೆಯುತ್ತೇವೆ.
>
> –ಸಚಿನ ಚವ್ಹಾಣ

### ಆದಿಲಾಬಾದ್ ಆಸ್ಪತ್ರೆಯ ನವಜಾತ ಶಿಶುಗಳ ವಿಶೇಷ ಆರೈಕೆ ವಾರ್ಡ್‌ನಲ್ಲಿ ಎಸಿ ಸ್ಫೋಟ

# ಎರಡು ಕಂದಮ್ಮಗಳ ಧಾರುಣ ಸಾವು



**ಅದಿಲಾಬಾದ್(ತೆಲಂಗಾಣ):** ಆದಿಲಾಬಾದ್‌ನ RIMS ಆಸ್ಪತ್ರೆಯಲ್ಲಿ ಭಾರಿ ದುರಂತ ಸಂಭವಿಸಿದೆ. ಸೋಮವಾರ ಮಧ್ಯರಾತ್ರಿ ನವಜಾತ ಶಿಶುಗಳ ವಿಶೇಷ ಆರೈಕೆ ವಾರ್ಡ್‌ನಲ್ಲಿ ಹವಾ ನಿಯಂತ್ರಕ ಯಂತ್ರ ಸ್ಫೋಟಗೊಂಡ ಪರಿಣಾಮ ಎರಡು ಶಿಶುಗಳು ಸಾವನ್ನಪ್ಪಿವೆ. ಇನ್ನುಳಿದಂತೆ ಎರಡು ಶಿಶುಗಳ ಸ್ಥಿತಿ ಗಂಭೀರವಾಗಿದೆ. ಈ ವಾರ್ಡ್‌ನಲ್ಲಿ ಒಟ್ಟು 27 ಶಿಶುಗಳನ್ನು ದಾಖಲಿಸಲಾಗಿತ್ತು ಎಂದು ವರದಿಯಾಗಿದೆ. ಘಟನೆಯಿಂದ ನೋಡ ನೋಡುತ್ತಿದ್ದಂತೆ ವಾರ್ಡ್ ದಟ್ಟವಾದ ಹೊಗೆಯಿಂದ ಆವೃತವಾಗಿತ್ತು. ಹೀಗಾಗಿ ಇನ್ಕ್ಯುಬೇಟರ್‌ಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದ 27 ಶಿಶುಗಳು ಉಸಿರುಗಟ್ಟುವಿಕೆಯಿಂದಾಗಿ ಪ್ರಾಣಾಪಾಯ ಸ್ಥಿತಿ ಎದುರಿಸುವಂತಾಯಿತು.

ಈ ದುರ್ಘಟನೆಯಲ್ಲಿ ಎರಡು ಶಿಶುಗಳು ಮೃತಪಟ್ಟರೆ, ಎರಡು ಗಂಭೀರ ಸ್ಥಿತಿಯಲ್ಲಿವೆ. ಉಳಿದ 23 ಶಿಶುಗಳನ್ನು ತುರ್ತಾಗಿ ಖಾಸಗಿ ಆಸ್ಪತ್ರೆಗಳಿಗೆ ಸ್ಥಳಾಂತರಿಸುವ ಮೂಲಕ ಹೆಚ್ಚಿನ ಸಾವುನೋವುಗಳನ್ನು ತಪ್ಪಿಸಲಾಗಿದೆ.

**ಎಸಿ ಸ್ಫೋಟದಿಂದ ಆತಂಕದ ವಾತಾವರಣ :** 27 ಶಿಶುಗಳು ಆರೈಕೆ ಪಡೆಯುತ್ತಿದ್ದ SNCUನಲ್ಲಿ ಎಸಿ ಘಟಕವೊಂದು ಇದ್ದಕ್ಕಿದ್ದಂತೆ ಸ್ಫೋಟಗೊಂಡಿದ್ದರಿಂದ ಮಧ್ಯರಾತ್ರಿಯ ನಂತರ ಆತಂಕದ ವಾತಾವರಣ ನಿರ್ಮಾಣವಾಗಿದೆ. ಈ ಘಟನೆಯು ಸಿಬ್ಬಂದಿಯನ್ನು ಬೆಚ್ಚಿಬೀಳಿಸಿದೆ. ಜನರು ಆತಂಕದಿಂದ ಕೂಗಾಡಿದ್ದರಿಂದ ಭಯ ಮತ್ತು ಗೊಂದಲದ ವಾತಾವರಣ ಕಂಡುಬಂತು. ಆ ಸಮಯದಲ್ಲಿ ಆಸ್ಪತ್ರೆಯ ನಿರ್ದೇಶಕ ಜೈ ಸಿಂಗ್ ಅವರು ಪರಿಸ್ಥಿತಿಯ ಬಗ್ಗೆ ತಿಳಿದು, ಸಿಬ್ಬಂದಿ ಮತ್ತು ಆಂಬ್ಯುಲೆನ್ಸ್ ಚಾಲಕರೊಂದಿಗೆ SNCUಗೆ ದೌಡಾಯಿಸಿದಾಗ, ಆ ಘಟಕವು ದಟ್ಟ ಹೊಗೆಯಿಂದ ಆವೃತವಾಗಿರುವುದು ಕಂಡುಬಂದಿತ್ತು.

ತಕ್ಷಣಕ್ಕೆ ಕಿಟಕಿ ಗಾಜುಗಳನ್ನು ಒಡೆದು ಶಿಶುಗಳನ್ನು ರಕ್ಷಿಸಲು ತಕ್ಷಣದ ಪ್ರಯತ್ನಗಳನ್ನು ನಡೆಸಲಾಯಿತಾದರೂ, ಇಚೋಡಾದ ಐದು ದಿನದ ಶಿಶುವೊಂದು (ಸಲೀಂ ಎಂಬುವರ ಮಗು) ಆಗಲೇ ಮೃತಪಟ್ಟಿತ್ತು. ಗಂಭೀರ ಸ್ಥಿತಿಯಲ್ಲಿದ್ದ ಮೂವರು ಶಿಶುಗಳು ಸೇರಿದಂತೆ ಶಿಶುಗಳನ್ನು ಆಂಬ್ಯುಲೆನ್ಸ್ ಮೂಲಕ ಖಾಸಗಿ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಯಿತು; ಗಂಭೀರ ಸ್ಥಿತಿಯಲ್ಲಿದ್ದ ಮೂವರ ಪೈಕಿ ಒಂದು ಶಿಶು ಮೃತಪಟ್ಟಿದೆ. ಉಳಿದ 25 ಶಿಶುಗಳು ಪ್ರಾಣಾಪಾಯದಿಂದ ಪಾರಾಗಿವೆ. ಅಗ್ನಿಶಾಮಕ ಸಿಬ್ಬಂದಿ ಕೈಗೊಂಡ ಮುನ್ನೆಚ್ಚರಿಕೆ ಕ್ರಮಗಳಿಂದಾಗಿ, ಹೆಚ್ಚಿನ ಅನಾಹುತ ತಪ್ಪಿದೆ. ಘಟನೆಯ ಬಗ್ಗೆ ತಿಳಿದ ತಕ್ಷಣ ಜಿಲ್ಲಾಧಿಕಾರಿ ರಾಜರ್ಷಿ ಶಾ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಅಖಿಲ್ ಮಹಾಜನ್ ಅವರು ರಿಮ್ಸ್ ಆಸ್ಪತ್ರೆಗೆ ಧಾವಿಸಿದ್ದರು. ಅವರು ರಕ್ಷಣಾ ಕಾರ್ಯಾಚರಣೆಯನ್ನು ಮೇಲ್ವಿಚಾರಣೆ ಮಾಡಿದರು ಮತ್ತು ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳಿದರು. ಎರಡು ಶಿಶುಗಳ ಸಾವನ್ನು ದೃಢಪಡಿಸಿದ್ದಾರೆ ಮತ್ತು ಅಪಘಾತಕ್ಕೆ ಕಾರಣವನ್ನು ಪತ್ತೆಹಚ್ಚಲು ತನಿಖೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಇನ್ಕ್ಯುಬೇಟರ್‌ಗಳಿಂದ ಶಿಶುಗಳನ್ನು ರಕ್ಷಿಸುವಲ್ಲಿ ಸ್ಥಳೀಯರು ತೋರಿದ ಸಮಯಪ್ರಜ್ಞೆಯಿಂದಾಗಿ ದೊಡ್ಡ ದುರಂತವೊಂದು ತಪ್ಪಿದೆ. ರಾತ್ರಿಯಿಡೀ ಅಧಿಕಾರಿಗಳು ಮತ್ತು ಇತರರು ರಿಮ್ಸ್ ಆಸ್ಪತ್ರೆಯಲ್ಲೇ ಉಳಿದು, ಪರಿಹಾರ ಕಾರ್ಯಗಳಲ್ಲಿ ಪಾಲ್ಗೊಂಡರು ಹಾಗೂ ರೋಗಿಗಳು ಆತಂಕಪಡದಂತೆ ಧೈರ್ಯ ತುಂಬಿದ್ದಾರೆ.

### HALನಿಂದ ಐಎಎಫ್‌ಗೆ ತೇಜಸ್, ಎಚ್‌ಟಿಟಿ–40 ಮತ್ತು ಧ್ರುವ್–ಎನ್‌ಜಿ ಹಸ್ತಾಂತರ

# ವಾಯುಯಾನ ಸ್ವಾವಲಂಬನೆಯಲ್ಲಿ ಮತ್ತೊಂದು ದೊಡ್ಡ ಹೆಜ್ಜೆ!

**ನವದೆಹಲಿ:** ತೇಜಸ್, ಎಚ್‌ಟಿಟಿ – 40 ಮತ್ತು ಧ್ರುವ್ – ಎನ್‌ಜಿ ವಿಮಾನಗಳ ಇತ್ತೀಚಿನ ಬ್ಯಾಚ್‌ನ ಐಎಎಫ್‌ಗೆ ಹಸ್ತಾಂತರಿಸಿದೆ. ಇದು ಭಾರತದ ವಾಯುಯಾನದ ಸ್ವಾವಲಂಬನೆ ಮತ್ತೊಂದು ಹಂತವನ್ನು ಸೂಚಿಸುತ್ತದೆ. ಕೇವಲ ವಿಮಾನಗಳ ಉತ್ಪಾದನೆ ಹೊರತಾಗಿ ಹಿಂದಿರುವ ವಿಶಾಲವಾದ ತಾಂತ್ರಿಕ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವತ್ತ ಹೆಚ್ಚು ಕೇಂದ್ರೀಕೃತವಾಗುತ್ತಿದೆ.

ಇದು ಏರೋಸ್ಪೇಸ್‌ಗಳ ಆಮದು ಕಡಿಮೆ ಮಾಡಿ, ಸಂಪೂರ್ಣ ಮೌಲ್ಯ ಸರಪಳಿಯನ್ನು ದೇಶೀಯ ಪರಿಣತಿ ಬೆಳೆಸಲು ನವದೆಹಲಿ ಪ್ರಯತ್ನಿಸುತ್ತಿರುವುದನ್ನು ಬಿಂಬಿಸಿದೆ. ಈ ವಿಮಾನಗಳನ್ನು ನವದೆಹಲಿಯು ಪ್ರಯತ್ನಿಸುತ್ತಿರುವ ಹಿನ್ನೆಲೆಯಲ್ಲಿ, ಸೆಪ್ಟೆಂಬರ್ 18 ರಂದು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಭಾರತೀಯ ವಾಯುಪಡೆ ಮತ್ತು ಪವನ್ ಹನ್ಸ್ ಲಿಮಿಟೆಡ್‌ಗೆ ಇವುಗಳನ್ನು ಹಸ್ತಾಂತರಿಸಿದೆ.

ರಕ್ಷಣಾ ಸಚಿವಾಲಯ ಹೊರಡಿಸಿದ ಹೇಳಿಕೆಯ ಪ್ರಕಾರ, ಬೆಂಗಳೂರಿನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನ್ ನಾಯ್ಡು ಅವರ ಸಮ್ಮುಖದಲ್ಲಿ, ಎಚ್‌ಎಎಲ್ ಭಾರತೀಯ ವಾಯುಪಡೆಗೆ ಎರಡು ಎಲ್‌ಸಿಎ ತೇಜಸ್ ಎಫ್‌ಒಸಿ ಅವಳಿ – ಆಸನದ ತರಬೇತಿ ವಿಮಾನಗಳು ಹಾಗೂ ಮೂರು ಎಚ್‌ಟಿಟಿ – 40 ಮೂಲ ತರಬೇತಿ ವಿಮಾನಗಳನ್ನು ಹಸ್ತಾಂತರಿಸಿತು. ಜೊತೆಗೆ ಪಿಎಚ್‌ಎಲ್(ಪವನ್ ಹನ್ಸ್) ಗೆ ನಾಲ್ಕು ಧ್ರುವ್ ನೆಕ್ಸ್ಟ್ ಜನರೇಷನ್ ಹೆಲಿಕಾಪ್ಟರ್‌ಗಳನ್ನು ಹಸ್ತಾಂತರಿಸಿತು.



ತೇಜಸ್

ಧ್ರುವ ಎನ್.ಜಿ.

ಎಚ್‌ಟಿಟಿ–40

ಈ ಹಸ್ತಾಂತರ ಪ್ರಕ್ರಿಯೆಯನ್ನು ದೇಶದ ಸ್ವದೇಶಿ ಏರೋಸ್ಪೇಸ್ ಸಾಮರ್ಥ್ಯ, ತಾಂತ್ರಿಕ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆಯತ್ತ ಸಾಗುವ ಹಾದಿಯಲ್ಲಿನ ಒಂದು ಮಹತ್ವದ ಮೈಲಿಗಲ್ಲಾಗಿದೆ. ತನ್ನ ಏರೋಸ್ಪೇಸ್ ಅಗತ್ಯಗಳನ್ನು ಪೂರೈಸುವ ನಿಟ್ಟಿನಲ್ಲಿ ಭಾರತವನ್ನು ಸಮರ್ಥ, ಸ್ವಾವಲಂಬಿ ಮತ್ತು ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕವಾಗಿಸುವುದೇ ನಮ್ಮ ಗುರಿಯಾಗಿದೆ ಎಂದು ರಕ್ಷಣಾ ಸಚಿವರು ತಿಳಿಸಿದ್ದಾರೆ.

ರಕ್ಷಣಾ ವಲಯದಲ್ಲಿ ಸ್ವಾವಲಂಬನೆಯನ್ನು ಉತ್ತೇಜಿಸಲು ರಕ್ಷಣಾ ಸಚಿವಾಲಯ ಕೈಗೊಂಡಿರುವ ಕ್ರಮಗಳನ್ನು ವಿವರಿಸುವಾಗ, ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳಿಗೆ ಮುನ್ನಡೆಯಲು ಅವಕಾಶ ಕಲ್ಪಿಸುವುದಲ್ಲದೇ, ಖಾಸಗಿ ಉದ್ಯಮಗಳಿಗೂ ಸಮಾನ ಅವಕಾಶದ ವಾತಾವರಣವನ್ನು ಖಾತ್ರಿಪಡಿಸುವ ಮೂಲಕ ಅವುಗಳನ್ನು ಉತ್ತೇಜಿಸಲು ಕ್ರಮ ಕೈಗೊಳ್ಳಲಾಗಿದೆ.

ಈ ಸಮಾರಂಭದ ಮಹತ್ವವು ಒಂಬತ್ತು ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ವಿತರಣೆ ಮೀರಿದೆ. ಮೂರು ವೇದಿಕೆಗಳು ಭಾರತದ ಏರೋಸ್ಪೇಸ್ ಅವಶ್ಯಕತೆಗಳ ವಿಭಿನ್ನ ವಿಭಾಗಗಳನ್ನು ಪೂರೈಸುತ್ತವೆ. ಮುಂಚೂಣಿಯ ಯುದ್ಧ ಕಾರ್ಯಾಚರಣೆಗಳಿಗೆ ಮೂಲ ಪೈಲಟ್ ತರಬೇತಿ ಮತ್ತು ಪರಿವರ್ತನೆ ತರಬೇತಿಯಿಂದ ಹಿಡಿದು ನಾಗರಿಕ ಹೆಲಿಕಾಪ್ಟರ್ ಅನ್ವಯಿಕೆಗಳವರೆಗೆ, ಒಟ್ಟಿಗೆ ದೇಶೀಯ ಏರೋಸ್ಪೇಸ್ ವಿನ್ಯಾಸ, ಅಭಿವೃದ್ಧಿ, ಉತ್ಪಾದನೆ, ಪ್ರಮಾಣೀಕರಣ ಬೆಂಬಲದ ವಿಸ್ತರಣೆ ಪ್ರದರ್ಶಿಸುತ್ತವೆ ಎಂದರು.

ಎರಡು ತೇಜಸ್ ಎಫ್‌ಒಸಿ ವಿಮಾನಗಳ ಹಸ್ತಾಂತರವು ಭಾರತೀಯ ವಾಯುಪಡೆಗೆ ವಿಶೇಷ ಮಹತ್ವದ್ದಾಗಿದೆ. ಕಾರಣ ಇದು ಎಫ್‌ಒಸಿ ಒಪ್ಪಂದದ ಅಡಿ ಬರುವ ಅಂತಿಮ ಎರಡು ವಿಮಾನಗಳಾಗಿವೆ.

## 12 ರಾಜ್ಯಸಭೆ, 28 ವಿಪ ಸ್ಥಾನಗಳಿಗೆ ಅ.16ಕ್ಕೆ ಚುನಾವಣೆ

**ನವದೆಹಲಿ:** ಉತ್ತರ ಪ್ರದೇಶ, ಉತ್ತರಾಖಂಡ ಮತ್ತು ಪಶ್ಚಿಮ ಬಂಗಾಳದ ಒಟ್ಟು 12 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಮತ್ತು ಉಪಚುನಾವಣೆಯನ್ನು ಅಕ್ಟೋಬರ್ 16 ರಂದು ನಡೆಸಲಾಗುವುದು ಎಂದು ಕೇಂದ್ರ ಚುನಾವಣಾ ಆಯೋಗ ಮಂಗಳವಾರ ಪ್ರಕಟಿಸಿದೆ. ಉತ್ತರ ಪ್ರದೇಶದ 10 ಮತ್ತು ಉತ್ತರಾಖಂಡದ 1 ರಾಜ್ಯಸಭಾ ಸ್ಥಾನಗಳ ಹಾಲಿ ಸದಸ್ಯರ ಅಧಿಕಾರಾವಧಿಯು ನವೆಂಬರ್‌ನಲ್ಲಿ ಮುಕ್ತಾಯಗೊಳ್ಳಲಿರುವುದರಿಂದ ಈ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ಸಂಸದರಾಗಿ ಅಧಿಕಾರಾವಧಿ ಮುಕ್ತಾಯಗೊಳ್ಳಲಿರುವವರಲ್ಲಿ ಕೇಂದ್ರ ಸಚಿವರಾದ ಹರ್ದೀಪ್ ಸಿಂಗ್ ಪುರಿ ಮತ್ತು ಬಿ.ಎಲ್. ವರ್ಮಾ, ಉತ್ತರ ಪ್ರದೇಶದ ಮಾಜಿ ಉಪಮುಖ್ಯಮಂತ್ರಿ ದಿನೇಶ್ ಶರ್ಮಾ ಮತ್ತು ಸಮಾಜವಾದಿ ಪಕ್ಷದ ಹಿರಿಯ ನಾಯಕ ರಾಮ್ ಗೋಪಾಲ್ ಯಾದವ್ ಸೇರಿದ್ದಾರೆ. ಉತ್ತರಾಖಂಡದಲ್ಲಿ, ನರೇಶ್ ಬನ್ಸಾಲ್ ಅವರ ಅಧಿಕಾರಾವಧಿಯು ನವೆಂಬರ್ 25 ರಂದು ಮುಕ್ತಾಯಗೊಳ್ಳಲಿದೆ. ಪಶ್ಚಿಮ ಬಂಗಾಳದಲ್ಲಿ, ನಟಿ ಹಾಗೂ ರಾಜಕಾರಣಿ ರುಕ್ಮಿಣಿ ಮಲ್ಲಿಕ್ ಅವರು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ ಅಲ್ಲಿ ಉಪಚುನಾವಣೆ ನಡೆಯಲಿದೆ. ಅವರ ಅಧಿಕಾರಾವಧಿಯು ಎಪ್ರಿಲ್ 2, 2032 ರಂದು ಮುಕ್ತಾಯಗೊಳ್ಳಬೇಕಿತ್ತು.




ಸೆಪ್ಟೆಂಬರ್ 29 ರಂದು ಅಧಿಸೂಚನೆ ಹೊರಡಿಸಲಾಗುವುದು. ನಾಮಪತ್ರ ಸಲ್ಲಿಸಲು ಅಕ್ಟೋಬರ್ 6 ಕೊನೆಯ ದಿನ. ಮರುದಿನ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಅಕ್ಟೋಬರ್ 9 ಕೊನೆಯ ದಿನಾಂಕ. ಅಕ್ಟೋಬರ್ 16 ರಂದು ಬೆಳಗ್ಗೆ 9 ರಿಂದ ಸಂಜೆ 4 ರವರೆಗೆ ಮತದಾನ ನಡೆಯಲಿದ್ದು, ಅದೇ ದಿನ ಮತ ಎಣಿಕೆ ನಡೆಯಲಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಮತಪತ್ರದಲ್ಲಿ ಆದ್ಯತೆಗಳನ್ನು ಗುರುತಿಸಲು ಚುನಾವಣಾಧಿಕಾರಿಗಳು ಒದಗಿಸುವ ನಿರ್ದಿಷ್ಟ ಮಾನದಂಡಗಳನ್ನು ಹೊಂದಿರುವ ನೇರಳೆ ಬಣ್ಣದ ಸ್ಕೆಚ್ ಪೆನ್‌ಗಳನ್ನು ಮಾತ್ರ ಬಳಸಬೇಕು ಎಂದು ಆಯೋಗವು ನಿರ್ದೇಶನ ನೀಡಿದೆ. ಮೇಲೆ ತಿಳಿಸಿದ ಚುನಾವಣೆಗಳಲ್ಲಿ ಆದ್ಯತೆಗಳನ್ನು ಗುರುತಿಸಲು ಬೇರೆ ಯಾವುದೇ ಪೆನ್ ಅನ್ನು ಬಳಸಬಾರದು. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ಖಚಿತಪಡಿಸಿಕೊಳ್ಳಲು ವೀಕ್ಷಕರನ್ನು ನೇಮಿಸುವ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವುದಾಗಿ ಚುನಾವಣಾ ಆಯೋಗ ತಿಳಿಸಿದೆ.

## ಕಾವೇರಿ ನದಿ ನೀರು ಹಂಚಿಕೆ: ಅರ್ಜಿ ಪರಿಗಣಿಸಲು ಸುಪ್ರೀಂ ನಕಾರ

**ನವದೆಹಲಿ:** ಕಾವೇರಿ ನದಿ ನೀರು ಹಂಚಿಕೆಗೆ ಸಂಬಂಧಿಸಿದ ಹೊಸ ಅರ್ಜಿಯನ್ನು ಪರಿಗಣಿಸಲು ಸುಪ್ರೀಂ ಕೋರ್ಟ್ ಮಂಗಳವಾರ ನಿರಾಕರಿಸಿದೆ. ಇದು ತಮಿಳುನಾಡು ಮತ್ತು ಕರ್ನಾಟಕ ರಾಜ್ಯಗಳ ನಡುವಿನ ವಿವಾದವಾಗಿದ್ದು, ಆ ರಾಜ್ಯಗಳು ಈಗಾಗಲೇ ಈ ವಿಷಯದ ಕುರಿತು ಕಾನೂನು ಹೋರಾಟ ನಡೆಸುತ್ತಿವೆ ಎಂದು ನ್ಯಾಯಾಲಯ ಹೇಳಿದೆ.



ಹೀಗೆ ಆದರೆ ಅಂತ್ಯವೇ ಇರುವುದಿಲ್ಲ:

'ಈಗಾಗಲೇ ವಿವಾದದಲ್ಲಿ ತೊಡಗಿರುವ ಮತ್ತು ಕಾನೂನು ಹೋರಾಟ ನಡೆಸುತ್ತಿರುವ ಎರಡು ರಾಜ್ಯಗಳ ವಿಷಯದಲ್ಲಿ, ವಿವಿಧ ಸಂಘ–ಸಂಸ್ಥೆಗಳ ಅರ್ಜಿಗಳನ್ನು ನಾವು ಪರಿಗಣಿಸಲು ಪ್ರಾರಂಭಿಸಿದರೆ, ಅದಕ್ಕೆ ಯಾವುದೇ ಅಂತ್ಯವಿರುವುದಿಲ್ಲ' ಎಂದು ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರಿದ್ದ ಪೀಠವು ಅಭಿಪ್ರಾಯಪಟ್ಟಿದೆ. ತಮಿಳುನಾಡಿನ ಪಾಲಿನಿಂದ 70 ಟಿಎಂಸಿ ಕಾವೇರಿ ನದಿ ನೀರನ್ನು ಕರ್ನಾಟಕಕ್ಕೆ ಮರುಹಂಚಿಕೆ ಮಾಡುವಂತೆ ಕೋರಿದ್ದ ಅರ್ಜಿಯನ್ನು ಪರಿಗಣಿಸಲು ನ್ಯಾಯಪೀಠ ನಿರಾಕರಿಸಿತು. ಆಗಸ್ಟ್ 31ರ ವೇಳೆಗೆ ತಮಿಳುನಾಡಿಗೆ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡಿರುವುದಾಗಿ ಹಾಗೂ 9,000 ಕ್ಯೂಸೆಕ್ಸ್ ನೀರು ಹರಿಯುವುದನ್ನು ಖಚಿತಪಡಿಸಿಕೊಳ್ಳಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ನಿರ್ದೇಶನವನ್ನು ಪಾಲಿಸುತ್ತಿರುವುದಾಗಿ ಕರ್ನಾಟಕ ಸರ್ಕಾರ ಸರ್ವೋಚ್ಚ ನ್ಯಾಯಾಲಯಕ್ಕೆ ತಿಳಿಸಿತ್ತು. ತಮಿಳುನಾಡಿಗೆ 15 ದಿನಗಳ ಕಾಲ 9,000 ಕ್ಯೂಸೆಕ್ ನೀರು ಹರಿಯುವುದನ್ನು ಖಚಿತಪಡಿಸುವಂತೆ ಕರ್ನಾಟಕಕ್ಕೆ ಸೂಚಿಸಿದ್ದ ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸನ್ನು ಆಗಸ್ಟ್ 25 ರಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಎತ್ತಿಹಿಡಿಯಿತು. ಬಾಕಿ ಇರುವ ನೀರಿನ ಪ್ರಮಾಣದ ಬಗ್ಗೆ ತಾವು ಪ್ರಾಧಿಕಾರಕ್ಕೆ ಮಾಹಿತಿ ನೀಡಿದ್ದರೂ, ಈ ಕುರಿತು ಯಾವುದೇ ನಿರ್ದೇಶನ ಹೊರಡಿಸಿಲ್ಲ ಎಂದು ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿತ್ತು.

## ರಾಮನ ಹೆಸರಿಗೆ ಮಸಿ ಬಳಿಯಬೇಡಿ

**ನವದೆಹಲಿ:** ರಾಮ ಮಂದಿರ ದೇಣಿಗೆ ಕಳ್ಳತನ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ದೋಷಾರೋಪ ಪಟ್ಟಿ (ಚಾರ್ಜ್‌ಶೀಟ್)

**ಕಾಂಗ್ರೆಸ್ ವಾಗ್ದಾಳಿ**

ಸಲ್ಲಿಸುವಲ್ಲಿ ಆಗಿರುವ ವಿಳಂಬವನ್ನು ಕಾಂಗ್ರೆಸ್ ಮಂಗಳವಾರ ಪ್ರಶ್ನಿಸಿದೆ. ಅಲ್ಲದೆ, 1971ರ ಬಾಲಿವುಡ್ ಹಾಡು ರಾಮ್ ಕಾ ನಾಮ್ ಬದ್ನಾಮ್ ನಾ ಕರೋ (ರಾಮನ ಹೆಸರಿಗೆ ಕಳಂಕ ತರಬೇಡಿ) ಸಾಲುಗಳನ್ನು ಉಲ್ಲೇಖಿಸಿ ಬಿಜೆಪಿ ವಿರುದ್ಧ ವ್ಯಂಗ್ಯವಾಡಿದೆ.

ದೊಡ್ಡ ತಿಮಿಂಗಿಲಗಳನ್ನು ರಕ್ಷಿಸುವ ಪ್ರಯತ್ನ ನಡೆಯುತ್ತಿದೆ ಎಂದು ವಿರೋಧ ಪಕ್ಷ ಆರೋಪಿಸಿದೆ.

ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ದೇವಾಲಯದಲ್ಲಿ ದೇಣಿಗೆ ದುರುಪಯೋಗವಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಹೊಸ ವಿಷಯಗಳು ಬೆಳಕಿಗೆ ಬಂದಿವೆ ಎಂದು ತಿಳಿಸುವ ಮಾಧ್ಯಮ ವರದಿಯೊಂದರ ಸ್ಕ್ರೀನ್‌ಶಾಟ್ ಅನ್ನು ಕಾಂಗ್ರೆಸ್ ಸಂವಹನ ವಿಭಾಗದ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹಂಚಿಕೊಂಡಿದ್ದಾರೆ. ದೇವಾಲಯದ ಆವರಣದ ಸಿಸಿಟಿವಿ ದೃಶ್ಯಾವಳಿಗಳ ವಿಧಿವಿಜ್ಞಾನ ಪರೀಕ್ಷೆಯಲ್ಲಿ ದೇಣಿಗೆ ಕಳ್ಳತನದ 105 ಘಟನೆಗಳು ಪತ್ತೆಯಾಗಿವೆ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಇದರಲ್ಲಿ ಉಲ್ಲೇಖಿಸಿದ್ದಾರೆ.

ಪ್ರಾಥಮಿಕ ತನಿಖೆಯು ಈ ಹಿಂದೆ 70 ಘಟನೆಗಳ ಬಗ್ಗೆ ವರದಿ ಮಾಡಿತ್ತು. ಹಿಂದಿಯಲ್ಲಿ ಮಾಡಿದ ತಮ್ಮ ಪೋಸ್ಟ್‌ನಲ್ಲಿ ರಮೇಶ್, ದೇಣಿಗೆ ಕಳ್ಳತನ, ನಂಬಿಕೆಗೆ ದ್ರೋಹ. 1971ರಲ್ಲಿ ತೆರೆಕಂಡ ದೇವ್ ಆನಂದ್ ಅಭಿನಯದ ಹರೇ ರಾಮ ಹರೇ ಕೃಷ್ಣ ಚಿತ್ರದ ದೇಖೋ ಓ ದಿವಾನೋ ತುಮ್ ಯೆ ಕಾಮ್ ನ ಕರೋ, ರಾಮ್ ಕ ನಾಮ್ ಬದ್ನಾಮ್ ನ ಕರೋ ಎಂಬ ಹಾಡಿನ ಸಾಲುಗಳನ್ನು ಆಧರಿಸಿ, 'ದೇಖೋ ಬಿಜೆಪಿ ವಾಲೋನ್, ತುಮ್ ಯೇ ಕಾಮ್ ನ ಕರೋ, ರಾಮ್ ಕ ನಾಮ್ ಬದ್ನಾಮ್ ನ ಕರೋ, ಬದ್ನಾಮ್ ನ ಕರೋ' ಎಂದು ಹೇಳಿದ್ದಾರೆ.

ಅಯೋಧ್ಯೆಯ ರಾಮ ಮಂದಿರದಲ್ಲಿನ ದೇಣಿಗೆ ಕಳ್ಳತನ ಪ್ರಕರಣದ ತನಿಖೆ ಆರಂಭವಾಗಿ ಮೂರು ತಿಂಗಳು ಪೂರ್ಣಗೊಳ್ಳಲು ಇನ್ನು ಮೂರು ದಿನಗಳು ಮಾತ್ರ ಬಾಕಿ ಇವೆ; ಆದರೂ, ಆರೋಪಿಗಳ ವಿರುದ್ಧ ಇದುವರೆಗೂ ಯಾವುದೇ ದೋಷಾರೋಪ ಪಟ್ಟಿ ಸಲ್ಲಿಕೆಯಾಗಿಲ್ಲ ಎಂಬುದು ನಾಚಿಕೆಗೇಡಿನ ಸಂಗತಿ ಎಂದು ರಮೇಶ್ ಹೇಳಿದರು.

### ಬ್ಲಡ್ ಬ್ರದರ್ ಪಾಕ್‘ಗೆ ಹೌತಿ ಬಂಡುಕೋರರ ಧಮ್ಕಿ!

# ಸೌದಿ ಅರೇಬಿಯಾ ಮ್ಯಾಟ್ರಲ್ಲಿ ತಲೆ ಹಾಕಿದ್ರೋ ಹುಷಾರ್

**ನವದೆಹಲಿ:** ಸೌದಿ ಅರೇಬಿಯಾ ಮೇಲೆ ಯೆಮೆನ್‌ನ ಹೌತಿ ಬಂಡುಕೋರರು ನಡೆಸುತ್ತಿರುವ ದಾಳಿ ಮುಂದುವರೆದಿರುವಂತೆಯೇ ಇತ್ತ ಸೌದಿ ಮಿತ್ರರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಟರ್ಕಿಗೆ ಬಂಡುಕೋರರು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಹೌದು.. ಸೌದಿ ಅರೇಬಿಯಾ ಪರವಾಗಿ ಯೆಮೆನ್‌ನ ಹೌತಿ ಬಂಡುಕೋರರ ವಿರುದ್ಧದ ಯಾವುದೇ ಸೇನಾ ಕಾರ್ಯಾಚರಣೆಯಲ್ಲಿ ಪಾಕಿಸ್ತಾನ ಅಥವಾ ಟರ್ಕಿ ಭಾಗಿಯಾದರೆ, 'ನಿರ್ಣಾಯಕ ಹಾಗೂ ನೋವಿನ ಪ್ರತಿಕ್ರಿಯೆ' ನೀಡುವುದಾಗಿ ಹೌತಿಗಳು ಎಚ್ಚರಿಕೆ ನೀಡಿದ್ದಾರೆ.

ಸೌದಿ ಅರೇಬಿಯಾ ವಿರುದ್ಧದ ಹೌತಿಗಳ ದಾಳಿಗೆ ಪ್ರತಿಯಾಗಿ ಎರಡೂ ದೇಶಗಳು ಕ್ರಮ ಕೈಗೊಳ್ಳುವ ಸಾಧ್ಯತೆಗಳ ವರದಿಗಳ ನಡುವೆ ಈ ಎಚ್ಚರಿಕೆ ಹೊರಬಿದ್ದಿದೆ ಎಂದು ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ.

ಹೌತಿ ರಾಜಕೀಯ ಮುಖಂಡ ಹಾಗೂ ಧಮಾರ್ ಪ್ರಾಂತ್ಯದ ಗವರ್ನರ್ ಮೊಹಮ್ಮದ್ ಅಲ್–ಬುಖೈತಿ, ಇರಾಕ್‌ನ ಟಿವಿ ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಾ, ಪಾಕಿಸ್ತಾನ ಮತ್ತು ಟರ್ಕಿ ಸಂಘರ್ಷದಲ್ಲಿ ಮಧ್ಯಪ್ರವೇಶಿಸಿದರೆ "ಕಬ್ಬಿಣದ ಮುಷ್ಟಿಯಿಂದ ಹೊಡೆಯುತ್ತೇವೆ" ಮತ್ತು ಅವರಿಗೆ ಮರೆಯಲಾಗದ "ಪಾಠ ಕಲಿಸುತ್ತೇವೆ" ಎಂದು ಹೇಳಿದ್ದಾರೆ. ಎರಡೂ ದೇಶಗಳ ಜನರಲ್ಲಿ ಯೆಮೆನ್ ಪರ ಸಹಾನುಭೂತಿ ಇದೆ ಎಂದು ಒಪ್ಪಿಕೊಂಡಿರುವ ಅವರು, ತಮ್ಮ ಎಚ್ಚರಿಕೆಯನ್ನು ಅಲ್ಲಿನ



ಸರ್ಕಾರಗಳ ವಿರುದ್ಧವೇ ನೀಡಿರುವುದಾಗಿ ಹೇಳಿದ್ದಾರೆ.

**ಸೌದಿ ವಿರುದ್ಧ ಹೌತಿಗಳ ದಾಳಿ; ಹೆಚ್ಚಿದ ಆತಂಕ**

ಇನ್ನು ಸೌದಿ ಅರೇಬಿಯಾ ವಿರುದ್ಧ ಹೌತಿಗಳ ದಾಳಿಗಳು ತೀವ್ರಗೊಂಡಿರುವ ಸಂದರ್ಭದಲ್ಲೇ ಈ ಎಚ್ಚರಿಕೆ ಬಂದಿದ್ದು, ಆಗಸ್ಟ್ 7ರಂದು ಪಾಕಿಸ್ತಾನ, ಸೌದಿ ಅರೇಬಿಯಾ ಮತ್ತು ಟರ್ಕಿ ನಡುವೆ ಸಹಿ ಹಾಕಲಾದ ಮೆಕ್ಕಾ ಜಂಟಿ ರಕ್ಷಣಾ ಒಪ್ಪಂದವೂ ಇದೀಗ ಗಮನ ಸೆಳೆದಿದೆ.

ಮೆಕ್ಕಾ ಪ್ಯಾಕ್ಟ್ ಒಪ್ಪಂದದ ಪ್ರಕಾರ, ಒಬ್ಬ ಸದಸ್ಯ ರಾಷ್ಟ್ರದ ಮೇಲೆ ನಡೆಯುವ ದಾಳಿಯನ್ನು ಎಲ್ಲಾ ಸದಸ್ಯರ ಮೇಲಿನ ದಾಳಿ ಎಂದು ಪರಿಗಣಿಸುವ ವ್ಯವಸ್ಥೆ ಇದೆ. ಹೀಗಾಗಿ ಪಾಕಿಸ್ತಾನವು ತನ್ನ ಗಡಿಗಳಿಂದ ದೂರವಿರುವ ಯೆಮೆನ್ ಸಂಘರ್ಷದಲ್ಲಿ ನೇರವಾಗಿ ತೊಡಗಿಸಿಕೊಳ್ಳುವ ಸಾಧ್ಯತೆ ಕುರಿತು ಚರ್ಚೆ ನಡೆಯುತ್ತಿದೆ.

**ಸೌದಿಗೆ ನೆರವು ನೀಡಲು ಟರ್ಕಿ–ಪಾಕ್ ಸಿದ್ಧ:** ಟರ್ಕಿಯ ವಿದೇಶಾಂಗ ಸಚಿವ ಹಕಾನ್ ಫಿದಾನ್, ಈ ಮೈತ್ರಿಯಡಿ ರಿಯಾದ್‌ಗೆ ತಾಂತ್ರಿಕ ಮತ್ತು ಅಗತ್ಯವಿದ್ದರೆ ಸೇನಾ ನೆರವು ನೀಡಲು ಸಿದ್ಧತೆ ಇರುವುದಾಗಿ ಸೂಚಿಸಿದ್ದಾರೆ. ಅಂತೆಯೇ ಪಾಕಿಸ್ತಾನ ಇದಕ್ಕಿಂತಲೂ ಕಠಿಣ ನಿಲುವು ವ್ಯಕ್ತಪಡಿಸಿದೆ. ಸೌದಿ ಅರೇಬಿಯಾ ಹಾಗೂ ಮೆಕ್ಕಾ–ಮದೀನಾ ಪವಿತ್ರ ಸ್ಥಳಗಳ ರಕ್ಷಣೆ ಯಾವುದೇ ಅಧಿಕೃತ ಒಪ್ಪಂದಕ್ಕಿಂತಲೂ ಮಿಗಿಲಾದ "ಶಾಶ್ವತ" ಧಾರ್ಮಿಕ ಕರ್ತವ್ಯ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಹೇಳಿದ್ದಾರೆ.

ಪಾಕಿಸ್ತಾನದ ಇಂಟರ್–ಸರ್ವಿಸಸ್ ಪಬ್ಲಿಕ್ ರಿಲೇಷನ್ಸ್ ಮಹಾನಿರ್ದೇಶಕ ಲೆಫ್ಟಿನೆಂಟ್ ಜನರಲ್ ಅಹ್ಮದ್ ಶರೀಫ್ ಚೌಧರಿ ಕೂಡ ಸೌದಿ ಅರೇಬಿಯಾ ಮತ್ತು ಪವಿತ್ರ ಸ್ಥಳಗಳ ರಕ್ಷಣೆಗೆ "ಯಾವುದೇ ಹಂತಕ್ಕೂ ಹೋಗುತ್ತೇವೆ" ಎಂಬ ಕಠಿಣ ನಿಲುವು ವ್ಯಕ್ತಪಡಿಸಿದ್ದಾರೆ.

ಪಾಕಿಸ್ತಾನವು ಸೌದಿ ಅರೇಬಿಯಾ ಮೇಲೆ ಹೌತಿಗಳು ನಡೆಸಿದ ದಾಳಿಗಳನ್ನು ಹಲವು ಬಾರಿ ಖಂಡಿಸಿದ್ದು, ವಿಶ್ವಸಂಸ್ಥೆಯಲ್ಲೂ ತನ್ನ ಕಳವಳ ವ್ಯಕ್ತಪಡಿಸಿದೆ. ಆದರೆ ಇದೀಗ ರಿಯಾದ್ ಪರ ಅದರ ಕಠಿಣ ಹೇಳಿಕೆಗಳು ಹಾಗೂ ಹೊಸ ರಕ್ಷಣಾ ಒಪ್ಪಂದವು ಪಾಕಿಸ್ತಾನವನ್ನು ಯೆಮೆನ್ ಸಂಘರ್ಷದಲ್ಲಿ ಇನ್ನಷ್ಟು ಆಳವಾಗಿ ತೊಡಗಿಸಿಕೊಳ್ಳುವ ಸಾಧ್ಯತೆಯನ್ನು ಹೆಚ್ಚಿಸಿದೆ.

# ಮಿನಿ ನ್ಯೂಸ್

## ಇಟಲಿಯ ಶಾಲೆಗಳಲ್ಲಿ ಬುರ್ಖಾ, ನಿಕಾಬ್ ನಿಷೇಧ

**ರೋಮ್:** ತರಗತಿಗಳಲ್ಲಿ ವಿದೇಶಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಮಿತಿಗೊಳಿಸುವ ಮತ್ತು ಶಾಲೆಗಳಲ್ಲಿ ಬುರ್ಖಾ ಮತ್ತು ನಿಖಾಬ್ ಧರಿಸುವುದನ್ನು ನಿಷೇಧಿಸುವ ಕ್ರಮವನ್ನು ಶೀಘ್ರದಲ್ಲೇ ತನ್ನ ಸರ್ಕಾರ ಪರಿಚಯಿಸುವುದಾಗಿ ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಘೋಷಿಸಿದ್ದಾರೆ. ಮೆಲೋನಿ ತನ್ನ ರಾಷ್ಟ್ರೀಯವಾದಿ ಸಂಪ್ರದಾಯವಾದಿ ಬ್ರದರ್ಸ್ ಆಫ್ ಇಟಲಿ ಪಕ್ಷದ ಯುವ ಘಟಕಕ್ಕೆ ಈ ಕ್ರಮವು "ಶಾಲಾ ವ್ಯವಸ್ಥೆಯಲ್ಲಿ ಸಂಯೋಜಿಸಲು ಗಂಭೀರ ತೊಂದರೆಗಳನ್ನು ಹೊಂದಿರುವ" ವಿದೇಶಿ ವಿದ್ಯಾರ್ಥಿಗಳ ಪೋಷಕರಿಗೆ ಇಟಾಲಿಯನ್ ಭಾಷೆಯ ಪಾಠಗಳನ್ನು ಕಡ್ಡಾಯಗೊಳಿಸುತ್ತದೆ ಎಂದು ಹೇಳಿದರು.



ತರಗತಿಗಳಲ್ಲಿ ವಿದೇಶಿ ವಿದ್ಯಾರ್ಥಿಗಳ ಸಂಖ್ಯೆಗೆ ಮಿತಿ: ಇಟಾಲಿ ಪ್ರಧಾನಿ ಮೆಲೋನಿ ಸುಳಿವು

"ನಮಗಾಗಿ, ಇಟಲಿಗೆ ಬರುವ ಮತ್ತು ಇಲ್ಲಿ ತಮ್ಮ ಭವಿಷ್ಯವನ್ನು ನಿರ್ಮಿಸಲು ಬಯಸುವ ಯಾರಾದರೂ ನಮ್ಮ ಭಾಷೆಯನ್ನು ಕಲಿಯಬೇಕು, ನಮ್ಮ ಸಂಸ್ಕೃತಿಯನ್ನು ಅರ್ಥಮಾಡಿಕೊಳ್ಳಬೇಕು ಮತ್ತು ನಮ್ಮ ನಿಯಮಗಳನ್ನು ಗೌರವಿಸಬೇಕು" ಎಂದು ಅವರು ರೋಮ್‌ನಲ್ಲಿ ನಡೆದ ಜಿಯೊವೆಂಟೆ ನಾಜಿಯೋನೇಲ್ ರಾಷ್ಟ್ರೀಯ ಉತ್ಸವದಲ್ಲಿ ಹೇಳಿದ್ದಾರೆ. ಪ್ರಧಾನಿಯ ಈ ಹೇಳಿಕೆಗೆ ಸಭಿಕರು ನಿಂತು ಚಪ್ಪಾಳೆ ತಟ್ಟಿದರು. "ವಲಸೆ ಬರುವವರನ್ನು ಸ್ವಾಗತಿಸಲು ಇದು ಏಕೈಕ ಗಂಭೀರ ಮಾರ್ಗವಾಗಿದೆ."

ಮೆಲೋನಿ ನಿರ್ದಿಷ್ಟವಾಗಿ ಬುರ್ಖಾದ ಮೇಲಿನ ನಿಷೇಧವನ್ನು ಉಲ್ಲೇಖಿಸಿದ್ದಾರೆ. ಕೆಲವು ಮುಸ್ಲಿಂ ಮಹಿಳೆಯರು ಧರಿಸುವ ಎಲ್ಲಾ ಬುರ್ಖಾ ಮಾದರಿಯ ಉಡುಗೆ ಮತ್ತು ನಿಖಾಬ್, ಅತ್ಯಂತ ಸಂಪ್ರದಾಯವಾದಿ ಮುಸ್ಲಿಂ ಮಹಿಳೆಯರು ಧರಿಸಿರುವ ಮುಸುಕು, ಇದರಲ್ಲಿ, ಹೆಚ್ಚೆಂದರೆ, ಕಣ್ಣುಗಳು ಮಾತ್ರ ಕಾಣುತ್ತವೆ. ಆದರೆ ಕೆಲವು ಮುಸ್ಲಿಂ ಮಹಿಳೆಯರು ಧರಿಸಿರುವ ಸ್ಕಾರ್ಫ್, ಹಿಜಾಬ್ ನ್ನು ಮೆಲೋನಿ ಉಲ್ಲೇಖಿಸಲಿಲ್ಲ.

## ಶಿಕ್ಷಕರ ಮೇಲೆ ವೈಎಸ್‌ಆರ್‌ಪಿಸಿ ಗುಂಪಿನಿಂದ ಹಲ್ಲೆ

**ಅಮರಾವತಿ (ಆಂಧ್ರ ಪ್ರದೇಶ):** ವಿಜಯವಾಡದಲ್ಲಿರುವ ಆಂಧ್ರಪ್ರದೇಶ ಕ್ರೀಡಾ ಪ್ರಾಧಿಕಾರದ ಕಚೇರಿಯ ಬಳಿ, ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಜಿಲ್ಲಾ ಆಯ್ಕೆ ಸಮಿತಿಯ ಕ್ರೀಡಾ ಕೋಟಾದಡಿ ಹೊಸದಾಗಿ ನೇಮಕಗೊಂಡ ಶಿಕ್ಷಕರ ಮೇಲೆ ದುಂಡಾವರ್ತನೆ ನಡೆಸಿರುವ ಬಗ್ಗೆ ವರದಿಯಾಗಿದೆ. ಇಲ್ಲಿನ ವಿಜಯವಾಡದ ಸ್ಯಾಪ್ ಕಚೇರಿಯ ಹೊರಗೆ ಮೆಗಾ ಡಿಎಸ್‌ಸಿ 2025 ಕ್ರೀಡಾ ಕೋಟಾ ನೇಮಕಾತಿಗಳಲ್ಲಿನ ಅಕ್ರಮಗಳ ಆರೋಪದ ಕುರಿತು ಘೋಷಣೆಗಳನ್ನು ಕೂಗುತ್ತಾ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ಪ್ರಾರಂಭಿಸಿದರು. ಇದಕ್ಕೆ ಪ್ರತಿಯಾಗಿ, ಆಯ್ಕೆಯಾದ ಶಿಕ್ಷಕರು ನ್ಯಾಯಕ್ಕಾಗಿ ಮತ್ತು ಆಧಾರರಹಿತ ಆರೋಪಗಳನ್ನು ನಿಲ್ಲಿಸುವಂತೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು.



ವಿಜಯವಾಡ ಕ್ರೀಡಾ ಕೋಟಾ ನೇಮಕಾತಿ

ಪರಸ್ಪರ ಘೋಷಣೆಗಳು ಮತ್ತು ತೀವ್ರ ಮಾತಿನ ಚಕಮಕಿಯಿಂದಾಗಿ ಆ ಪ್ರದೇಶದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ವೈಎಸ್‌ಆರ್‌ಸಿಪಿ ತಮ್ಮೊಂದಿಗೆ ಕುಖ್ಯಾತ ರೌಡಿ ಶೀಟರ್‌ಗಳು ಮತ್ತು ಶಂಕಿತ ವ್ಯಕ್ತಿಗಳನ್ನು ಕರೆತಂದಿದ್ದರು ಎಂಬ ಆರೋಪ ಕೇಳಿ ಬಂದಿದೆ. ಈ ವೇಳೆ ಶಿಕ್ಷಕರ ರಕ್ಷಣೆಗೆ ನಿಂತಿದ್ದ ಸ್ವಯಂಸೇವಕರನ್ನು ಕೋಲುಗಳಿಂದ ಹೊಡೆದ ಪರಿಣಾಮ ಅವರಿಗೆ ತಲೆಗೆ ಗಾಯಗಳಾಗಿವೆ. ಅಷ್ಟೇ ಅಲ್ಲದೇ, ಅಶ್ಲೀಲ ಹಾಗೂ ಅಸಭ್ಯ ಸನ್ನೆಗಳಂತಹ ಆಕ್ರಮಣಕಾರಿ ವರ್ತನೆ ತೋರಿದ್ದಾರೆ. 2029ರಲ್ಲಿ ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕುತ್ತಾ ಅವರು ಉದ್ಧಟತನದಿಂದ ವರ್ತಿಸಿದ್ದಾರೆ. ಶಿಕ್ಷಕರತ್ತ ಕೋಲುಗಳು, ಚಪ್ಪಲಿಗಳು ಮತ್ತು ನೀರಿನ ಬಾಟಲಿಗಳನ್ನು ಎಸೆಯುವ ಮೂಲಕ ದುರ್ನಡತೆ ಮೂಲಕ ವರ್ತಿಸಿದ್ದಾರೆ. ಇದರಿಂದ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ಸೃಷ್ಟಿಯಾಗಿ ಅತ್ಯಂತ ಜನನಿಬಿಡವಾಗಿದ್ದ ಎಂಜಿ ರಸ್ತೆಯಲ್ಲಿ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ. ಪ್ರಯಾಣಿಕರು ಮತ್ತು ವಾಹನ ಸವಾರರು ಮೂರು ಗಂಟೆಗಳ ಕಾಲ ಸಂಕಷ್ಟಕ್ಕೆ ಸಿಲುಕುವಂತಾಯಿತು.

## ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣ: ಡೀನ್ ಅಮಾನತು!

**ಮುಂಬೈ:** ವಿದ್ಯಾರ್ಥಿಯೊಬ್ಬರ ಆತ್ಮಹತ್ಯೆ ಮತ್ತು ಅದಕ್ಕೆ ಸಂಬಂಧಿಸಿದ ಪ್ರತಿಭಟನೆಗಳ ನಂತರ, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಐಐಟಿ) ಪ್ರೊ. ಸೂರ್ಯನಾರಾಯಣ ಡೂಲ್ಲಾ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಡೀನ್ ಹುದ್ದೆಯಿಂದ ತೆಗೆದುಹಾಕಲಾಗಿದೆ ಎಂದು ತಿಳಿಸಿದೆ.

ಸಂಸ್ಥೆಯ ನಿರ್ದೇಶಕ ಪ್ರೊ. ಶಿರೀಷ್ ಕೇದಾರೆ ಅವರು ಅಧಿಕೃತ ಇಮೇಲ್ ಮೂಲಕ, ಪ್ರಸ್ತುತ ಡೀನ್ (ಆಡಳಿತಾತ್ಮಕ ವ್ಯವಹಾರಗಳು) ಆಗಿ ಕಾರ್ಯನಿರ್ವಹಿಸುತ್ತಿರುವ ಪ್ರೊ. ಡೂಲ್ಲಾ ಅವರನ್ನು ಆ ಹುದ್ದೆಯಿಂದ ತೆಗೆದುಹಾಕಲಾಗಿದೆ. ತನಿಖೆಯ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಈ ಹಿಂದೆ ಪ್ರೊ. ಡೂಲ್ಲಾ ಅವರು ಡೀನ್ (ವಿದ್ಯಾರ್ಥಿ ವ್ಯವಹಾರಗಳು) ಆಗಿ ಕಾರ್ಯನಿರ್ವಹಿಸಿದ್ದರು. ಅಧಿಕಾರಿಗಳ ಪ್ರಕಾರ, ಎನರ್ಜಿ ಸೈನ್ಸ್ ಆಂಡ್ ಇಂಜಿನಿಯರಿಂಗ್ ವಿಭಾಗದ ದ್ವಿತೀಯ ವರ್ಷದ ಬಿ.ಟೆಕ್ ವಿದ್ಯಾರ್ಥಿಯಾಗಿದ್ದ ಸಾಹಿಲ್ ರವೀಂದ್ರ ವಾಕೋಡೆ (22), ಶುಕ್ರವಾರ ಸಂಜೆ ಐಐಟಿ ಬಾಂಬೆಯ ಪವಾಯಿ ಕ್ಯಾಂಪಸ್‌ನಲ್ಲಿರುವ ತಮ್ಮ ಹಾಸ್ಟೆಲ್ ಕೊಠಡಿಯಲ್ಲಿ ಮೃತಪಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದ್ದರು. ಸೆಮಿಸ್ಟರ್ ಮಧ್ಯಂತರ ಪರೀಕ್ಷೆಯ ಸಮಯದಲ್ಲಿ ಮೊಬೈಲ್ ಫೋನ್ ಬಳಸುತ್ತಿದ್ದಾಗ ಅವನು ಸಿಕ್ಕಿಬಿದ್ದ ಕೆಲವೇ ಗಂಟೆಗಳಲ್ಲಿ ಈ ಘಟನೆ ನಡೆದಿತ್ತು. ವಿದ್ಯಾರ್ಥಿಯ ಪೋಷಕರು ನೀಡಿದ ದೂರಿನ ಮೇರೆಗೆ, ಪೊಲೀಸರು ಶನಿವಾರ ಭಾರತೀಯ ನ್ಯಾಯ ಸಂಹಿತೆ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದ ಮೇಲೆ ಎಫ್‌ಐಆರ್ ದಾಖಲಿಸಿದ್ದಾರೆ. ಈ ಪ್ರಕರಣದಲ್ಲಿ ಪ್ರೊಫೆಸರ್ ಡೂಲ್ಲಾ ಅವರನ್ನು ಆರೋಪಿಯನ್ನಾಗಿ ಹೆಸರಿಸಲಾಗಿದ್ದು, ಅಪರಾಧ ವಿಭಾಗವು ತನಿಖೆ ನಡೆಸುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ವಿಶ್ವಸಂಸ್ಥೆ ಸಾಮಾನ್ಯ ಸಭೆ ಅಧಿವೇಶನ

**ನ್ಯೂಯಾರ್ಕ್ (ಯುಎಸ್‌ಎ):** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 81ನೇ ಅಧಿವೇಶನದ ಉನ್ನತ ಮಟ್ಟದ ಅಧಿವೇಶನಕ್ಕೆ ತೆರಳಿರುವ ವಿದೇಶಾಂಗ ಸಚಿವ ಎಸ್ ಜೈಶಂಕರ್, ಉನ್ನತ ಮಟ್ಟದ ಅಧಿವೇಶನದ ಸಂದರ್ಭದಲ್ಲಿ ನಡೆದ ಸರಣಿ ದ್ವಿಪಕ್ಷೀಯ ಸಭೆಗಳಲ್ಲಿ ಇತರೆ ದೇಶಗಳ ವಿದೇಶಿ ಸಚಿವರೊಂದಿಗೆ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಚರ್ಚಿಸಿದ್ದಾರೆ. ಸಾಮಾನ್ಯ ಸಭೆಯ 81ನೇ ಅಧಿವೇಶನಕ್ಕಾಗಿ ಭಾರತೀಯ ನಿಯೋಗದ ನೇತೃತ್ವ ವಹಿಸಿರುವ ಜೈಶಂಕರ್ ಭಾನುವಾರ ನ್ಯೂಯಾರ್ಕ್‌ಗೆ ಆಗಮಿಸಿದ್ದು, ಅವರು ಫ್ರಾನ್ಸ್‌ನ ವಿದೇಶಾಂಗ ಸಚಿವ ಜೀನ್ ನೋಯೆಲ್ ಬ್ಯಾರೋಟ್ ಅವರೊಂದಿಗೆ ಸಭೆ ನಡೆಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ನಿಯಮಿತ ಸಭೆಗಳು ಮತ್ತು ದೂರವಾಣಿ ಸಮಾಲೋಚನೆಗಳು, ನಮ್ಮ ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯ ವೇಗವನ್ನು ಕಾಯ್ದುಕೊಳ್ಳಲು ನಮಗೆ ನೆರವಾಗುತ್ತವೆ. ಈ ಸಂದರ್ಭದಲ್ಲಿ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು, ನಿರ್ದಿಷ್ಟವಾಗಿ ಉಕ್ರೇನ್ ಮತ್ತು ಗಲ್ಫ್ ಬಿಕ್ಕಟ್ಟಿನ ಬಗ್ಗೆ ಚರ್ಚಿಸಲಾಯಿತು. ಅಲ್ಲದೆ, ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆ ಸೇರಿದಂತೆ ಬಹುಪಕ್ಷೀಯ ವಿಷಯಗಳ ಕುರಿತಾಗಿಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.



ಏಷ್ಯನ್ ಗೇಮ್ಸ್

# ಸತತ ಎರಡನೇ ಬಾರಿಗೆ ಚಿನ್ನ ಗೆದ್ದ ಭಾರತ

2026ರ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತ ಮಹಿಳಾ ಕ್ರಿಕೆಟ್ ತಂಡ ದೇಶಕ್ಕೆ ಮೊದಲ ಚಿನ್ನದ ಪದಕವನ್ನು ಗೆದ್ದುಕೊಟ್ಟಿದೆ. ನಿಶಿನ್‌ನ ಕೊರೋಗಿ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ನಡೆದಿದ್ದ ಫೈನಲ್ ಪಂದ್ಯದಲ್ಲಿ ಭಾರತ ಮೊದಲು ಬ್ಯಾಟ್ ಮಾಡಿ 217 ರನ್‌ಗಳ ಬೃಹತ್ ಮೊತ್ತವನ್ನು ಕಲೆಹಾಕಿತು. ಇದಕ್ಕೆ ಪ್ರತಿಯಾಗಿ ಶ್ರೀಲಂಕಾ 15.4 ಓವರ್‌ಗಳಲ್ಲಿ 69 ರನ್‌ಗಳಿಗೆ ಆಲೌಟ್ ಆಯಿತು.

ಇದು ಪ್ರಸ್ತುತ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತದ ಮೊದಲ ಚಿನ್ನದ ಪದಕವಾಗಿದೆ. ಇದಕ್ಕೂ ಮೊದಲು, ಭಾರತ ನಾಲ್ಕು ಬೆಳ್ಳಿ ಮತ್ತು ಎರಡು ಕಂಚಿನ ಪದಕಗಳನ್ನು ಗೆದ್ದುಕೊಂಡಿದೆ. ಅಲ್ಲದೆ ಈ ಹಿಂದೆ 2022ರ ಹ್ಯಾಂಗ್‌ಝೌ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತದ ಮಹಿಳಾ ಕ್ರಿಕೆಟ್ ತಂಡವು ಚಿನ್ನದ ಪದಕವನ್ನು ಗೆದ್ದಿತು. ಫೈನಲ್‌ನಲ್ಲಿ ಶ್ರೀಲಂಕಾವನ್ನು 19 ರನ್‌ಗಳಿಂದ ಸೋಲಿಸಿತ್ತು. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ ಶ್ರೀಲಂಕಾವನ್ನು 147 ರನ್‌ಗಳಿಂದ ಸೋಲಿಸಿ ಸತತ ಎರಡನೇ ಬಾರಿಗೆ ಚಿನ್ನಕ್ಕೆ ಕೊರಳೊಡ್ಡಿದೆ.

ಭಾರತ ಹೊರತು ಪಡಿಸಿದ ಶ್ರೀಲಂಕಾ ಬೆಳ್ಳಿ ಪದಕ ಗೆದ್ದರೆ, ಪಾಕಿಸ್ತಾನ ಬಾಂಗ್ಲಾದೇಶವನ್ನು 31 ರನ್‌ಗಳಿಂದ ಸೋಲಿಸುವ ಮೂಲಕ ಕಂಚಿನ ಪದಕ ಗೆದ್ದಿತು.

**ಪಂದ್ಯದ ಹೈಲೈಟ್:** ಹಾಲಿ ಚಾಂಪಿಯನ್ ಭಾರತ ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು. ಸ್ಮೃತಿ ಮಂಧಾನ, ಶಫಾಲಿ ವರ್ಮಾ ಮತ್ತು ರಿಚಾ ಘೋಷ್ ಅವರ ಸ್ಫೋಟಕ ಬ್ಯಾಟಿಂಗ್




ಮೂಲಕ ಮಿಂಚಿದರು. ಸ್ಮೃತಿ ಮಂಧಾನ 45 ಎಸೆತಗಳಲ್ಲಿ 7 ಸಿಕ್ಸರ್ ಮತ್ತು 5 ಬೌಂಡರಿಗಳ ಸಹಾಯದಿಂದ 79 ರನ್ ಗಳಿಸಿದರು. ಇದರೊಂದಿಗೆ ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ 11 ಸಾವಿರ ರನ್‌ಗಳನ್ನು ಪೂರ್ಣಗೊಳಿಸಿದರು. ರಿಚಾ ಘೋಷ್ ಕೇವಲ 22 ಎಸೆತಗಳಲ್ಲಿ 6 ಬೌಂಡರಿ ಮತ್ತು 3 ಸಿಕ್ಸರ್‌ಗಳ ಸಹಾಯದಿಂದ ಅಜೇಯ 49 ರನ್ ಗಳಿಸಿದರು.

ಮತ್ತೊಬ್ಬ ಆರಂಭಿಕ ಆಟಗಾರ್ತಿ ಶಫಾಲಿ ವರ್ಮಾ 29 ಎಸೆತಗಳಲ್ಲಿ 48 ರನ್ ಗಳಿಸಿದರು. ಶೆಫಾಲಿ ತನ್ನ ಇನ್ನಿಂಗ್ಸ್‌ನಲ್ಲಿ 3 ಸಿಕ್ಸರ್ ಮತ್ತು 3 ಬೌಂಡರಿಗಳನ್ನು ಬಾರಿಸಿದರು. ಶಫಾಲಿ ವರ್ಮಾ ಮತ್ತು ಸ್ಮೃತಿ ಮಂಧಾನ ಮೊದಲ ವಿಕೆಟ್‌ಗೆ 99 ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡರು. ಇದರೊಂದಿಗೆ ಏಷ್ಯನ್ ಕ್ರೀಡಾಕೂಟದ ಇತಿಹಾಸದಲ್ಲಿ ಭಾರತ ಗಳಿಸಿದ ಅತ್ಯಧಿಕ ಮೊತ್ತ ಇದಾಯ್ತು. ಶ್ರೀಲಂಕಾ ಪರ ಸುಗಂಧಿಕಾ ಕುಮಾರಿ, ಚಾಮುದಿ ಪ್ರಬೋಧ ಮತ್ತು ಕವಿಶಾ ದಿಲ್ಹಾರಿ ತಲಾ ಒಂದು ವಿಕೆಟ್ ಪಡೆದರು.

**ಭಾರತದ ಬೌಲಿಂಗ್ ದಾಳಿಗೆ ಲಂಕಾ ಉಡೀಸ್:** ಈ ಗುರಿಯನ್ನು ಬೆನ್ನತ್ತಿದ ಶ್ರೀಲಂಕಾ ಪರ ಯಾವುದೇ ಬ್ಯಾಟರ್‌ಗಳ ಭಾರತದ ಬೌಲಿಂಗ್ ದಾಳಿಯನ್ನು ಸಮರ್ಥವಾಗಿ ಎದುರಿಸಲು ಸಾಧ್ಯವಾಗ 217 ರನ್ ಗಳ ಬೃಹತ್ ಗುರಿಯನ್ನು ಬೆನ್ನಟ್ಟಿದ ಶ್ರೀಲಂಕಾ ತಂಡವು ಭಾರತದ ಬೌಲಿಂಗ್ ಸಿಲುಕಿ ನಲುಗಿತು. ಇಡೀ ಶ್ರೀಲಂಕಾ ತಂಡವು 100 ರನ್ ಗಳ ಗಡಿ ತಲುಪಲು ಸಹ ಸಾಧ್ಯವಾಗಲಿಲ್ಲ ಮತ್ತು ಕೇವಲ 69 ರನ್ ಗಳಿಗೆ ಆಲೌಟ್ ಆಯಿತು. ತಂಡದ ಪರ ಚಮಾರಿ ಅಟಪಟ್ಟು ಮಾತ್ರ 29 ರನ್‌ಗಳಿಸಿ ಗರಿಷ್ಠ ಸ್ಕೋರರ್ ಎನಿಸಿಕೊಂಡು.

ಭಾರತದ ಪರ ಬೌಲಿಂಗ್‌ನಲ್ಲಿ ಆಫ್-ಸ್ಪಿನ್ನರ್ ದೀಪ್ತಿ ಶರ್ಮಾ ಯಶಸ್ವಿ ಬೌಲರ್ ಎನಿಸಿಕೊಂಡರು, 4 ಓವರ್ ಗಳಲ್ಲಿ ಕೇವಲ 6 ರನ್ ಗಳಿಗೆ 3 ವಿಕೆಟ್ ಕಬಳಿಸಿದರು. ಅದೇ ಸಮಯದಲ್ಲಿ, ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದ ಶೆಫಾಲಿ ವರ್ಮಾ, ಬೌಲಿಂಗ್ ನಲ್ಲೂ ಮಿಂಚಿದರು 2 ಓವರ್ ಗಳಲ್ಲಿ ಕೇವಲ 3 ರನ್ ಗಳಿಗೆ 2 ವಿಕೆಟ್ ಕಬಳಿಸಿದರು. ಇದಲ್ಲದೆ, ಶ್ರೀ ಚರಣಿ ಮತ್ತು ಶ್ರೇಯಾಂಕ ಪಾಟೀಲ್ ಸಹ ತಲಾ 2 ವಿಕೆಟ್ ಪಡೆದರು.

# ಕಬಡ್ಡಿಯಲ್ಲಿ ಕೊರಿಯಾವನ್ನು 32 ಅಂಕಗಳಿಂದ ಮಣಿಸಿದ ಭಾರತ

ಪ್ರಸ್ತುತ ನಡೆಯುತ್ತಿರುವ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ಕಬಡ್ಡಿ ತಂಡವು ತನ್ನ ಅದ್ಭುತ ಪ್ರದರ್ಶನವನ್ನು ಮುಂದುವರಿಸಿದೆ. ನಡೆದಿದ್ದ ಪಂದ್ಯದಲ್ಲಿ ದಕ್ಷಿಣ ಕೊರಿಯಾವನ್ನು 63-31 ಅಂತರದಿಂದ ಸೋಲಿಸಿದೆ. ಟೋಕೈ ಸಿಟಿಜನ್ಸ್ ಜಿಮ್ನಾಷಿಯಂನಲ್ಲಿ ನಡೆದ ಗ್ರೂಪ್ ಎ ಪಂದ್ಯದಲ್ಲಿ ಭಾರತವು 32 ಅಂಕಗಳ ಅಂತರದಿಂದ ಗೆಲುವು ಸಾಧಿಸಿತು. ಇದರೊಂದಿಗೆ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತ ಸತತ ಎರಡನೇ ಗೆಲುವು ದಾಖಲಿಸಿತು. ಇದಕ್ಕೂ ಮೊದಲು ಆತಿಥೇಯ ಜಪಾನ್ ತಂಡವನ್ನು 25 ಅಂಕಗಳ ಅಂತರದಿಂದ ಸೋಲಿಸಿತು. ಆದಾಗ್ಯೂ, ಕೊರಿಯಾ ವಿರುದ್ಧ, ಸುನಿಲ್ ಕುಮಾರ್ ನೇತೃತ್ವದ ಭಾರತ ತಂಡ ನಿರಾಯಸವಾಗಿ ಗೆದ್ದುಕೊಂಡಿತು.

**ಮೊದಲಾರ್ಧದಿಂದಲೇ ಪ್ರಾಬಲ್ಯ ಸಾಧಿಸಿದ ಭಾರತ:** ಪಂದ್ಯದುದ್ದಕ್ಕೂ ಭಾರತೀಯ ರೈಡರ್‌ಗಳು ಅದ್ಭುತ ಪ್ರದರ್ಶನ ನೀಡಿ 38 ಅಂಕಗಳನ್ನು ಗಳಿಸಿದರೆ, ಕೊರಿಯನ್ ರೈಡರ್‌ಗಳು ಕೇವಲ 23 ಅಂಕಗಳನ್ನು ಗಳಿಸುವಲ್ಲಿ ಯಶಸ್ವಿಯಾದರು. ಕೊರಿಯನ್ ದಾಳಿಯನ್ನು ಭಾರತದ ಡಿಫೆಂಡರ್‌ಗಳು ಹಿಮ್ಮೆಟ್ಟಿಸಿದರು. ಇದರಿಂದಾಗಿ ಭಾರತ ಮೊದಲಾರ್ಧದಲ್ಲಿ 34-14 ಅಂಕಗಳನ್ನು ಗಳಿಸಿ 20 ಅಂಕಗಳ ಮುನ್ನಡೆ ಸಾಧಿಸಿತು. ಕೊರಿಯಾವನ್ನು ಎರಡು ಬಾರಿ ಆಲೌಟ್ ಮಾಡಿ ಏಳು ಬೋನಸ್ ಅಂಕಗಳನ್ನು ಸಹ ಗಳಿಸಿತು. ಭಾರತದ ರಕ್ಷಣೆ ಮತ್ತು ಆಕ್ರಮಣಕಾರಿ ಆಟಕ್ಕೆ ಕೊರಿಯಾ ತಂಡ ಚೇತರಿಸಿಕೊಳ್ಳಲು ಸಾಧ್ಯವಾಗಲಿಲ್ಲ.



ಮೊದಲಾರ್ಧದಲ್ಲಿ ಭಾರತದ ಬಲವಾದ ರಕ್ಷಣೆಯ ವಿರುದ್ಧ ಕೊರಿಯಾದ ರೈಡರ್‌ಗಳು ಅಂಕಗಳಿಸಲು ಹೋರಾಡಿದರು, ವಿರಾಮದ ಮೊದಲು ಕೇವಲ 10 ಅಂಕಗಳನ್ನು ಮಾತ್ರ ಗಳಿಸಿದರು.

ನಂತರ ದ್ವಿತೀಯಾರ್ಧದಲ್ಲಿ ಕೊರಿಯಾ ತನ್ನ ಆಟವನ್ನು ಸುಧಾರಿಸಿಕೊಂಡಿತು, ಆದರೆ ಪಂದ್ಯ ಗೆಲ್ಲಲು ಸಾಧ್ಯವಾಗಲಿಲ್ಲ. ಭಾರತವು ದ್ವಿತೀಯಾರ್ಧದಲ್ಲಿ 29 ಅಂಕಗಳನ್ನು ಗಳಿಸಿತು, ಇದರಲ್ಲಿ ಆಲ್ ಔಟ್ ಸಹ ಸೇರಿತ್ತು. ಇದಲ್ಲದೆ, ಪಂದ್ಯದಲ್ಲಿ ಭಾರತ ಒಟ್ಟು 17 ಬೋನಸ್ ಅಂಕಗಳನ್ನು ಗಳಿಸಿತು.

ಈ ಗೆಲುವಿನೊಂದಿಗೆ ಭಾರತ ತನ್ನ ಗುಂಪಿನಲ್ಲಿ ಅಗ್ರಸ್ಥಾನ ತಲುಪಿದೆ. ಜಪಾನ್ ಮತ್ತು ಕೊರಿಯಾವನ್ನು ಸೋಲಿಸಿ ಸುನಿಲ್ ಕುಮಾರ್ ನೇತೃತ್ವದ ತಂಡ ಬುಧವಾರ ಬಾಂಗ್ಲಾದೇಶವನ್ನು ಎದುರಿಸಲಿದೆ. ಭಾರತೀಯ ಪುರುಷರ ಕಬಡ್ಡಿ ತಂಡವು ಒಂಬತ್ತನೇ ಚಿನ್ನದ ಪದಕವನ್ನು ಗೆಲ್ಲುವ ಗುರಿಯನ್ನು ಹೊಂದಿದೆ. ಏಷ್ಯನ್ ಗೇಮ್ಸ್‌ನಲ್ಲಿ ಕಬಡ್ಡಿ ಇತಿಹಾಸದಲ್ಲಿ ಭಾರತವು ಅತ್ಯಂತ ಯಶಸ್ವಿ ತಂಡವಾಗಿದೆ, ಇದುವರೆಗೆ ನಡೆದ 13 ಪಂದ್ಯಾವಳಿಗಳಲ್ಲಿ 11 ಬಾರಿ ಚಿನ್ನದ ಪದಕವನ್ನು ಗೆದ್ದಿದೆ. ಪುರುಷರ ತಂಡವು ಒಂಬತ್ತು ಬಾರಿ ಚಿನ್ನ ಗೆದ್ದಿದೆ, 2018 ರ ಜಕಾರ್ತಾದಲ್ಲಿ ಮಾತ್ರ ಸೋತು ಕಂಚಿಗೆ ತೃಪ್ತಿಪಟ್ಟಿದೆ. ಮಹಿಳಾ ತಂಡವು ನಾಲ್ಕರಲ್ಲಿ ಮೂರು ಬಾರಿ ಚಿನ್ನ ಗೆದ್ದಿದೆ, 2018 ರಲ್ಲಿ ಬೆಳ್ಳಿ ಗೆದ್ದಿದೆ. ಐಚಿ-ನಗೋಯಾದಲ್ಲಿ ನಡೆಯುತ್ತಿರುವ ಪುರುಷರ ಕಬಡ್ಡಿ ಪಂದ್ಯಾವಳಿಯಲ್ಲಿ 10 ತಂಡಗಳು ಭಾಗವಹಿಸಿದ್ದು 5 ತಂಡಗಳನ್ನು ಒಳಗೊಂಡ ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಭಾರತವು ಬಾಂಗ್ಲಾದೇಶ, ಕೊರಿಯಾ ಗಣರಾಜ್ಯ, ಚೈನೀಸ್ ತೈಪೆ ಮತ್ತು ಜಪಾನ್ ತಂಡಗಳೊಂದಿಗೆ 'ಎ' ಗುಂಪಿನಲ್ಲಿ ಸ್ಥಾನ ಪಡೆದಿದೆ. ಬಿ ಗುಂಪಿನಲ್ಲಿ ಇರಾನ್, ನೇಪಾಳ, ಥೈಲ್ಯಾಂಡ್, ಪಾಕಿಸ್ತಾನ ಮತ್ತು ಮಲೇಷ್ಯಾ ತಂಡಗಳಿವೆ. ರೌಂಡ್-ರಾಬಿನ್ ಪಂದ್ಯಗಳ ನಂತರ, ಪ್ರತಿ ಗುಂಪಿನಿಂದ ಅಗ್ರ ಎರಡು ತಂಡಗಳು ಸೆಮಿಫೈನಲ್‌ಗೆ ಮುನ್ನಡೆಯುತ್ತವೆ. ಕಂಚಿನ ಪದಕಕ್ಕಾಗಿ ಯಾವುದೇ ಪಂದ್ಯ ಇರುವುದಿಲ್ಲ. ಸೆಮಿಫೈನಲ್ ಸೋತ ತಂಡಕ್ಕೆ ಕಂಚು ಸಿಗಲಿದೆ.

20th Asian Games
Aichi-Nagoya 2026



# "ಬೇಲ್" ಟೀಸರ್ ರಿಲೀಸ್

ಡಾ.ಶಿವರಾಜ್‌ಕುಮಾರ್ ಅಭಿಮಾನಿಗಳು ಬಹಳ ಕಾತರದಿಂದ ಕಾಯುತ್ತಿದ್ದ ಬಹುನಿರೀಕ್ಷಿತ ಆಕ್ಷನ್ ಡ್ರಾಮಾ ಬೇಲ್ ನ ಅಧಿಕೃತ ಟ್ರೇಲರ್ ಅಂತಿಮವಾಗಿ ಅನಾವರಣಗೊಂಡಿದೆ. ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಾಣದ ಈ ಸಿನಿಮಾದ ಟ್ರೇಲರ್ ಪೊಲೀಸ್ ಆಕ್ಷನ್, ನ್ಯಾಯಕ್ಕಾಗಿ ಹೋರಾಟ, ರೋಚಕ ಸಂಘರ್ಷ ಮತ್ತು ತೀವ್ರ ಭಾವನಾತ್ಮಕ ಮುಖಾಮುಖಿಗಳ ಝಲಕ್ ಸಿನಿಪ್ರಿಯರ ಮುಂದಿಟ್ಟಿದೆ. ಹೈ-ವೋಲ್ಟೇಜ್ ಸಿನಿಮಾ ಬಿಡುಗಡೆಗೆ ಸಜ್ಜಾಗಿದೆ. ಶಿವರಾಜ್‌ಕುಮಾರ್ ಅವರ ಗಂಭೀರ ಸ್ಕ್ರೀನ್ ಪ್ರೆಸೆನ್ಸ್, ಅಬ್ಬರದ ಪೊಲೀಸ್ ಅವತಾರ ಹಾಗೂ ರೋಮಾಂಚಕ ದೃಶ್ಯ ವೈಭವದಿಂದಾಗಿ ಟ್ರೇಲರ್ ಬಿಡುಗಡೆಯಾದ ಕೆಲವೇ ಕ್ಷಣಗಳಲ್ಲಿ ಆನ್‌ಲೈನ್‌ನಲ್ಲಿ ಭಾರಿ ಸದ್ದು ಮಾಡಿದೆ. ಸಿನಿಪ್ರಿಯರಲ್ಲಿ ಚಿತ್ರದ ಮೇಲಿನ ನಿರೀಕ್ಷೆಯನ್ನು ಮುಗಿಲೆತ್ತರಕ್ಕೆ ಕೊಂಡೊಯ್ದಿದೆ. ಟ್ರೇಲರ್ ವೀಕ್ಷಿಸಿದವರು ತಮ್ಮ ಮೆಚ್ಚುಗೆ ವ್ಯಕ್ತಪಡಿಸಿದ್ದು, ಕನ್ನಡ ಚಿತ್ರರಂಗಕ್ಕೆ ಮತ್ತೊಂದು ಹಿಟ್ ಪಕ್ಕಾ ಎಂದು ತಮ್ಮ ಭರವಸೆ ವ್ಯಕ್ತಪಡಿಸಿದ್ದಾರೆ.

ಚಿತ್ರದಲ್ಲಿ ಶಿವರಾಜ್‌ಕುಮಾರ್ ದೃಢನಿಶ್ಚಯದ, ಕಟ್ಟುನಿಟ್ಟಿನ ಹಾಗೂ ನಿರ್ಭೀತ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಅಬ್ಬರಿಸಿದ್ದಾರೆ. ಅಪರಾಧ ಮತ್ತು ನ್ಯಾಯದ ನಡುವಿನ ಜಟಿಲ ಜಗತ್ತಿನಲ್ಲಿ ಎದುರಾಗುವ ಯಾವುದೇ ಆಪತ್ತಿಗೂ ಅಂಜದೇ ಧೈರ್ಯವಾಗಿ ನಿಲ್ಲುವ ಖಡಕ್ ಅಧಿಕಾರಿಯಾಗಿ ಅವರು ಕಾಣಿಸಿಕೊಂಡಿದ್ದಾರೆ.

ಬೇಲ್, ಕೇವಲ ಪೊಲೀಸ್ ವರ್ಸಸ್ ಕ್ರಿಮಿನಲ್ ನಡುವಿನ ಕಥೆಯಾಗಷ್ಟೇ ಉಳಿಯದೇ, ಕೌಟುಂಬಿಕ ಭಾವನಾತ್ಮಕ ತಿರುಳನ್ನು ಹೊಂದಿದ್ದು ಚಿತ್ರದ ಮತ್ತೊಂದು ಪ್ರಮುಖ ಹೈಲೈಟ್. ಎಲ್ಲಾ ವರ್ಗದ ಪ್ರೇಕ್ಷಕರಿಗೂ ಚಿತ್ರ ಹತ್ತಿರವಾಗುವ ಲಕ್ಷಣಗಳಿವೆ. ಯಶಸ್ವಿ ನಿರ್ದೇಶಕ ಪವನ್ ಒಡೆಯರ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದು, ದಕ್ಷಿಣ ಭಾರತದ ಬೃಹತ್ ವೆಚ್ಚದ ಸಿನಿಮಾಗಳ ಮೂಲಕ ಗಮನ ಸೆಳೆದಿರುವ ಕೆವಿಎನ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿ ವೆಂಕಟ್ ಕೆ.ನಾರಾಯಣ್ ಅವರು ಈ ಚಿತ್ರವನ್ನು ಅದ್ಧೂರಿಯಾಗಿ ನಿರ್ಮಿಸಿದ್ದಾರೆ.

ಚಿತ್ರದ ತಾರಾಗಣದಲ್ಲಿ ಬಹುದೊಡ್ಡ ಪ್ರತಿಭೆಗಳ ದಂಡೇ ಇದೆ. ಶಿವರಾಜ್ ಕುಮಾರ್ ಅವರಿಗೆ ಸಾಥ್ ನೀಡಲು ಡೈಲಾಗ್ ಕಿಂಗ್ ಸಾಯಿಕುಮಾರ್, ಬಹುಭಾಷಾ ನಟ ಜಯರಾಮ್, ಲೂಸ್ ಮಾದ ಯೋಗೇಶ್, ದೀಕ್ಷಿತ್ ಶೆಟ್ಟಿ ಹಾಗೂ ನಟಿ ಸಂಜನಾ ಆನಂದ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಪ್ರತೀ ಪಾತ್ರಕ್ಕೂ ಕಥೆಯಲ್ಲಿ ಸಮಾನ ತೂಕವಿದ್ದು, ಪಾತ್ರಗಳ ನಡುವಿನ ಸಂಘರ್ಷದ ಸಣ್ಣ ತುಣುಕುಗಳು ಟ್ರೇಲರ್‌ನ ವೇಗ ಮತ್ತು ರೋಚಕತೆಯನ್ನು ಹೆಚ್ಚಿಸಿವೆ. ಸುಮಾರು ಎರಡೂವರೆ ನಿಮಿಷಗಳ ಈ ಟ್ರೇಲರ್‌ಗೆ ಚುರುಕಾದ ಸಂಕಲನ, ಪವರ್‌ಫುಲ್ ಸಂಭಾಷಣೆಗಳು ಮತ್ತು ಖ್ಯಾತ ಸಂಗೀತ ನಿರ್ದೇಶಕ ಬಿ.ಅಜನೀಶ್ ಲೋಕನಾಥ್ ಅವರ ಹಿನ್ನೆಲೆ ಸಂಗೀತ ಜೀವ ತುಂಬಿದೆ. ಖ್ಯಾತ ಸರಿಗಮ ಸೌತ್ ಸಂಸ್ಥೆಯು ಚಿತ್ರದ ಆಡಿಯೋ ಹಕ್ಕುಗಳನ್ನು ಪಡೆದುಕೊಂಡಿದ್ದು, ದೊಡ್ಡ ಮಟ್ಟದ ಪ್ರಚಾರ ಅಭಿಯಾನಕ್ಕೆ ಕೈಜೋಡಿಸಿದೆ. ಒಟ್ಟಾರೆಯಾಗಿ, ಶಿವಣ್ಣನ ಖಡಕ್ ಖಾಕಿ ಅವತಾರ ಹಾಗೂ ಭರ್ಜರಿ ಮಾಸ್-ಎಮೋಷನಲ್ ಡ್ರಾಮಾವನ್ನು ಹೊತ್ತು ತರುತ್ತಿರುವ 'ಬೇಲ್' ಅಕ್ಟೋಬರ್ 2 ರಂದು ಬೆಳ್ಳಿತೆರೆಗೆ ಬರಲು ಸಂಪೂರ್ಣ ಸಜ್ಜಾಗಿದೆ.

# ಸೆಟ್ಟೇರಿತು ಪಿ.ಲಂಕೇಶ್ ಮೊಮ್ಮಗಳ ಚೊಚ್ಚಲ ಚಿತ್ರ

ಸಂಬಂಧಗಳ ಸೂಕ್ಷ್ಮತೆ, ಮಾನವೀಯ ಭಾವನೆಗಳು ಮತ್ತು ಬದಲಾಗುತ್ತಿರುವ ಬದುಕಿನ ಆಯಾಮಗಳನ್ನು ತಮ್ಮದೇ ಆದ ಸರಳ ಹಾಗೂ ಭಾವನಾತ್ಮಕ ನಿರೂಪಣಾ ಶೈಲಿಯ ಮೂಲಕ ಕಟ್ಟಿಕೊಡುವ ನಿರ್ದೇಶಕ ಪ್ರೀತಮ್ ಗುಬ್ಬಿ ಅವರ ಹೊಸ ಚಿತ್ರ ನಾಗರಭಾವಿಯ ಹನುಮಂತ ದೇವಸ್ಥಾನದಲ್ಲಿ ಸೆಟ್ಟೇರಿದೆ. ಈ ಪ್ರಾಜೆಕ್ಟ್‌ನ ಶೀರ್ಷಿಕೆ ಮೈ ಬೇಬಿ.

ಸಿನಿಮಾ ಸೆಟ್ಟೇರುವ ಮೊದಲೇ ತನ್ನ ಡೈರೆಕ್ಟರ್ ಹಾಗೂ ಸ್ಟಾರ್ ಕಾಸ್ಟ್ ಸಲುವಾಗಿ ಸಾಕಷ್ಟು ಸದ್ದು ಮಾಡಿತ್ತು. ಹೌದು, ಖ್ಯಾತ ಪತ್ರಕರ್ತ, ದಿವಂಗತ ಲೇಖಕ ಪಿ. ಲಂಕೇಶ್ ಅವರ ಮೊಮ್ಮಗಳು ಇಶಾ ಲಂಕೇಶ್ ನಾಯಕಿಯಾಗಿ ಈ ಚಿತ್ರದ ಮೂಲಕ ಚಂದನವನದಲ್ಲಿ ತಮ್ಮ ನಟನಾ ಪ್ರಯಾಣ ಆರಂಭಿಸಲು ಸಜ್ಜಾಗಿದ್ದಾರೆ. ಮನದ ಕಡಲು ಮೂಲಕ ಅಭಿಮಾನಿಗಳ ಮನಗೆದ್ದಿರುವ ಸುಮುಖ ಚಿತ್ರದ ನಾಯಕರಾಗಿದ್ದಾರೆ.

**ಗಣೇಶ್ ಮೊದಲ ಕ್ಲ್ಯಾಪ್:** ಸುಮುಖ ಮತ್ತು ಇಶಾ ಲಂಕೇಶ್ ತೆರೆಹಂಚಿಕೊಳ್ಳುತ್ತಿರುವ ಈ ಬಹುನಿರೀಕ್ಷಿತ ಚಿತ್ರಕ್ಕೆ ಗೋಲ್ಡನ್ ಸ್ಟಾರ್ ಗಣೇಶ್ ಮೊದಲ ಕ್ಲ್ಯಾಪ್ ಮಾಡುವ ತಮ್ಮ ಸಾಥ್ ನೀಡಿದ್ದಾರೆ. ಹೊಸ ತಲೆಮಾರಿನ ಪ್ರೀತಿ ಮತ್ತು ಸಂಬಂಧಗಳ ಸುತ್ತ ಈ ಸಿನಿಮಾ ಸಾಗಲಿದೆ.

**ಇಂದಿನ ತಲೆಮಾರಿನ ಸಂಬಂಧಗಳ ಸುತ್ತ ಸಾಗುವ ಸಿನಿಮಾ:** ಪ್ರೀತಿಗೆ ಕಾಲಾತೀತವಾದ ಒಂದು ಭಾವವಿದ್ದರೂ, ಅದನ್ನು ಬದುಕುವ ರೀತಿ ಪ್ರತೀ ತಲೆಮಾರಿನಲ್ಲೂ ಬದಲಾಗುತ್ತಲೇ ಇರುತ್ತದೆ. ಇಂದಿನ ತಲೆಮಾರಿನ ಸ್ವಾತಂತ್ರ್ಯ, ವೈಯಕ್ತಿಕ ಆಯ್ಕೆಗಳು ಮತ್ತು ಸಂಬಂಧಗಳ ಕುರಿತ ಹೊಸ ದೃಷ್ಟಿಕೋನವನ್ನು ಮೈ ಬೇಬಿ ತನ್ನ ವಿಭಿನ್ನ ಕಥೆಯ ಮೂಲಕ ತೆರೆದಿಡುತ್ತದೆ.

## ಇಂದಿನ ಪ್ರೇಮಕಥೆಗೆ ಗೋಲ್ಡನ್ ಸ್ಟಾರ್‌ನಿಂದ ಮೊದಲ ಕ್ಲ್ಯಾಪ್; ಟೈಟಲ್ ಏನು?



"ಇಂದಿನ ಯುವಜನರ ಬದುಕಿನಲ್ಲಾಗಿರುವ ಬದಲಾವಣೆ ಈ ಚಿತ್ರದ ಪ್ರಮುಖ ಅಂಶ. ಹಿಂದಿನ ಪೀಳಿಗೆಗಳಿಗೆ ಹೋಲಿಸಿದರೆ ಇಂದಿನ ತಲೆಮಾರು ಹೆಚ್ಚು ಸ್ವತಂತ್ರವಾಗಿ, ತಮ್ಮದೇ ನಿರ್ಧಾರಗಳ ಬಗ್ಗೆ ಸ್ಪಷ್ಟತೆಯಿಂದ ಬದುಕುತ್ತಿದೆ. ಸಂಬಂಧಗಳಲ್ಲಿಯೂ ವೈಯಕ್ತಿಕ ಸ್ವಾತಂತ್ರ್ಯ ಮತ್ತು ತಮ್ಮದೇ ಬದುಕಿನ ಅರ್ಥವನ್ನು ಹುಡುಕುವ ಮನೋಭಾವ ಹೆಚ್ಚಾಗಿದೆ". "ಇಂದಿನ ತಲೆಮಾರು ಹೆಚ್ಚು ಸ್ವಾವಲಂಬಿ. ತಮ್ಮ ಬದುಕಿನ ಬಗ್ಗೆ ಅವರಿಗೆ ಹೆಚ್ಚು ಸ್ಪಷ್ಟತೆ ಇದೆ. ಹಿಂದಿನ ಪೀಳಿಗೆಯವರಿಗಿದ್ದ ಕೆಲವು ಬಂಧಗಳು ಮತ್ತು ಅವಲಂಬನೆಗಳು ಇವರಲ್ಲಿ ಕಡಿಮೆ. ಮೈ ಬೇಬಿ ಅಂತಹ ಇಬ್ಬರು ವ್ಯಕ್ತಿಗಳ ಕಥೆ. ಅವರು ಒಟ್ಟಿಗೆ ಸಾಗುವ ಪಯಣದಲ್ಲಿ ಬದುಕನ್ನು, ಪ್ರೀತಿಯನ್ನು ಹೊಸ ರೀತಿಯಲ್ಲಿ ಅರ್ಥಮಾಡಿಕೊಳ್ಳುತ್ತಾರೆ" ಎಂದು ನಿರ್ದೇಶಕ ಪ್ರೀತಂ ಗುಬ್ಬಿ ತಿಳಿಸಿದ್ದಾರೆ. ಚಿತ್ರದಲ್ಲಿ ಪ್ರೀತಿ ಕೇವಲ ಇಬ್ಬರು ವ್ಯಕ್ತಿಗಳ ನಡುವಿನ ಸಂಬಂಧಕ್ಕೆ ಸೀಮಿತವಾಗುವುದಿಲ್ಲ. ಒಟ್ಟಿಗೆ ಬದುಕಿನ ಪಯಣವನ್ನು ಕೈಗೊಳ್ಳುವಾಗ ಅವರ ಆಯ್ಕೆಗಳು, ಬದಲಾಗುವ ದೃಷ್ಟಿಕೋನಗಳು ಮತ್ತು ಪರಸ್ಪರರನ್ನು ಅರ್ಥಮಾಡಿಕೊಳ್ಳುವ ಪ್ರಯತ್ನವೇ ಕಥೆಯ ಭಾವನಾತ್ಮಕ ಹೂರಣ.

> ಪ್ರತೀ ತಲೆಮಾರಿನಲ್ಲೂ ಪ್ರೀತಿಯನ್ನು ಹೊಸ ರೀತಿಯಲ್ಲಿ ಹೇಳಬೇಕಾಗುತ್ತದೆ. ಪ್ರೀತಿಯ ಮೂಲಭಾವ ಒಂದೇ ಆಗಿದ್ದರೂ, ಪ್ರತೀ ಪೀಳಿಗೆಯ ಬದುಕಿನ ಸಂದರ್ಭಗಳು, ಸಂಘರ್ಷಗಳು ಮತ್ತು ಸಮಸ್ಯೆಗಳು ಬದಲಾಗುತ್ತವೆ. ಆ ಬದಲಾವಣೆಯನ್ನು ಕಥೆಗಳು ಗುರುತಿಸಬೇಕು.
> – ನಿರ್ದೇಶಕ ಪ್ರೀತಮ್ ಗುಬ್ಬಿ

ಚಿತ್ರದ ಚಿತ್ರೀಕರಣ ಹಿಮಾಚಲ ಪ್ರದೇಶ ಮತ್ತು ಬೆಂಗಳೂರಿನಲ್ಲಿ ನಡೆಯಲಿದೆ. ಕಥೆಯಲ್ಲಿನ ನಾಯಕ-ನಾಯಕಿಯ ಪಯಣಕ್ಕೆ ಈ ಎರಡು ವಿಭಿನ್ನ ಪರಿಸರಗಳು ವಿಶೇಷ ಆಯಾಮ ನೀಡಲಿವೆ.

ಹೊಸ ತಲೆಮಾರಿನ ಪ್ರೀತಿ ಮತ್ತು ಸಂಬಂಧಗಳನ್ನು ಅವರದೇ ಬದುಕಿನ ಭಾಷೆಯಲ್ಲಿ ಹೇಳುವ ಮೈ ಬೇಬಿ, ಸಾರ್ವಕಾಲಿಕವಾದ ಪ್ರೀತಿಯ ಭಾವನೆಯನ್ನು ಸಮಕಾಲೀನ ಅನುಭವಗಳೊಂದಿಗೆ ಜೋಡಿಸುವ ಪ್ರಯತ್ನವಾಗಿದೆ.

ಚಿತ್ರಕ್ಕೆ ಅಭಿಲಾಷ್ ಕಲಾತಿ ಛಾಯಾಗ್ರಹಣವಿರಲಿದ್ದು, ನಕುಲ್ ಅಭ್ಯಂಕರ್ ಸಂಗೀತ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ನಿಧಿ ಫಿಲ್ಮ್ಸ್ ಪ್ರೊಡಕ್ಷನ್ಸ್ ಬ್ಯಾನರ್‌ನಡಿ ರಂಗನಾಥ್ ಕೆಂಪನಹಳ್ಳಿ ಮತ್ತು ಅಥರ್ವ್ ಆರ್.ಕೆಂಪನಹಳ್ಳಿ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

## ಹ್ಯಾಟ್ರಿಕ್ ಹೀರೋನ ಸ್ಕ್ರೀನ್ ಪ್ರೆಸೆನ್ಸ್‌ಗೆ ಫ್ಯಾನ್ಸ್ ಫಿದಾ; ಮತ್ತೊಂದು ಹಿಟ್ ಪಕ್ಕಾ ಎಂದ ಕನ್ನಡಿಗರು

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper. udayavahini.in www.udayavahini.in Udaya vahini news Udaya vahini news